

Volume : 9 | Issue : 212 | November : 13, 2026 : Friday
ಸಂಪುಟ : 9 | ಸಂಚಿಕೆ : 212 | ನವಂಬರ್ : 13, 2026 : ಶುಕ್ರವಾರ

www.VIKRAMAVAHINI.com

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||

VIKRAMA VAHINI
PRGI NO: KARKAN/2018/78481



ಇತ್ತೀಚೆಗೆ ತೆರೆಕಂಡ 'ಟಾಕ್ಸಿಕ್' ಚಿತ್ರದಲ್ಲಿನ ದೃಶ್ಯಗಳ ಬಗ್ಗೆ ಮೊದಲ ಬಾರಿಗೆ ಮಾತನಾಡಿರುವ ನಟಿ ಕಿಯಾರಾ ಆಡ್ವಾಣಿ, ಆ ದೃಶ್ಯಗಳಿಂದ ತನ್ನ ಪತಿಗೆ ಬೇಸರವಾಗಿಲ್ಲ ಎಂದು ಪ್ರತಿಕ್ರಿಯಿಸಿದ್ದಾರೆ. ಟಾಕ್ಸಿಕ್‌ನ 'ತಬಾಹಿ' ಹಾಡಿನ ದೃಶ್ಯಗಳು ಸಾಕಷ್ಟು ವಿವಾದ ಹುಟ್ಟುಹಾಕಿತ್ತು.

'ಮೆಟ್ರೊ ವಿಚಾರದಲ್ಲಿ ರಾಜ್ಯ ಸರ್ಕಾರದ ಕುಚೇಷ್ಟೆ' ಪುಟ 4

ಸರ್ಕಾರಿ ಆಸ್ಪತ್ರೆಗಳ ವೈದ್ಯರು ಕೇಂದ್ರ ಸ್ಥಾನದಲ್ಲೇ ವಾಸವಿರುವುದು ಕಡ್ಡಾಯ ಪುಟ 2

■ ಸುದ್ದಿ ಚುಟುಕು

ಹಾಸನಾಂಬೆ ದೇಗುಲಕ್ಕೆ 29.55 ಕೋಟಿ ರೂ. ಆದಾಯ

● ವಿಕ್ರಮ ವಾಹಿನಿ । ಹಾಸನ

ಹಾಸನಾಂಬೆ ದರ್ಶನೋತ್ಸವ ಮುಕ್ತಾಯಗೊಂಡ ಬೆನ್ನಲ್ಲೇ ದೇವಾಲಯದ ಹುಂಡಿ ಹಣ ಎಣಿಕೆ ಕಾರ್ಯ ನಡೆದಿದ್ದು, ಈ ಬಾರಿ ಒಟ್ಟು 29.55 ಕೋಟಿ ರೂಪಾಯಿ ಆದಾಯ ಸಂಗ್ರಹವಾಗಿದೆ.

ಹುಂಡಿ ಕಾಣಿಕೆಯಿಂದ 3.71 ಕೋಟಿ ರೂಪಾಯಿ ಹಾಗೂ ಟಿಕೆಟ್ ಮತ್ತು ಲಡ್ಡು ಪ್ರಸಾದ ಮಾರಾಟದಿಂದ 25.82 ಕೋಟಿ ರೂಪಾಯಿ ಆದಾಯ ಬಂದಿದೆ.

ಕಳೆದ ವರ್ಷಕ್ಕೆ ಹೋಲಿಸಿದರೆ ಈ ಬಾರಿ ದೇವಾಲಯದ ಆದಾಯದಲ್ಲಿ ಸುಮಾರು 4 ಕೋಟಿ ರೂಪಾಯಿ ಹೆಚ್ಚಳವಾಗಿದೆ ಎಂದು ದೇವಾಲಯದ ಆಡಳಿತಾಧಿಕಾರಿ ಜಗದೀಶ್ ಗಂಗಣ್ಣನವರ್ ತಿಳಿಸಿದ್ದಾರೆ.

2025ರಲ್ಲಿ ಎಲ್ಲ ಮೂಲಗಳಿಂದ ಒಟ್ಟು 25.59 ಕೋಟಿ ರೂಪಾಯಿ ಸಂಗ್ರಹವಾಗಿತ್ತು.

ಆದರೆ 2026ರಲ್ಲಿ ಆದಾಯ 29.55 ಕೋಟಿ ರೂಪಾಯಿಗೆ ಏರಿಕೆಯಾಗಿದೆ. ಈ ಬಾರಿ ಹಾಸನಾಂಬೆ ದರ್ಶನಕ್ಕೆ ಭಕ್ತರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದ್ದು, ಕಳೆದ ವರ್ಷಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸಿದ್ದಾರೆ.

30.06 ಲಕ್ಷ ಭಕ್ತರಿಂದ ದರ್ಶನ

2025ರಲ್ಲಿ 25.36 ಲಕ್ಷ ಭಕ್ತರು ಹಾಸನಾಂಬೆಯ ದರ್ಶನ ಪಡೆದಿದ್ದರೆ, 2026ರಲ್ಲಿ 30.06 ಲಕ್ಷ ಭಕ್ತರು ದೇವಿಯ ದರ್ಶನ ಪಡೆದಿದ್ದಾರೆ. ಭಕ್ತರು ದೇವಿಗೆ 43 ಗ್ರಾಂ ಚಿನ್ನಾಭರಣ ಹಾಗೂ 1 ಕೆ.ಜಿ. 255 ಗ್ರಾಂ ಬೆಳ್ಳಿಯ ಆಭರಣಗಳನ್ನು ಕಾಣಿಕೆಯಾಗಿ ನೀಡಿದ್ದಾರೆ.

ಹುಂಡಿ ಹಣ ಎಣಿಕೆ ಕಾರ್ಯದಲ್ಲಿ ಕಂದಾಯ ಇಲಾಖೆಯ 500 ಸಿಬ್ಬಂದಿ ಹಾಗೂ ಸ್ಕೌಟ್ಸ್ ಮತ್ತು ಗೈಡ್ಸ್‌ನ 50 ಸಿಬ್ಬಂದಿ ಸೇರಿದಂತೆ ಒಟ್ಟು 600 ಮಂದಿ ಭಾಗವಹಿಸಿದ್ದರು. ಹುಂಡಿಯಲ್ಲಿ ಭಾರತೀಯ ಕರೆನ್ಸಿ ಜತೆಗೆ ಸಿಂಗಾಪುರ, ಓಮನ್, ಬಹರೇನ್, ಅಮೆರಿಕ, ಯುಎಇ ಮತ್ತು ಚೀನಾ ದೇಶಗಳ ಕರೆನ್ಸಿಗಳೂ ಪತ್ತೆಯಾಗಿವೆ.

ಬೆಳಗಾವಿ ಅಧಿವೇಶನಕ್ಕೆ 5 ಸಾವಿರಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿ ನಿಯೋಜನೆ

● ವಿಕ್ರಮ ವಾಹಿನಿ । ಬೆಳಗಾವಿ

ಬೆಳಗಾವಿಯಲ್ಲಿ ಡಿಸೆಂಬರ್ 2ರಿಂದ ಆರಂಭವಾಗಲಿರುವ ವಿಧಾನಮಂಡಲದ ಚಳಿಗಾಲದ ಅಧಿವೇಶನಕ್ಕೆ ಪೊಲೀಸ್ ಇಲಾಖೆ ವ್ಯಾಪಕ ಭದ್ರತಾ ಸಿದ್ಧತೆಗಳನ್ನು ಕೈಗೊಂಡಿದೆ. ಪೊಲೀಸ್ ಆಯುಕ್ತ ಪ್ರಕಾಶ್ ನಿಕ್ಕಂ ಅವರ ನೇತೃತ್ವದಲ್ಲಿ ಭದ್ರತಾ ವ್ಯವಸ್ಥೆಗಳ ಪರಿಶೀಲನೆ ನಡೆಸಲಾಗಿದ್ದು, ಸುವರ್ಣ ಸೌಧ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗುತ್ತಿದೆ.

ಅಧಿವೇಶನದ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆ ವಹಿಸಲಾಗಿದ್ದು, ಒಟ್ಟು 5,000ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿಯನ್ನು ಭದ್ರತಾ ಕಾರ್ಯಕ್ಕೆ ನಿಯೋಜಿಸಲು ನಿರ್ಧರಿಸಲಾಗಿದೆ. ವಿವಿಧ ಜಿಲ್ಲೆಗಳಿಂದ ಆಗಮಿಸುವ ಪೊಲೀಸ್ ಸಿಬ್ಬಂದಿಯ ಜೊತೆಗೆ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಪಡೆಯ ತುಕುಡಿಗಳನ್ನೂ ನಿಯೋಜಿಸಲಾಗುತ್ತಿದೆ.

ಭದ್ರತಾ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಸುವರ್ಣ ಸೌಧ ಹಾಗೂ ಪ್ರಮುಖ ಸ್ಥಳಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳ ಅಳವಡಿಕೆ ಮತ್ತು ಬ್ಯಾರಿಕೇಡಿಂಗ್ ಕಾರ್ಯಗಳು ಪ್ರಗತಿಯಲ್ಲಿವೆ. ಅಧಿವೇಶನದ ವೇಳೆ ವಿವಿಧ ಸಂಘಟನೆಗಳು ಮತ್ತು ಸಾರ್ವಜನಿಕರು ನಡೆಸುವ ಪ್ರತಿಭಟನೆಗಳನ್ನು ನಿಯಂತ್ರಿಸಲು ನಿರ್ದಿಷ್ಟ ಸ್ಥಳಗಳನ್ನು ಗುರುತಿಸಲಾಗಿದೆ.

ರಾಷ್ಟ್ರೀಯ ಹೆದ್ದಾರಿಗಳಲ್ಲಿ ರಸ್ತೆ ತಡೆ ನಡೆಸುವುದನ್ನು ತಡೆಯುವ ಉದ್ದೇಶದಿಂದ ನವೆಂಬರ್ 20ರಿಂದ ನಿಷೇಧಾಜ್ಞೆ ಜಾರಿಗೊಳಿಸಲಾಗುವುದು ಎಂದು ಪೊಲೀಸ್ ಆಯುಕ್ತ ಪ್ರಕಾಶ್ ನಿಕ್ಕಂ ತಿಳಿಸಿದ್ದಾರೆ. ಕಾನೂನು ಮತ್ತು ಸುವ್ಯವಸ್ಥೆಗೆ ಧಕ್ಕೆ ತರುವಂತಹ ಚಟುವಟಿಕೆಗಳಲ್ಲಿ ತೊಡಗುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಎಚ್ಚರಿಕೆ ನೀಡಿದ್ದಾರೆ.

ದಿಲ್ಲಿಗೆ ಬರುವಂತೆ ಆಹ್ವಾನ

● ವಿಕ್ರಮ ವಾಹಿನಿ । ಬೆಂಗಳೂರು

ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಕೆಲವು ವಿಚಾರಗಳನ್ನು ಖಾಸಗಿಯಾಗಿ ಚರ್ಚಿಸಲು ತಾವು ಸಮಯ ಕೋರಿದ್ದು, ಇದಕ್ಕೆ ಪ್ರತಿಯಾಗಿ ಪ್ರಧಾನಿಯವರು ದೆಹಲಿಗೆ ಬರುವಂತೆ ಆಹ್ವಾನಿಸಿದ್ದಾರೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

▶ 2ನೇ ಪುಟಕ್ಕೆ...



ಅಮೇರಿಕ ಮತ್ತು ಇರಾನ್ ನಡುವೆ ಯುದ್ಧ ಹೆಚ್ಚುತ್ತಿರುವಂತೆಯೇ ಇರಾನ್‌ನ ರಾಜಧಾನಿ ಟೆಹ್ರಾನ್‌ನ ಬೃಹತ್ ಕಟ್ಟಡದ ಮೇಲೆ ಇರಾನ್ ಸೈನಿಕರು ಸಮುದ್ರ ತೀರದಲ್ಲಿ ಅಮೇರಿಕದ ಕ್ಷಿಪಣಿಗಳನ್ನು ಮೀನಿನ ಬಲೆ ಹಾಕಿ ಹಿಡಿಯುತ್ತಿರುವ ಬಿಲ್ ಬೋರ್ಡ್ ಮೂಲಕ ಅಣಕಿಸಲಾಗುತ್ತಿರುವ ದೃಶ್ಯ.

ಅಡುಗೆ ಎಣ್ಣೆ ಮರುಬಳಕೆ ಮಾಡಿದರೆ ಕಠಿಣ ಕ್ರಮ: ಹೋಟೆಲ್‌ಗಳಿಗೆ ಎಚ್ಚರಿಕೆ

● ವಿಕ್ರಮ ವಾಹಿನಿ । ಬೆಂಗಳೂರು

ಹೋಟೆಲ್‌ಗಳು, ಬೇಕರಿಗಳು ಸೇರಿದಂತೆ ಆಹಾರ ತಯಾರಿಕಾ ಸಂಸ್ಥೆಗಳಲ್ಲಿ ಬಳಸಿದ ಅಡುಗೆ ಎಣ್ಣೆಯನ್ನು ಮತ್ತೆ ಮತ್ತೆ ಬಳಕೆ ಮಾಡುವುದನ್ನು ನಿಯಂತ್ರಿಸಲು ಆರೋಗ್ಯ ಇಲಾಖೆ ಮಹತ್ವದ ಹೆಜ್ಜೆ ಇಟ್ಟಿದೆ. ಇನ್ಮುಂದೆ ಹೋಟೆಲ್‌ಗಳಲ್ಲಿ ಅಡುಗೆ ಎಣ್ಣೆಯನ್ನು ಮರುಬಳಕೆ ಮಾಡುವುದು ಕಂಡುಬಂದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಆರೋಗ್ಯ ಸಚಿವ ಯು.ಟಿ.ಖಾದರ್ ಎಚ್ಚರಿಕೆ ನೀಡಿದ್ದಾರೆ.

ಅಡುಗೆ ಎಣ್ಣೆಯ ಮರುಬಳಕೆಯನ್ನು ತಡೆಗಟ್ಟಲು ಶೀಘ್ರದಲ್ಲೇ ಹೊಸ ಆಪ್‌ವೊಂದನ್ನು ಬಿಡುಗಡೆ ಮಾಡಲು ಇಲಾಖೆ ಸಿದ್ಧತೆ ನಡೆಸಿದೆ. ಈ ಆಪ್ ಮೂಲಕ ಹೋಟೆಲ್‌ಗಳು ಮತ್ತು ಬೇಕರಿಗಳು ತಾವು ಖರೀದಿಸುವ ಅಡುಗೆ ಎಣ್ಣೆಯ ಪ್ರಮಾಣ, ಬಳಕೆ ಮಾಡುವ ಪ್ರಮಾಣ ಹಾಗೂ ಮಾರಾಟ ಮಾಡುವ ಪ್ರಮಾಣದ ವಿವರಗಳನ್ನು ಕಡ್ಡಾಯವಾಗಿ ದಾಖಲಿಸಬೇಕು. ಆಪ್ ಸಿದ್ಧಪಡಿಸಿ ಜಾರಿಗೆ ತರಲು ಸುಮಾರು ಮೂರು ತಿಂಗಳ ಕಾಲಾವಕಾಶ ಬೇಕಾಗಲಿದೆ ಎಂದು ಸಚಿವರು ತಿಳಿಸಿದ್ದಾರೆ.



ಅಡುಗೆ ಎಣ್ಣೆ ಖರೀದಿಸುವ ಹೋಟೆಲ್ ಉದ್ಯಮಿಗಳು ಹಾಗೂ ಬೇಕರಿ ಮಾಲೀಕರು ಮೊದಲು ಆಪ್‌ನಲ್ಲಿ ನೋಂದಣಿ ಮಾಡಿಕೊಳ್ಳಬೇಕು. ಬಳಿಕ ತಾವು ಎಷ್ಟು ಪ್ರಮಾಣದ ಎಣ್ಣೆ ಖರೀದಿಸಿದ್ದಾರೆ, ಅದರಲ್ಲಿ ಎಷ್ಟು ಬಳಕೆಯಾಗಿದೆ, ಎಷ್ಟು ಪ್ರಮಾಣವನ್ನು ಮಾರಾಟ ಮಾಡಿದ್ದಾರೆ ಎಂಬುದನ್ನು ನಮೂದಿಸಬೇಕು. ಬಳಸಿದ ಎಣ್ಣೆಯನ್ನು ಬಯೋಗ್ಯಾಸ್ ಉತ್ಪಾದನಾ ಘಟಕಗಳಿಗೆ ಅಥವಾ ಸಂಬಂಧಪಟ್ಟ ಏಜೆನ್ಸಿಗಳಿಗೆ ವಿತರಿಸಿದ ಪ್ರಮಾಣವನ್ನೂ ದಾಖಲಿಸುವುದು ಕಡ್ಡಾಯವಾಗಲಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಈ ವ್ಯವಸ್ಥೆಯಿಂದ ಹೋಟೆಲ್ ಮತ್ತು ಬೇಕರಿಗಳಲ್ಲಿ ಬಳಕೆಯಾಗುವ ಅಡುಗೆ ಎಣ್ಣೆಯ ಪ್ರಮಾಣದ ಮೇಲೆ ನಿಗಾ ಇಡಲು ಸಾಧ್ಯವಾಗಲಿದೆ. ಎಣ್ಣೆ ಖರೀದಿ ಮತ್ತು ಬಳಕೆಯ ವಿವರಗಳನ್ನು ದಾಖಲಿಸುವುದರಿಂದ ಬಳಸಿದ ಎಣ್ಣೆಯನ್ನು ಮತ್ತೆ ಆಹಾರ ತಯಾರಿಕೆಗೆ ಬಳಸುವುದನ್ನು ನಿಯಂತ್ರಿಸುವುದು ಇಲಾಖೆಯ ಉದ್ದೇಶವಾಗಿದೆ.

ಯೋಜನೆಯ ಎರಡನೇ ಹಂತದಲ್ಲಿ ಮನೆಗಳಲ್ಲಿಯೂ ಅಡುಗೆ ಎಣ್ಣೆ ಮರುಬಳಕೆಯನ್ನು ತಡೆಗಟ್ಟಲು ಕ್ರಮ ಕೈಗೊಳ್ಳಲು ಆರೋಗ್ಯ ಇಲಾಖೆ ಚಿಂತನೆ ನಡೆಸಿದೆ. ಮನೆಮನೆಗಳಿಂದ ಬಳಕೆಯಾದ ಅಡುಗೆ ಎಣ್ಣೆಯನ್ನು ಸಂಗ್ರಹಿಸುವ ವ್ಯವಸ್ಥೆ ರೂಪಿಸುವ ಯೋಜನೆಯಿದೆ. ಈ ಸಂಬಂಧ ಅಗತ್ಯ ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಲಾಗುವುದು ಎಂದು ಸಚಿವ ಯು.ಟಿ. ಖಾದರ್ ತಿಳಿಸಿದ್ದಾರೆ.

ಹೋಟೆಲ್‌ಗಳು ಮತ್ತು ಬೇಕರಿಗಳಲ್ಲಿ ಬಳಸಿದ ಎಣ್ಣೆಯನ್ನು ಮತ್ತೆ ಆಹಾರ ತಯಾರಿಕೆಗೆ ಬಳಸುವುದರಿಂದ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಸರ್ಕಾರ ಈ ಕ್ರಮಕ್ಕೆ ಮುಂದಾಗಿದೆ.

ಹೊಸ ಆಪ್ ಜಾರಿಯಾದ ಬಳಿಕ ಎಣ್ಣೆ ಖರೀದಿ, ಬಳಕೆ ಮತ್ತು ವಿಲೇವಾರಿ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ತರುವುದರ ಜೊತೆಗೆ ಆಹಾರ ಸುರಕ್ಷತೆಯನ್ನು ಬಲಪಡಿಸುವ ನಿರೀಕ್ಷೆಯಿದೆ.

ಮಹಿಳಾ ಮೀಸಲಾತಿ ಮಂಡನೆಗೆ ಕೇಂದ್ರ ಸರ್ಕಾರ ಸಜ್ಜು...?

● ವಿಕ್ರಮ ವಾಹಿನಿ । ನವದೆಹಲಿ

ಮಹಿಳಾ ಮೀಸಲಾತಿ ಮಸೂದೆಯನ್ನು ಅಂಗೀಕರಿಸುವ ಉದ್ದೇಶದಿಂದ ಸಂಸತ್ತಿನ ವಿಶೇಷ ಅಧಿವೇಶನ ಕರೆಯಲು ಕೇಂದ್ರ ಸರ್ಕಾರ ಸಿದ್ಧತೆ ನಡೆಸಿದೆ. ಸಂವಿಧಾನ ತಿದ್ದುಪಡಿ ಮಸೂದೆಗೆ ಅಗತ್ಯವಿರುವ ಬಹುಮತ ಪಡೆಯುವ ವಿಶ್ವಾಸದಲ್ಲಿರುವ ಬಿಜೆಪಿ, ಮಸೂದೆ ಪರವಾಗಿ ಅಗತ್ಯ ಮತಗಳಿಗಿಂತ 15ರಿಂದ 18 ಮತಗಳು ಹೆಚ್ಚುವರಿಯಾಗಿ ದೊರೆಯಲಿವೆ ಎಂದು ಪಕ್ಷದ ಮೂಲಗಳು ತಿಳಿಸಿವೆ. ಮಹಿಳಾ ಮೀಸಲಾತಿ ಜಾರಿಗೆ ಸಂಬಂಧಿಸಿದ ಸಂವಿಧಾನ ತಿದ್ದುಪಡಿ ಮಸೂದೆಯನ್ನು ಲೋಕಸಭೆಯಲ್ಲಿ ಅಂಗೀಕರಿಸಲು ಮೂರನೇ ಎರಡರಷ್ಟು ಬಹುಮತ ಅಗತ್ಯವಿದೆ. ಪ್ರಸ್ತುತ ಲೋಕಸಭೆಯ 543 ಸ್ಥಾನಗಳ ಪೈಕಿ ಮೂರು ಸ್ಥಾನಗಳು ಖಾಲಿಯಿದ್ದು, ಮಸೂದೆ ಅಂಗೀಕಾರಕ್ಕೆ 361 ಸದಸ್ಯರ ಬೆಂಬಲ ಬೇಕಾಗಿದೆ.

▶ 2ನೇ ಪುಟಕ್ಕೆ...

ಇಂದು ಪ್ರಧಾನಿ ಬೆಂಗಳೂರಿಗೆ: ಬಿಗಿ ಭದ್ರತೆ

● ವಿಕ್ರಮ ವಾಹಿನಿ । ಬೆಂಗಳೂರು

ಪ್ರಧಾನಿ ನರೇಂದ್ರ ಮೋದಿ ಅವರು ನವೆಂಬರ್ 13ರಂದು ಬೆಂಗಳೂರಿಗೆ ಭೇಟಿ ನೀಡುತ್ತಿರುವ ಹಿನ್ನೆಲೆಯಲ್ಲಿ ನಗರದಲ್ಲಿ ಬಿಗಿ ಪೊಲೀಸ್ ಭದ್ರತೆ ಕೈಗೊಳ್ಳಲಾಗಿದೆ. ಪ್ರಧಾನಿ ಸಂಚರಿಸಲಿರುವ ರಸ್ತೆ ಮಾರ್ಗಗಳು, ಮೆಟ್ರೋ ರೈಲು ನಿಲ್ದಾಣಗಳು ಹಾಗೂ ಕಾರ್ಯಕ್ರಮ ನಡೆಯುವ ಸ್ಥಳಗಳಲ್ಲಿ ಯಾವುದೇ ಭದ್ರತಾ ಲೋಪವಾಗದಂತೆ ವಿಶೇಷ ನಿಗಾ ವಹಿಸಲಾಗಿದೆ.

ಪ್ರಧಾನಿ ಭೇಟಿಗೆ ಸುಮಾರು ಹತ್ತು ದಿನಗಳ ಮುಂಚಿತವಾಗಿಯೇ ಬೆಂಗಳೂರಿಗೆ ಆಗಮಿಸಿರುವ ವಿಶೇಷ ರಕ್ಷಣಾ ಪಡೆ (ಎಸ್‌ಪಿಜಿ) ತಂಡ, ಮೋದಿ ಸಂಚರಿಸಲಿರುವ ರಸ್ತೆ ಮಾರ್ಗಗಳು, ಮೆಟ್ರೋ ಪ್ರಯಾಣದ ವ್ಯವಸ್ಥೆ ಹಾಗೂ ಕಾರ್ಯಕ್ರಮದ ಸ್ಥಳಗಳನ್ನು ಸೂಕ್ಷ್ಮವಾಗಿ ಪರಿಶೀಲಿಸಿದೆ. ಪ್ರಧಾನಿ ಸಂಚರಿಸುವ ಮಾರ್ಗಗಳಲ್ಲಿ ಕಡ್ಡಾಯವಾಗಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಿ ನಿರಂತರ ನಿಗಾ ವಹಿಸಲಾಗುತ್ತಿದೆ. ಅಲ್ಲದೆ, ಮಾರ್ಗದಲ್ಲಿರುವ ಬೃಹತ್ ಕಟ್ಟಡಗಳ ಮೇಲೆಯೂ ಹೆಚ್ಚುವರಿ ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಲಾಗುತ್ತಿದೆ. ಹೈ ರಿಸ್ಕ್ ಅಪಾರ್ಟ್‌ಮೆಂಟ್‌ಗಳಲ್ಲಿ ಪೊಲೀಸರು ಪರಿಶೀಲನೆ ನಡೆಸುತ್ತಿದ್ದು, ಹೊಸದಾಗಿ ಯಾರಾದರೂ ವಾಸಕ್ಕೆ ಬಂದಿದ್ದರೆ ಅವರ ಕುರಿತು ಮಾಹಿತಿ ನೀಡುವಂತೆ ನಿವಾಸಿಗಳಿಗೆ ಸೂಚಿಸಲಾಗಿದೆ. ರಸ್ತೆಗಳಲ್ಲಿ ವಿಶೇಷ ತಪಾಸಣಾ ಕಾರ್ಯಾಚರಣೆ ನಡೆಸಿ ನಿರಂತರ ನಿಗಾ ವಹಿಸುವಂತೆಯೂ ಎಸ್‌ಪಿಜಿ ಅಧಿಕಾರಿಗಳು ಸೂಚಿಸಿದ್ದಾರೆ.

ಕಳೆದ ಮೇ 10ರಂದು ಪ್ರಧಾನಿ ಮೋದಿ ಬೆಂಗಳೂರಿಗೆ ಭೇಟಿ ನೀಡಿದ್ದ ಸಂದರ್ಭದಲ್ಲಿ, ಅವರು ಸಂಚರಿಸುವ ಮಾರ್ಗದಲ್ಲಿರುವ ಕನಕಪುರ ರಸ್ತೆಯ ವಡೇರಹಳ್ಳಿ ಗೇಟ್ ಬಳಿಯ ಆರ್ಟ್ ಆಫ್ ಲಿವಿಂಗ್ ಆಶ್ರಮದ ಸಮೀಪ ಎರಡು ಜಿಲೆಟಿನ್ ಕಡ್ಡಿಗಳು ಪತ್ತೆಯಾಗಿದ್ದವು. ಪ್ರಧಾನಿಯವರ ಬೆಂಗಾವಲು ಪಡೆ ಆ ಮಾರ್ಗದಲ್ಲಿ ಸಂಚರಿಸುವ ಸುಮಾರು ಅರ್ಧ ಗಂಟೆ ಮುಂಚಿತವಾಗಿ ಪೊಲೀಸರು ಅವುಗಳನ್ನು ಪತ್ತೆಹಚ್ಚಿ ನಿಷ್ಕ್ರಿಯಗೊಳಿಸಿದ್ದರು.


ಈ ಘಟನೆ ಭದ್ರತಾ ಆತಂಕಕ್ಕೆ ಕಾರಣವಾಗಿತ್ತು. ಬಳಿಕ ಭದ್ರತಾ ಲೋಪ ಮತ್ತು ಕರ್ತವ್ಯ ನಿರ್ಲಕ್ಷ್ಯದ ಆರೋಪದಡಿ ಬೆಂಗಳೂರು ದಕ್ಷಿಣ ಜಿಲ್ಲೆಯ ಒಬ್ಬ ಪಿಎಸ್‌ಐ ಸೇರಿದಂತೆ ಆರು ಪೊಲೀಸ್ ಸಿಬ್ಬಂದಿಯನ್ನು ಅಮಾನತುಗೊಳಿಸಲಾಗಿತ್ತು. ರಾಷ್ಟ್ರೀಯ ತನಿಖಾ ದಳವೂ ಪ್ರಕರಣದ ಕುರಿತು ಮಾಹಿತಿ ಸಂಗ್ರಹಿಸಿ ತನಿಖೆ ನಡೆಸಿತ್ತು. ಈ ಹಿನ್ನೆಲೆಯಲ್ಲಿ ಈ ಬಾರಿ ಎಸ್‌ಪಿಜಿ ತಂಡ ಮುಂಚಿತವಾಗಿಯೇ ನಗರಕ್ಕೆ ಆಗಮಿಸಿ ಭದ್ರತಾ ವ್ಯವಸ್ಥೆಗಳನ್ನು ಪರಿಶೀಲಿಸಿದೆ. ಬೆಂಗಳೂರು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಅವರ ನೇತೃತ್ವದಲ್ಲಿ ವ್ಯಾಪಕ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿದೆ. ಭದ್ರತಾ ಕರ್ತವ್ಯಕ್ಕಾಗಿ ಮೂವರು ಜಂಟಿ ಪೊಲೀಸ್ ಆಯುಕ್ತರು, 15 ಡಿಸಿಪಿಗಳು, 20 ಎಸಿಪಿಗಳು, 30 ಪೊಲೀಸ್ ಇನ್‌ಸ್ಪೆಕ್ಟರ್‌ಗಳು, 100ಕ್ಕೂ ಹೆಚ್ಚು ಸಬ್‌ಇನ್‌ಸ್ಪೆಕ್ಟರ್‌ಗಳು ಹಾಗೂ 1,000ಕ್ಕೂ ಹೆಚ್ಚು ನಾಗರಿಕ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ.

ಗೆಜೆಟೆಡ್ ಪ್ರೊಬೇಷನರ್ ಪರೀಕ್ಷೆಗೆ ಚುನಾವಣಾ ಮಾದರಿಯ ತರಬೇತಿ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದಲ್ಲಿ 319 ಗಜೆಟೆಡ್ ಪ್ರೊಬೇಷನರ್ ಹುದ್ದೆಗಳಿಗೆ ಭಾನುವಾರ (ನವೆಂಬರ್ 15) ನಡೆಯಲಿರುವ ಪೂರ್ವಭಾವಿ ಪರೀಕ್ಷೆಗೆ ಸಂಬಂಧಿಸಿದಂತೆ ಎಲ್ಲ ಪರೀಕ್ಷಾ ಸಿಬ್ಬಂದಿಗೆ ಜಿಲ್ಲಾಧಿಕಾರಿಗಳು ಚುನಾವಣೆ ಮಾದರಿಯಲ್ಲಿ ತರಬೇತಿ ನಡೆಸಿ, ವರದಿ ಕೊಡುವಂತೆ ಸಿಎಂ ಡಿ.ಕೆ ಶಿವಕುಮಾರ್ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಅವರು ಗಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ಭರ್ತಿಗೆ ಕೆಪಿಎಸ್ ಸಿ ನಡೆಸುತ್ತಿರುವ ಪೂರ್ವಭಾವಿ ಪರೀಕ್ಷೆಗಳ ಸಿದ್ಧತೆಯ ಕುರಿತು ಗೃಹಕಚೇರಿ ಕೃಷ್ಣಾದಲಿ ಗುರುವಾರ ಜಿಲ್ಲಾಧಿಕಾರಿಗಳು, ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಪರಿಶೀಲನೆ ನಡೆಸಿದರು.



ಪಾರದರ್ಶಕವಾಗಿ, ಅಕ್ರಮ ರಹಿತ ಪರೀಕ್ಷೆ ನಡೆಸಲು ಸಿದ್ಧತೆ; ಪರೀಕ್ಷಾ ಸಿಬ್ಬಂದಿಗೆ ತರಬೇತಿ

ಈ ಸಂದರ್ಭದಲ್ಲಿ ಪರೀಕ್ಷಾ ಸಿದ್ಧತೆಗಳ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದ ಸಿಎಂ, ಪರೀಕ್ಷೆಯನ್ನು ಅತ್ಯಂತ ಪಾರದರ್ಶಕವಾಗಿ, ಯಾವುದೇ ಅಕ್ರಮಗಳಿಗೆ ಅವಕಾಶವಾಗದಂತೆ ನಡೆಸಲು ನಿರ್ದೇಶನ ನೀಡಿದರು.

ಪರೀಕ್ಷಾ ಪ್ರಕ್ರಿಯೆಯಲ್ಲಿ ಹಲವಾರು ಸುಧಾರಣೆಗಳನ್ನು ಕೈಗೊಂಡಿದ್ದೇವೆ. ಈ ಬಗ್ಗೆ ಕೆಪಿಎಸ್ಸಿ ಹೊರಡಿಸಿರುವ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಜಿಲ್ಲಾಧಿಕಾರಿಗಳಿಗೆ ತಿಳಿಸಿದರು.

ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ಕ್ಯಾಮರಾ ಮೂಲಕ ನಿರಂತರ ನಿಗಾ ವಹಿಸಬೇಕು. ಪೊಲೀಸ್ ನೇಮಕಾತಿ ಪರೀಕ್ಷೆಯ ಮಾದರಿಯಲ್ಲಿಯೇ ಸೂಕ್ತ ಭದ್ರತೆ ವ್ಯವಸ್ಥೆ ಕೈಗೊಳ್ಳುವಂತೆ ಇಲಾಖೆಗೆ ಸೂಚಿಸಿದರು.

ಪರೀಕ್ಷಾ ಕೇಂದ್ರದ ಆವರಣದಲ್ಲಿ ಯಾವುದೇ ಅನಧಿಕೃತ ವ್ಯಕ್ತಿಯ ಪ್ರವೇಶಕ್ಕೆ ಅವಕಾಶ ಇಲ್ಲ. ಪ್ರವೇಶಕ್ಕೆ ಅನುಮತಿ ಇರುವ ವ್ಯಕ್ತಿಯೂ ಭದ್ರತಾ ತಪಾಸಣೆಗೆ ಒಳಪಡಬೇಕು. ಮಾರ್ಗಸೂಚಿಯನ್ವಯ ಅನುಮತಿಸಿದ ವಸ್ತುಗಳನ್ನು ಮಾತ್ರ ಅವರು ತರಬಹುದು.

ಪರೀಕ್ಷಾ ಕೇಂದ್ರದ ಸೂಕ್ಷ್ಮತೆಯನ್ನು ಗುರುತಿಸಿ, ಅದಕ್ಕೆ ತಕ್ಕಂತೆ ಸಿಬ್ಬಂದಿ ನಿಯೋಜನೆ ಮಾಡುವಂತೆ ಸೂಚನೆ ನೀಡಿದರು.

ಹೆಚ್ಚುವರಿ ಭದ್ರತಾ ಉಪಕರಣಗಳನ್ನು ಬಾಡಿಗೆ ಆಧಾರದಲ್ಲಿ ಪಡೆಯಬಹುದು. ಭದ್ರತೆಗೆ ಹೆಚ್ಚುವರಿ ಪೊಲೀಸ್ ಸಿಬ್ಬಂದಿ ಅಗತ್ಯವಿದ್ದಲ್ಲಿ ಇತರ ಕಡೆಗಳಿಂದ ನಿಯೋಜಿಸಲು ಸೂಚನೆ ನೀಡಿದರು. ಯಾವುದೇ ಕಾರಣಕ್ಕೂ ಅಭ್ಯರ್ಥಿಗಳು ಮೊಬೈಲ್‌ನೊಂದಿಗೆ ಪರೀಕ್ಷಾ ಕೇಂದ್ರ ಪ್ರವೇಶಿಸುವಂತಿಲ್ಲ. ಅಂತಹ ಸಂದರ್ಭದಲ್ಲಿ ಹಿರಿಯ ಅಧಿಕಾರಿಗಳನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಎಚ್ಚರಿಸಿದರು.

ಇದೇ ಮೊದಲ ಬಾರಿಗೆ ಪರೀಕ್ಷಾ ಕೊಠಡಿಯಲ್ಲಿ ಇಬ್ಬರು ಮೇಲ್ವಿಚಾರಕರ ನೇಮಕ

319 ಹುದ್ದೆ; 1.47 ಲಕ್ಷ ಆಕಾಂಕ್ಷಿಗಳು

ಕೆಪಿಎಸ್ಸಿ ಗಜೆಟೆಡ್ ಪ್ರೊಬೇಷನರ್ಸ್ 319 ಹುದ್ದೆಗಳಿಗೆ ಪೂರ್ವಭಾವಿ ಪರೀಕ್ಷೆ ನಡೆಸಲಾಗುತ್ತಿದೆ.

* ಇದರಲ್ಲಿ 202 ಗ್ರೂಪ್ ಬಿ ಹಾಗೂ 117 ಗ್ರೂಪ್ ಎ ಹುದ್ದೆಗಳಾಗಿವೆ.
* ಕಲಬುರಗಿ, ರಾಯಚೂರು, ಬಳ್ಳಾರಿ, ಬಾಗಲಕೋಟೆ, ವಿಜಯಪುರ, ಧಾರವಾಡ, ಬೆಳಗಾವಿ, ಉತ್ತರಕನ್ನಡ, ಶಿವಮೊಗ್ಗ, ದಕ್ಷಿಣ ಕನ್ನಡ, ಹಾಸನ, ದಾವಣಗೆರೆ, ತುಮಕೂರು, ಮೈಸೂರು, ಬೆಂಗಳೂರು ನಗರ ಜಿಲ್ಲೆಗಳಲ್ಲಿ ಒಟ್ಟು 345 ಪರೀಕ್ಷಾ ಉಪ ಕೇಂದ್ರಗಳನ್ನು ಸ್ಥಾಪಿಸಲಾಗಿದೆ.
* ಪರೀಕ್ಷಾ ದಿನಾಂಕ: 15-11-2026 (ಭಾನುವಾರ).
* ಬೆಳಿಗ್ಗೆ 10:00 ರಿಂದ 12:00 ರವರೆಗೆ ಪತ್ರಿಕೆ-1 (ಸಾಮಾನ್ಯ ಅಧ್ಯಯನ ಮತ್ತು ಮಾನವಿಕ ವಿಷಯಗಳು)
* ಮಧ್ಯಾಹ್ನ 02:00 ರಿಂದ 04:00 ರವರೆಗೆ ಪತ್ರಿಕೆ-2 (ರಾಜ್ಯಕ್ಕೆ ಸಂಬಂಧಿಸಿದ ಸಾಮಾನ್ಯ ಅಧ್ಯಯನ, ವಿಜ್ಞಾನ ಮತ್ತು ತಂತ್ರಜ್ಞಾನ, ಮಾನಸಿಕ ಸಾಮರ್ಥ್ಯ)
* ಪ್ರತಿ ಪತ್ರಿಕೆಗೆ 100 ಪ್ರಶ್ನೆಗಳು, 200 ಅಂಕಗಳು.
* ರಾಜ್ಯಾದ್ಯಂತ ಒಟ್ಟು 1,47,067 ಅಭ್ಯರ್ಥಿಗಳು (91,238 ಪುರುಷರು ಮತ್ತು 53,074 ಮಹಿಳೆಯರು) ಅರ್ಜಿ ಸಲ್ಲಿಸಿದ್ದಾರೆ.
* ಎರಡೂ ಪತ್ರಿಕೆಗಳು ಸೇರಿ ಒಟ್ಟು 2,94,134 ಔಎಂಆರ್ ಹಾಳೆಗಳನ್ನು ಸ್ಕ್ಯಾನ್ ಮಾಡಲಾಗುವುದು.

ಇದೇ ಮೊದಲ ಬಾರಿಗೆ ಪ್ರತಿ ಪರೀಕ್ಷಾ ಕೊಠಡಿಯಲ್ಲಿ ಇಬ್ಬರು ಮೇಲ್ವಿಚಾರಕರ ನಿಯೋಜನೆ ಮಾಡಲಾಗುತ್ತಿದೆ. ಅವರಲ್ಲಿ ಒಬ್ಬರು ಕಡ್ಡಾಯವಾಗಿ ಸರ್ಕಾರಿ ಕಾಲೇಜು ಸಿಬ್ಬಂದಿಯಾಗಿರಬೇಕು ಎಂದು ಸೂಚಿಸಿದರು..

ಅಭ್ಯರ್ಥಿಗಳು ಪರೀಕ್ಷಾ ಕೊಠಡಿ ಪರೀಕ್ಷಿಸಿದ ನಂತರ ಮತ್ತೊಮ್ಮೆ ತಪಾಸಣೆ ನಡೆಸುವುದು ಹಾಗೂ ಪರೀಕ್ಷಾ ಕೊಠಡಿಯಲ್ಲಿ ಕಟ್ಟೆಚ್ಚರಿಕೆ ವಹಿಸಲು ಇಬ್ಬರು ಮೇಲ್ವಿಚಾರಕರ ನಿಯೋಜನೆ ಮಾಡಲಾಗುತ್ತಿದೆ.

ಪರೀಕ್ಷೆಯಲ್ಲಿ ನಕಲಿ ಅಭ್ಯರ್ಥಿಗಳ ಭಾಗವಹಿಸುವಿಕೆ ತಡೆಯಲು ಕ್ರಮ ಕೈಗೊಳ್ಳುವಂತೆ ತಿಳಿಸಿದರು.

ಅಕ್ರಮಕ್ಕೆ ಆಸ್ಪದ ನೀಡುವ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ಎಚ್ಚರಿಕೆ

ಖಾಸಗಿ ಅನುದಾನಿತ ಕಾಲೇಜುಗಳಲ್ಲಿರುವ ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷಾ ಅವ್ಯವಹಾರಕ್ಕೆ ಅವಕಾಶ ನೀಡಿರುವುದು ಕಂಡು ಬಂದರೆ ಅಂತಹ ಖಾಸಗಿ ಕಾಲೇಜುಗಳ ಪರವಾನಗಿಯನ್ನು ರದ್ದುಪಡಿಸಲಾಗುವುದು ಎಂದು ಸಿಎಂ ಎಚ್ಚರಿಕೆ ನೀಡಿದರು.

ಪರೀಕ್ಷಾ ಅಕ್ರಮಗಳಲ್ಲಿ ತೊಡಗುವವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದರು.

ಸುಳ್ಳು ವದಂತಿಗಳಿಗೆ ಕಿವಿಗೊಡಬೇಡಿ: ಅಭ್ಯರ್ಥಿಗಳಿಗೆ ಸಿಎಂ ಮನವಿ

ಈ ಪರೀಕ್ಷೆ ಕುರಿತು ಸುಳ್ಳು ಸುದ್ದಿ ಹರಡುವುದಕ್ಕೆ ಅವಕಾಶ ನೀಡಬಾರದು. ಸಾಮಾಜಿಕ ಜಾಲತಾಣಗಳ ಮೇಲೆ ಪೊಲೀಸ್ ಇಲಾಖೆ ನಿಗಾ ವಹಿಸಬೇಕು ಎಂದು ಸಿಎಂ ಅಧಿಕಾರಿಗಳಿಗೆ ತಿಳಿಸಿದರು.

ಪರೀಕ್ಷೆ ಕುರಿತು ಯಾವುದೇ ವದಂತಿ ಹಬ್ಬಿದರೆ ಕೂಡಲೇ ಅಧಿಕಾರಿಗಳ ಗಮನಕ್ಕೆ ತರಬೇಕು. ಅವರು ಈ ಕುರಿತು ಸ್ಪಷ್ಟೀಕರಣ ನೀಡುವರು. ಅಭ್ಯರ್ಥಿಗಳು ಹಾಗೂ ಮಾಧ್ಯಮದವರು ತಮಗೆ ಬಂದ ಮಾಹಿತಿಯನ್ನು ಅಧಿಕೃತ ಮೂಲಗಳಿಂದ ಖಾತರಿಪಡಿಸಿಕೊಳ್ಳುವುದು ಅತಿ ಅಗತ್ಯ ಎಂದು ತಿಳಿಸಿದರು.

ಅಭ್ಯರ್ಥಿಗಳು ಯಾವುದೇ ವದಂತಿಗಳಿಗೆ ಕಿವಿಗೊಡದೆ ಆತ್ಮವಿಶ್ವಾಸದಿಂದ ಪರೀಕ್ಷೆ ಬರೆಯುವಂತೆ ಅವರು ತಿಳಿಸಿದರು.

ಅಕ್ರಮ ತಡೆಗೆ ಸುಧಾರಣಾ ಕ್ರಮಗಳು

ಸಭೆಯಲ್ಲಿ ಪರೀಕ್ಷೆಯ ಪೂರ್ವಸಿದ್ಧತೆ ಕುರಿತು ಮಾಹಿತಿ ನೀಡಿದ ಕೆಪಿಎಸ್ಸಿ ಪರೀಕ್ಷಾ ನಿಯಂತ್ರಕ ಹೆಚ್. ಪ್ರಸನ್ನ ಅವರು ಪರೀಕ್ಷಾ ಅಕ್ರಮ ತಡೆಗೆ ಮೊದಲ ಬಾರಿಗೆ ಜಾರಿಗೆ ತರುತ್ತಿರುವ ಸುಧಾರಣಾ ಕ್ರಮಗಳನ್ನು ವಿವರಿಸಿದರು.

▶ 2ನೇ ಪುಟಕ್ಕೆ...

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

ಗೆಜೆಟೆಡ್ ಪ್ರೊಬೇಷನರ್ ಪರೀಕ್ಷೆಗೆ ಚುನಾವಣಾ ಮಾದರಿಯ ತರಬೇತಿ: ಸಿಎಂ ಡಿಕೆಶಿ

● ವಿಕ್ರಮ ವಾಹಿನಿ । ಒಂದನೇ ಪುಟದಿಂದ

* 5 ಆಯ್ಕೆಗಳ OMR ಪದ್ಧತಿ: ಉತ್ತರ ಗೊತ್ತಿಲ್ಲದಿದ್ದರೆ 5ನೇ ಆಯ್ಕೆಯನ್ನು ಕಡ್ಡಾಯವಾಗಿ ಗುರುತು ಮಾಡಬೇಕು. ಯಾವುದೇ ಪ್ರಶ್ನೆಗೆ ಉತ್ತರ ಖಾಲಿ ಬಿಡುವಂತಿಲ್ಲ.
* ತ್ರಿಪ್ರತಿ (Triple-Copy) OMR ಹಾಳೆ: ಒಂದು ಪ್ರತಿ ಅಭ್ಯರ್ಥಿಗೆ, ಒಂದು ಏಕಖಅ ಮೌಲ್ಯಮಾಪನಕ್ಕೆ ಮತ್ತು ಮೂರನೆಯದು ಜಿಲ್ಲಾಧಿಕಾರಿ/ KPSC ಸ್ಟ್ರಾಂಗ್ ರೂಮ್‌ನಲ್ಲಿ ಸುರಕ್ಷಿತವಾಗಿಡಲಾಗುವುದು. ಆ ಮೂಲಕ ಪಾರದರ್ಶಕತೆ ಕಾಯ್ದುಕೊಳ್ಳಲಾಗುವುದು.
* ಸಿಸಿಟಿವಿ ಮತ್ತು ಜಾಮರ್ ಅಳವಡಿಕೆ: ಎಲ್ಲಾ ಪರೀಕ್ಷಾ ಕೊಠಡಿಗಳಲ್ಲಿ ಸಿಸಿಟಿವಿ ಕ್ಯಾಮೆರಾ ಮತ್ತು ಮೊಬೈಲ್ ಜಾಮರ್ಗಳ ಅಳವಡಿಸಲಾಗುತ್ತಿದ್ದು, ಪೊಲೀಸ್ ವರಿಷ್ಠಾಧಿಕಾರಿಗಳೇ ಜಾಮರ್‌ಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ದೃಢೀಕರಿಸಬೇಕೆಂದು ಸೂಚಿಸಲಾಯಿತು.
* ಪ್ರತಿ ಪರೀಕ್ಷಾ ಕೊಠಡಿಗೆ ಇಬ್ಬರು ಮೇಲ್ವಿಚಾರಕರನ್ನು ನಿಯೋಜನೆ ಮಾಡಲಾಗುತ್ತಿದೆ. ಗುರುತಿನ ಚೀಟಿ ಪರಿಶೀಲನೆ, ತಪಾಸಣೆ ಮತ್ತು ಕೊಠಡಿಯ ಹಿಂಭಾಗದಿಂದ ನಿಗಾ ವಹಿಸಲು ಇಬ್ಬರು ಮೇಲ್ವಿಚಾರಕರ ನೇಮಕ.
* ಪರೀಕ್ಷಾ ದಿನದಂದೇ OMR ಅಪ್ಲೋಡ್: ಪಾರದರ್ಶಕತೆಗಾಗಿ ಪರೀಕ್ಷೆ ನಡೆದ ದಿನದಂದೇ ಎಲ್ಲಾ ಸ್ಕ್ಯಾನ್ ಮಾಡಿದ OMR ಪ್ರತಿಗಳನ್ನು KPSC ವೆಬ್ ಸೈಟ್‌ನಲ್ಲಿ ಸಾರ್ವಜನಿಕರ ವೀಕ್ಷಣೆಗೆ ಅಪ್ಲೋಡ್ ಮಾಡಲಾಗುವುದು. 12 ಜಿಲ್ಲೆಗಳಲ್ಲಿ OMR ಹಾಳೆ ಸ್ಕ್ಯಾನ್ ಮಾಡಲು ವ್ಯವಸ್ಥೆ ಮಾಡಲಾಗಿದೆ.

ಮುಂದಿನ ಪರೀಕ್ಷೆಗಳಿಗೆ ನಕಲಿ ಅಭ್ಯರ್ಥಿಗಳ ತಡೆಗೆ ಇ-ಆಡಳಿತ ಇಲಾಖೆಯ ಮೂಲಕ ಪರೀಕ್ಷಾ ಕೇಂದ್ರಗಳಲ್ಲಿ ಆಧಾರ್ ಆಧಾರಿತ ಗುರುತು ಪರಿಶೀಲನೆ ವ್ಯವಸ್ಥೆ ಜಾರಿಗೊಳಿಸಲು ಸಿಎಂ ಸೂಚನೆ ನೀಡಿದರು.

ಮುಂದಿನ ಪರೀಕ್ಷೆಗಳಿಗೆ ತಾಂತ್ರಿಕ ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ OMR ಸ್ಕ್ಯಾನಿಂಗ್ ಕೇಂದ್ರಗಳನ್ನು ಸ್ಥಾಪಿಸಿ ತ್ವರಿತವಾಗಿ ಫಲಿತಾಂಶ ಪ್ರಕಟಿಸುವಂತೆ ತಿಳಿಸಿದರು.

ಆದ್ಯತೆಯ ಮೇರೆಗೆ ಸಿಂಧುತ್ವ ಪ್ರಮಾಣ ಪತ್ರ ನೀಡಲು ಸೂಚನೆ

ಸಿಂಧುತ್ವ ಪ್ರಮಾಣ ಪತ್ರವನ್ನು ಆದ್ಯತೆ ಮೇರೆಗೆ ನೀಡಲು ಜಿಲ್ಲಾಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಹಲವು ಹುದ್ದೆಗಳ ನೇಮಕಾತಿ ಫಲಿತಾಂಶ ಘೋಷಿಸಲಾಗಿದ್ದರೂ, ಸಿಂಧುತ್ವ ಪ್ರಮಾಣ ಪತ್ರ ನೀಡುವಲ್ಲಿನ ವಿಳಂಬದಿಂದಾಗಿ ನೇಮಕಾತಿ ಪ್ರಕ್ರಿಯೆ ವಿಳಂಬವಾಗುತ್ತಿರುವುದು ಗಮನಕ್ಕೆ ಬಂದಿದೆ. ಇದಕ್ಕೆ ಯಾವುದೇ ಕಾರಣಕ್ಕೂ ಅವಕಾಶ ಮಾಡಬಾರದು ಎಂದು ಸಿಎಂ ಜಿಲ್ಲಾಧಿಕಾರಿಗಳಿಗೆ ತಿಳಿಸಿದರು.

ಮಹಿಳಾ ಮೀಸಲಾತಿ ಮಂಡನೆಗೆ ಕೇಂದ್ರ ಸರ್ಕಾರ ಸಜ್ಜು...?

● ವಿಕ್ರಮ ವಾಹಿನಿ । ಒಂದನೇ ಪುಟದಿಂದ

ಈ ಹಿನ್ನೆಲೆಯಲ್ಲಿ ಸರ್ಕಾರ ವಿವಿಧ ಪಕ್ಷಗಳ ಸಂಸದರನ್ನು ಸಂಪರ್ಕಿಸಿ ಬೆಂಬಲ ಪಡೆಯಲು ಪ್ರಯತ್ನಿಸುತ್ತಿದೆ.

ಪ್ರಸ್ತಾವಿತ ಸಂವಿಧಾನ ತಿದ್ದುಪಡಿಯ ಮೂಲಕ ಲೋಕಸಭೆಯ ಒಟ್ಟು ಸ್ಥಾನಗಳ ಸಂಖ್ಯೆಯನ್ನು ಈಗಿನ 543ರಿಂದ ಗರಿಷ್ಠ 850ಕ್ಕೆ ಹೆಚ್ಚಿಸುವ ಉದ್ದೇಶ ಹೊಂದಲಾಗಿದೆ.

ಕ್ಷೇತ್ರ ಮರುವಿಂಗಡಣೆ ಮೂಲಕ ಲೋಕಸಭೆಯ ಸ್ಥಾನಗಳನ್ನು ಹೆಚ್ಚಿಸಿ, ಸಂಸತ್ತು ಹಾಗೂ ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇಕಡಾ 33ರಷ್ಟು ಮೀಸಲಾತಿ ಕಲ್ಪಿಸುವುದು ಸರ್ಕಾರದ ಪ್ರಮುಖ ಉದ್ದೇಶವಾಗಿದೆ. 2029ರ ಲೋಕಸಭಾ ಚುನಾವಣೆಗೆ ಮುನ್ನ ಮಹಿಳಾ ಮೀಸಲಾತಿ ಕಾಯ್ದೆಯನ್ನು ಜಾರಿಗೆ ತರಲು ಕೇಂದ್ರ ಸರ್ಕಾರ ಗುರಿ ಹೊಂದಿದೆ.

ಇದೇ ರೀತಿಯ ಸಂವಿಧಾನ ತಿದ್ದುಪಡಿ ಮಸೂದೆಯನ್ನು ಈ ವರ್ಷದ ಏಪ್ರಿಲ್ 17ರಂದು ಬಜೆಟ್ ಅಧಿವೇಶನದ ವಿಶೇಷ ಕಲಾಪದಲ್ಲಿ ಮಂಡಿಸಲಾಗಿತ್ತು. ಆದರೆ, ಅಗತ್ಯ ಬಹುಮತ ದೊರೆಯದ ಕಾರಣ ಲೋಕಸಭೆಯಲ್ಲಿ ಮಸೂದೆ ಅಂಗೀಕಾರವಾಗಿರಲಿಲ್ಲ. ಇದೀಗ ಮತ್ತೊಮ್ಮೆ ಮಸೂದೆಯನ್ನು ಮಂಡಿಸಿ ಅಂಗೀಕಾರ ಪಡೆಯಲು ಸರ್ಕಾರ ಮುಂದಾಗಿದೆ. ಈ ಮಧ್ಯೆ, ಆಗಸ್ಟ್ 13ರಂದು ಅನಿರ್ದಿಷ್ಟಾವಧಿಗೆ ಮುಂದೂಡಲ್ಪಟ್ಟಿದ್ದ ಮುಂಗಾರು ಅಧಿವೇಶನಕ್ಕೆ ಸಂಸತ್ತಿನ ಅಧಿಕೃತ ಸತ್ರಾವಸಾನ ಇನ್ನೂ ಘೋಷಣೆಯಾಗಿಲ್ಲ.

ದಿಲ್ಲಿಗೆ ಬರುವಂತೆ ಆಹ್ವಾನ

● ವಿಕ್ರಮ ವಾಹಿನಿ । ಒಂದನೇ ಪುಟದಿಂದ

ಬೆಂಗಳೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪ್ರಧಾನಿ ಮೋದಿ ಅವರೊಂದಿಗಿನ ಭೇಟಿಯ ಕುರಿತು ಹೆಚ್ಚಿನ ವಿವರಗಳನ್ನು ಬಹಿರಂಗಪಡಿಸಲು ನಿರಾಕರಿಸಿದರು. ಇದರಿಂದ ರಾಜಕೀಯ ವಲಯದಲ್ಲಿ ಕುತೂಹಲ ಮೂಡಿದೆ.

ಗುರುವಾರ ವಿಕಾಸಸೌಧದಲ್ಲಿ ನಡೆದ ಮಾಧ್ಯಮಗೋಷ್ಠಿಯಲ್ಲಿ ಬರ ಪರಿಹಾರದ ಕುರಿತು ಪ್ರಧಾನಿಯವರೊಂದಿಗೆ ಚರ್ಚಿಸುವಿರಾ ಎಂಬ ಪ್ರಶ್ನೆಗೆ ಉತ್ತರಿಸಿದ ಡಿ.ಕೆ. ಶಿವಕುಮಾರ್, ಖಂಡಿತವಾಗಿಯೂ ಈ ವಿಚಾರವಾಗಿ ಪ್ರಾಮಾಣಿಕವಾಗಿ ಮನವಿ ಮಾಡಿಕೊಳ್ಳುವುದಾಗಿ ಹೇಳಿದರು.

"ನಾನು ಪ್ರಧಾನಿಯವರೊಂದಿಗೆ ಏನು ಚರ್ಚೆ ಮಾಡುತ್ತೇನೆ ಎಂಬುದನ್ನು ಈಗಲೇ ಬಹಿರಂಗಪಡಿಸಲು ಸಾಧ್ಯವಿಲ್ಲ. ಖಾಸಗಿಯಾಗಿ ಕೆಲವು ವಿಚಾರಗಳನ್ನು ಚರ್ಚಿಸಲು ಸಮಯ ಕೇಳಿದ್ದೇನೆ. ಅವರು ದೆಹಲಿಗೆ ಆಗಮಿಸುವಂತೆ ತಿಳಿಸಿದ್ದಾರೆ" ಎಂದು ಸ್ಪಷ್ಟಪಡಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರು ರಾಜ್ಯಕ್ಕೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಅವರನ್ನು ಗೌರವಯುತವಾಗಿ ಸ್ವಾಗತಿಸಲಾಗುವುದು. ಈ ಸಂದರ್ಭದಲ್ಲಿ ರಾಜ್ಯದ ವಿಚಾರಗಳನ್ನು ಗೌರವಯುತವಾಗಿ ಪ್ರಸ್ತಾಪಿಸಲಾಗುವುದು ಎಂದು ಮುಖ್ಯಮಂತ್ರಿ ತಿಳಿಸಿದರು.

"ಕರ್ನಾಟಕ ರಾಜ್ಯದಿಂದ ಭಾರತ ದೇಶಕ್ಕೆ ಗೌರವ ಬರುವ ವಿಚಾರ ಇದೆ. ಹೀಗಾಗಿ ಅವರು ನಮಗೆ ಸಹಕಾರ ನೀಡಬೇಕು, ನಾವು ಅವರಿಗೆ ಸಹಕಾರ ನೀಡಬೇಕು" ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

ಪ್ರಧಾನಿಯವರೊಂದಿಗೆ ಖಾಸಗಿ ಮಾತುಕತೆಗೆ ಸಮಯ ಕೋರಿರುವ ಮುಖ್ಯಮಂತ್ರಿಗಳ ಹೇಳಿಕೆ ರಾಜಕೀಯ ವಲಯದಲ್ಲಿ ಹಲವು ಚರ್ಚೆಗಳಿಗೆ ಕಾರಣವಾಗಿದ್ದು, ಭೇಟಿಯಲ್ಲಿ ಯಾವ ವಿಚಾರಗಳನ್ನು ಪ್ರಸ್ತಾಪಿಸಲಿದ್ದಾರೆ ಎಂಬ ಕುತೂಹಲ ಮೂಡಿದೆ.

ಹಾಸನಾಂಬೆ ದೇಗುಲಕ್ಕೆ 29.55 ಕೋಟಿ ರೂ. ಆದಾಯ

● ವಿಕ್ರಮ ವಾಹಿನಿ । ಹಾಸನ

ಹಾಸನಾಂಬೆ ದರ್ಶನೋತ್ಸವ ಮುಕ್ತಾಯಗೊಂಡ ಬೆನ್ನಲ್ಲೇ ದೇವಾಲಯದ ಹುಂಡಿ ಹಣ ಎಣಿಕೆ ಕಾರ್ಯ ನಡೆದಿದ್ದು, ಈ ಬಾರಿ ಒಟ್ಟು 29.55 ಕೋಟಿ ರೂಪಾಯಿ ಆದಾಯ ಸಂಗ್ರಹವಾಗಿದೆ. ಹುಂಡಿ ಕಾಣಿಕೆಯಿಂದ 3.71 ಕೋಟಿ ರೂಪಾಯಿ ಹಾಗೂ ಟಿಕೆಟ್ ಮತ್ತು ಲಡ್ಡು ಪ್ರಸಾದ ಮಾರಾಟದಿಂದ 25.82 ಕೋಟಿ ರೂಪಾಯಿ ಆದಾಯ ಬಂದಿದೆ.

ಕಳೆದ ವರ್ಷಕ್ಕೆ ಹೋಲಿಸಿದರೆ ಈ ಬಾರಿ ದೇವಾಲಯದ ಆದಾಯದಲ್ಲಿ ಸುಮಾರು 4 ಕೋಟಿ ರೂಪಾಯಿ ಹೆಚ್ಚಳವಾಗಿದೆ ಎಂದು ದೇವಾಲಯದ ಆಡಳಿತಾಧಿಕಾರಿ ಜಗದೀಶ್ ಗಂಗಣ್ಣನವರ್ ತಿಳಿಸಿದ್ದಾರೆ.

2025ರಲ್ಲಿ ಎಲ್ಲ ಮೂಲಗಳಿಂದ ಒಟ್ಟು 25.59 ಕೋಟಿ ರೂಪಾಯಿ ಸಂಗ್ರಹವಾಗಿತ್ತು.

ಆದರೆ 2026ರಲ್ಲಿ ಆದಾಯ 29.55 ಕೋಟಿ ರೂಪಾಯಿಗೆ ಏರಿಕೆಯಾಗಿದೆ. ಈ ಬಾರಿ ಹಾಸನಾಂಬೆ ದರ್ಶನಕ್ಕೆ ಭಕ್ತರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದ್ದು, ಕಳೆದ ವರ್ಷಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸಿದ್ದಾರೆ. 2025ರಲ್ಲಿ 25.36 ಲಕ್ಷ ಭಕ್ತರು ಹಾಸನಾಂಬೆಯ ದರ್ಶನ ಪಡೆದಿದ್ದರೆ, 2026ರಲ್ಲಿ 30.06 ಲಕ್ಷ ಭಕ್ತರು ದೇವಿಯ ದರ್ಶನ ಪಡೆದಿದ್ದಾರೆ.

ಸರ್ಕಾರಿ ಆಸ್ಪತ್ರೆಗಳ ವೈದ್ಯರು ಕೇಂದ್ರ ಸ್ಥಾನದಲ್ಲೇ ವಾಸವಿರುವುದು ಕಡ್ಡಾಯ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ತಾಲ್ಲೂಕು ಆಸ್ಪತ್ರೆಗಳು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುವ ವೈದ್ಯರು ಹಾಗೂ ಇತರೆ ಸಿಬ್ಬಂದಿ ತಾವು ಕರ್ತವ್ಯ ನಿರ್ವಹಿಸುವ ಆರೋಗ್ಯ ಕೇಂದ್ರದ ವ್ಯಾಪ್ತಿಯಲ್ಲಿಯೇ ವಾಸ್ತವ್ಯ ಹೂಡುವುದನ್ನು ಖಚಿತಪಡಿಸಿಕೊಳ್ಳಲು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮಹತ್ವದ ಸೂಚನೆ ಹೊರಡಿಸಿದೆ. ವೈದ್ಯರು ಮತ್ತು ಸಿಬ್ಬಂದಿಯ ರಾತ್ರಿ ವೇಳೆಯ ಹಾಜರಾತಿಯನ್ನು 'ಕರ್ತವ್ಯ' ಆಪ್ ಮೂಲಕ ದಾಖಲಿಸುವುದನ್ನು ಕಡ್ಡಾಯವಾಗಿ ಜಾರಿಗೊಳಿಸುವಂತೆ ಆದೇಶಿಸಿದೆ.

ಈ ಕುರಿತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಆಯುಕ್ತಾಲಯವು ನ.11ರಂದು ಸುತ್ತೋಲೆ ಹೊರಡಿಸಿದ್ದು, ರಾಜ್ಯದ ಎಲ್ಲ ತಾಲ್ಲೂಕು ಆಸ್ಪತ್ರೆಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು ಹಾಗೂ ಇತರೆ ಆರೋಗ್ಯ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುವ ವೈದ್ಯರು ಮತ್ತು ಸಿಬ್ಬಂದಿಗೆ ಈ ಸೂಚನೆ ಅನ್ವಯವಾಗಲಿದೆ.

ಸರ್ಕಾರದ ಆದೇಶದಂತೆ ವೈದ್ಯರು ಮತ್ತು ಆರೋಗ್ಯ ಸಿಬ್ಬಂದಿ ತಮಗೆ ನಿಯೋಜಿಸಿರುವ ಆರೋಗ್ಯ ಕೇಂದ್ರಗಳ ಕೇಂದ್ರ ಸ್ಥಾನದಲ್ಲಿಯೇ ವಾಸವಿರುವುದನ್ನು ಖಚಿತಪಡಿಸಿಕೊಳ್ಳಬೇಕು.

ಈ ಉದ್ದೇಶದಿಂದ ನವೆಂಬರ್ 1ರಿಂದಲೇ ರಾತ್ರಿ ವೇಳೆಯ ಹಾಜರಾತಿಯನ್ನು 'ಕರ್ತವ್ಯ' ಆಪ್ ಮೂಲಕ ದಾಖಲಿಸುವ ವ್ಯವಸ್ಥೆಯನ್ನು ಕಡ್ಡಾಯವಾಗಿ ಪಾಲಿಸುವಂತೆ ಸೂಚಿಸಲಾಗಿದೆ.

ವೈದ್ಯರು ಮತ್ತು ಸಿಬ್ಬಂದಿ ರಾತ್ರಿ ವೇಳೆಯಲ್ಲಿಯೂ ಕೇಂದ್ರ ಸ್ಥಾನದಲ್ಲಿ ಲಭ್ಯವಿರುವುದನ್ನು ಖಚಿತಪಡಿಸಲು ಸುತ್ತೋಲೆಯಲ್ಲಿ ಹಲವು ಕ್ರಮಗಳನ್ನು ಉಲ್ಲೇಖಿಸಲಾಗಿದೆ. 'ಕರ್ತವ್ಯ' ಆಪ್ ಮೂಲಕ ರಾತ್ರಿ ಹಾಜರಾತಿ ದಾಖಲಿಸುವುದು ಕಡ್ಡಾಯವಾಗಿದ್ದು, ಸಿಬ್ಬಂದಿ ಕೇಂದ್ರ ಸ್ಥಾನದಲ್ಲಿಯೇ ವಾಸವಿರುವುದನ್ನು ದೃಢಪಡಿಸಲು ಸ್ಥಳಾಧಾರಿತ ಹಾಜರಾತಿ ವ್ಯವಸ್ಥೆಯನ್ನು ಬಳಸಬೇಕು. ವೈದ್ಯರು ಮತ್ತು ಸಿಬ್ಬಂದಿಯ ವಾಸ್ತವ್ಯ ಹಾಗೂ ಹಾಜರಾತಿ ವಿವರಗಳನ್ನು ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲಿಸಬೇಕು. ಹಾಜರಾತಿ ದಾಖಲಿಸುವ ಪ್ರಕ್ರಿಯೆಯಲ್ಲಿ ಯಾವುದೇ ಲೋಪವಾಗದಂತೆ ನಿರಂತರ ಮೇಲ್ವಿಚಾರಣೆ ನಡೆಸಬೇಕು ಎಂದು ತಾಕೀತು ಮಾಡಲಾಗಿದೆ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ತಾಲ್ಲೂಕು ಆರೋಗ್ಯಾಧಿಕಾರಿಗಳು ಹಾಗೂ ಸಂಬಂಧಪಟ್ಟ ಆಡಳಿತಾಧಿಕಾರಿಗಳಿಗೆ ಈ ವ್ಯವಸ್ಥೆಯ ಅನುಷ್ಠಾನದ ಜವಾಬ್ದಾರಿ ವಹಿಸಲಾಗಿದೆ. ವೈದ್ಯರು ಮತ್ತು ಸಿಬ್ಬಂದಿ ನಿಯೋಜಿತ ಕೇಂದ್ರ ಸ್ಥಾನದಲ್ಲಿಯೇ ವಾಸವಿರುವುದನ್ನು ಖಚಿತಪಡಿಸಿಕೊಳ್ಳುವುದರ ಜತೆಗೆ, ರಾತ್ರಿ ವೇಳೆಯ ಹಾಜರಾತಿ ದಾಖಲಿಸುವ ವ್ಯವಸ್ಥೆಯ ಮೇಲ್ವಿಚಾರಣೆಯನ್ನೂ ಅವರು ನಡೆಸಬೇಕು ಎಂದು ಸೂಚಿಸಲಾಗಿದೆ.

ಗ್ರಾಮೀಣ ಪ್ರದೇಶಗಳ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರು ಮತ್ತು ಸಿಬ್ಬಂದಿ ರಾತ್ರಿ ವೇಳೆಯಲ್ಲಿ ಲಭ್ಯವಿರುವುದಿಲ್ಲ ಎಂಬ ಸಾರ್ವಜನಿಕ ದೂರುಗಳಿಗೆ ಕಡಿವಾಣ ಹಾಕುವುದು ಈ ಕ್ರಮದ ಪ್ರಮುಖ ಉದ್ದೇಶವಾಗಿದೆ.

ತುರ್ತು ಆರೋಗ್ಯ ಸೇವೆಗಳ ಅಗತ್ಯವಿರುವ ಸಂದರ್ಭದಲ್ಲಿ ಸ್ಥಳೀಯವಾಗಿಯೇ ಜನರಿಗೆ ವೈದ್ಯಕೀಯ ನೆರವು ದೊರೆಯುವಂತೆ ಮಾಡುವುದು ಹಾಗೂ ಸರ್ಕಾರಿ ಆರೋಗ್ಯ ಸೇವೆಗಳ ಹೊಣೆಗಾರಿಕೆಯನ್ನು ಹೆಚ್ಚಿಸುವುದು ಇಲಾಖೆಯ ಆಶಯವಾಗಿದೆ.

ಇಂದು ರಾಜ್ಯಕ್ಕೆ ಮೋದಿ ಭೇಟಿ: ರೂ.15,600 ಕೋಟಿಗೂ ಅಧಿಕ ಮೌಲ್ಯದ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ

● ವಿಕ್ರಮ ವಾಹಿನಿ । ಬೆಂಗಳೂರು

ಪ್ರಧಾನಿ ನರೇಂದ್ರ ಮೋದಿ ಅವರು ನಾಳೆ (ಶುಕ್ರವಾರ) ಕರ್ನಾಟಕಕ್ಕೆ ಭೇಟಿ ನೀಡಲಿದ್ದು, ರಾಜ್ಯದಲ್ಲಿ ರೂ.15,600 ಕೋಟಿಗೂ ಅಧಿಕ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಲಿದ್ದಾರೆ. ನಗರ ಸಾರಿಗೆ, ರೈಲ್ವೆ, ವಿದ್ಯುತ್ ಪ್ರಸರಣ, ನವೀಕರಿಸಬಹುದಾದ ಇಂಧನ, ಪೆಟ್ರೋಲಿಯಂ ಹಾಗೂ ತ್ಯಾಜ್ಯ ನಿರ್ವಹಣೆ ಸೇರಿದಂತೆ ಹಲವು ಪ್ರಮುಖ ಕ್ಷೇತ್ರಗಳ ಯೋಜನೆಗಳು ಈ ಕಾರ್ಯಕ್ರಮದಲ್ಲಿ ಸೇರಿವೆ.

ಪ್ರಧಾನಿ ಮೋದಿ ಅವರು ಬೆಳಿಗ್ಗೆ 10.45ರ ಸುಮಾರಿಗೆ ಬೆಂಗಳೂರಿನ ಪ್ರಶಾಂತಿ ಕುಟೀರಂನಲ್ಲಿ ನಡೆಯಲಿರುವ ಸ್ವಾಮಿ ವಿವೇಕಾನಂದ ಯೋಗ ಅನುಸಂಧಾನ ಸಂಸ್ಥೆಯ ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಲಿದ್ದಾರೆ. ಬಳಿಕ ಮಧ್ಯಾಹ್ನ 12.45ರ ಸುಮಾರಿಗೆ ತಾವರೆಕೆರೆಯಿಂದ ಐಐಎಂ ಬೆಂಗಳೂರು ಮೆಟ್ರೋ ನಿಲ್ದಾಣದವರೆಗೆ ಮೆಟ್ರೋ ರೈಲು ಸಂಚಾರಕ್ಕೆ ಚಾಲನೆ ನೀಡಲಿದ್ದು, ಸ್ವತಃ ಮೆಟ್ರೋದಲ್ಲಿ ಪ್ರಯಾಣಿಸಲಿದ್ದಾರೆ.

ಮಧ್ಯಾಹ್ನ 1.15ರ ಸುಮಾರಿಗೆ ರೂ.15,600 ಕೋಟಿಗೂ ಅಧಿಕ ಮೊತ್ತದ ಯೋಜನೆಗಳ ಉದ್ಘಾಟನೆ, ಶಂಕುಸ್ಥಾಪನೆ ಹಾಗೂ ರಾಷ್ಟ್ರಕ್ಕೆ ಸಮರ್ಪಿಸುವ ಕಾರ್ಯಕ್ರಮ ನಡೆಯಲಿದೆ. ಈ ಪೈಕಿ ಸುಮಾರು ರೂ.3,470 ಕೋಟಿ ವೆಚ್ಚದಲ್ಲಿ ನಿರ್ಮಿಸಲಾಗಿರುವ ಬೆಂಗಳೂರು ಮೆಟ್ರೋ ಪಿಂಕ್ ಮಾರ್ಗದ ಕಾಳೇನ ಅಗ್ರಹಾರ-ತಾವರೆಕೆರೆ ವಿಭಾಗ ಪ್ರಮುಖ ಯೋಜನೆಯಾಗಿದೆ.

ಬೆಂಗಳೂರು ಈಗಾಗಲೇ ದೇಶದ ಪ್ರಮುಖ ಮೆಟ್ರೋ ನಗರಗಳ ಪೈಕಿ ಒಂದಾಗಿದ್ದು, ದೆಹಲಿಯ ನಂತರ ಅತಿ ಉದ್ದದ ಮೆಟ್ರೋ ರೈಲು ಜಾಲ ಹೊಂದಿರುವ ನಗರ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಪಿಂಕ್ ಮಾರ್ಗದ ಈ ವಿಭಾಗ ಕಾರ್ಯಾರಂಭ ಮಾಡುವುದರಿಂದ ನಗರದ ಮೆಟ್ರೋ ಸಂಪರ್ಕ ಮತ್ತಷ್ಟು ವಿಸ್ತಾರಗೊಳ್ಳಲಿದೆ. ದಕ್ಷಿಣ ಬೆಂಗಳೂರಿನ ಪ್ರಮುಖ ವಸತಿ, ಶಿಕ್ಷಣ ಹಾಗೂ ವಾಣಿಜ್ಯ ಪ್ರದೇಶಗಳಿಗೆ ವೇಗದ ಸಾರ್ವಜನಿಕ ಸಾರಿಗೆ ಸಂಪರ್ಕ ದೊರೆಯಲಿದೆ.

ಪ್ರಧಾನಿ ಮೋದಿ ಅವರು ಕೊಪ್ಪಳ-ಖಖ ಮತ್ತು ಗದಗ-ಖಖ ನವೀಕರಿಸಬಹುದಾದ ಇಂಧನ ವಲಯಗಳ ಎರಡನೇ ಹಂತದ ಪ್ರಸರಣ ಯೋಜನೆಯನ್ನು ರೂ.4,450 ಕೋಟಿ ವೆಚ್ಚದಲ್ಲಿ ಉದ್ಘಾಟಿಸಲಿದ್ದಾರೆ. ಈ ಯೋಜನೆಯಿಂದ ಸುಮಾರು 2 ಗಿಗಾವಾಟ್ ನವೀಕರಿಸಬಹುದಾದ ಇಂಧನವನ್ನು ವಿದ್ಯುತ್ ಗ್ರಿಡ್‌ಗೆ ಸಾಗಿಸಲು ಸಾಧ್ಯವಾಗಲಿದೆ.

ಅದೇ ರೀತಿ, ರೂ.1,370 ಕೋಟಿ ವೆಚ್ಚದ ಬೀದರ್ ಸೌರಶಕ್ತಿ ವಲಯದ ಪ್ರಸರಣ ಯೋಜನೆಯಿಂದ 2.5 ಗಿಗಾವಾಟ್ ಸೌರಶಕ್ತಿಯನ್ನು ಸಾಗಿಸಲು ಅನುಕೂಲವಾಗಲಿದೆ.

ದಾವಣಗೆರೆ-ಚಿತ್ರದುರ್ಗ ಮತ್ತು ಬಳ್ಳಾರಿ ನವೀಕರಿಸಬಹುದಾದ ಇಂಧನ ವಲಯಗಳನ್ನು ಸಂಪರ್ಕಿಸುವ ರೂ.3,450 ಕೋಟಿಗೂ ಅಧಿಕ ಮೊತ್ತದ ಪ್ರಸರಣ ಯೋಜನೆಗೂ ಶಂಕುಸ್ಥಾಪನೆ ನೆರವೇರಲಿದೆ. ದಾವಣಗೆರೆ ಮತ್ತು ಬಳ್ಳಾರಿಯಲ್ಲಿ ಹೆಚ್ಚುವರಿಯಾಗಿ ಉತ್ಪಾದನೆಯಾಗುವ ನವೀಕರಿಸಬಹುದಾದ ಇಂಧನ ಸಾಮರ್ಥ್ಯವನ್ನು ವಿದ್ಯುತ್ ಗ್ರಿಡ್‌ಗೆ ಸೇರಿಸಲು ರೂ.1,100 ಕೋಟಿಗೂ ಅಧಿಕ ವೆಚ್ಚದ ಪ್ರಸರಣ ವ್ಯವಸ್ಥೆ ಬಲವರ್ಧನೆ ಯೋಜನೆಗೂ ಚಾಲನೆ ದೊರೆಯಲಿದೆ.

ಮಂಗಳೂರಿನಲ್ಲಿ ರೂ.850 ಕೋಟಿಗೂ ಅಧಿಕ ವೆಚ್ಚದಲ್ಲಿ ನಿರ್ಮಿಸಲಾಗಿರುವ 80,000 ಮೆಟ್ರಿಕ್ ಟನ್ ಸಾಮರ್ಥ್ಯದ ಭೂಗತ ಎಲ್‌ಪಿಜಿ ಸಂಗ್ರಹಣಾ ಘಟಕವನ್ನು ಪ್ರಧಾನಿ ಮೋದಿ ರಾಷ್ಟ್ರಕ್ಕೆ ಸಮರ್ಪಿಸಲಿದ್ದಾರೆ. ಇದು ದೇಶದ ಅತಿದೊಡ್ಡ ಭೂಗತ ಎಲ್‌ಪಿಜಿ ಸಂಗ್ರಹಣಾ ಘಟಕ ಎಂದು ಹೇಳಲಾಗಿದೆ.

ಹೊಸ ಮಂಗಳೂರು ಬಂದರನ್ನು ಮುಖ್ಯ ಟರ್ಮಿನಲ್‌ಗೆ ಸಂಪರ್ಕಿಸುವ 9.4 ಕಿ.ಮೀ. ಉದ್ದದ ಎಲ್‌ಪಿಜಿ ಕೊಳವೆ ಮಾರ್ಗವೂ ಈ ಯೋಜನೆಯ ಭಾಗವಾಗಿದೆ.

ಇದರೊಂದಿಗೆ ಬೆಂಗಳೂರಿನ ದೇವನಗೊಂದಿಯಲ್ಲಿ ರೂ.330 ಕೋಟಿ ವೆಚ್ಚದಲ್ಲಿ ಅಭಿವೃದ್ಧಿಪಡಿಸಿರುವ ಎಂಆರ್‌ಪಿಎಲ್‌ನ ಮಾರುಕಟ್ಟೆ ಟರ್ಮಿನಲ್ ಅನ್ನೂ ರಾಷ್ಟ್ರಕ್ಕೆ ಸಮರ್ಪಿಸಲಾಗುತ್ತದೆ.

ಬೆಂಗಳೂರಿನ ಹರಳಕುಂಟೆಯಲ್ಲಿ ಗೇಲ್ ಸಂಸ್ಥೆ ಸ್ಥಾಪಿಸಲಿರುವ ಸಂಕುಚಿತ ಜೈವಿಕ ಅನಿಲ ಘಟಕಕ್ಕೂ ಶಂಕುಸ್ಥಾಪನೆ ನೆರವೇರಲಿದೆ. ಈ ಘಟಕವು ಪ್ರತಿದಿನ ಸುಮಾರು 300 ಟನ್ ಪುರಸಭೆಯ ಘನತ್ಯಾಜ್ಯವನ್ನು ಸಂಸ್ಕರಿಸಿ, ಸುಮಾರು 12.6 ಟನ್ ಸಂಕುಚಿತ ಜೈವಿಕ ಅನಿಲ ಉತ್ಪಾದಿಸುವ ಗುರಿ ಹೊಂದಿದೆ. ಇದರಿಂದ ತ್ಯಾಜ್ಯ ನಿರ್ವಹಣೆಯ ಜೊತೆಗೆ ಪರ್ಯಾಯ ಇಂಧನ ಉತ್ಪಾದನೆಗೂ ಉತ್ತೇಜನ ದೊರೆಯಲಿದೆ.

ಅಮೃತ ಭಾರತ್ ನಿಲ್ದಾಣ ಯೋಜನೆಯಡಿ ಮರು ಅಭಿವೃದ್ಧಿಪಡಿಸಿರುವ ಚಾಮರಾಜನಗರ, ಚಿಕ್ಕಮಗಳೂರು, ಸಕಲೇಶಪುರ ಮತ್ತು ಸುಬ್ರಹ್ಮಣ್ಯ ರಸ್ತೆ ರೈಲು ನಿಲ್ದಾಣಗಳನ್ನು ಪ್ರಧಾನಿ ಉದ್ಘಾಟಿಸಲಿದ್ದಾರೆ. ಈ ನಿಲ್ದಾಣಗಳಲ್ಲಿ ಪ್ರಯಾಣಿಕರಿಗೆ ಸುಧಾರಿತ ಸೌಲಭ್ಯಗಳು ದೊರೆಯಲಿವೆ.

ಕರ್ನಾಟಕ ಪ್ರವಾಸದ ಅಂತಿಮ ಹಂತದಲ್ಲಿ ಪ್ರಧಾನಿ ಮೋದಿ ಅವರು ಮೈಸೂರಿಗೆ ತೆರಳಲಿದ್ದು, ಮಧ್ಯಾಹ್ನ ಸುಮಾರು 3.30ಕ್ಕೆ 'ಏಕ್ ಪೇಡ್ ಮಾ ಕೆ ನಾಮ್' ಅಭಿಯಾನದ ಭಾಗವಾಗಿ ಭಾರತ್ ವನ್‌ನಲ್ಲಿ ಸಸಿ ನೆಡುವ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಮಿಯಾವಾಕಿ ತಂತ್ರಜ್ಞಾನ ಬಳಸಿಕೊಂಡು ಸ್ಥಳೀಯ ಸಸ್ಯ ಪ್ರಭೇದಗಳ ಮೂಲಕ ದಟ್ಟವಾದ ನಗರ ಅರಣ್ಯ ಬೆಳೆಸುವುದು ಭಾರತ್ ವನ್‌ನ ಉದ್ದೇಶವಾಗಿದೆ. ಈ ಮೂಲಕ ನಗರ ಪರಿಸರ ಸಂರಕ್ಷಣೆ ಹಾಗೂ ಹಸಿರು ಪ್ರದೇಶಗಳ ವಿಸ್ತರಣೆಗೆ ಉತ್ತೇಜನ ನೀಡಲಾಗುತ್ತಿದೆ.

ಒಟ್ಟಿನಲ್ಲಿ, ಪ್ರಧಾನಿ ಮೋದಿ ಅವರ ಕರ್ನಾಟಕ ಭೇಟಿಯ ಸಂದರ್ಭದಲ್ಲಿ ಮೆಟ್ರೋ ಮತ್ತು ರೈಲ್ವೆ ಸಂಪರ್ಕ ವಿಸ್ತರಣೆ, ನವೀಕರಿಸಬಹುದಾದ ಇಂಧನ ಉತ್ಪಾದನೆಗೆ ಅಗತ್ಯವಾದ ಪ್ರಸರಣ ವ್ಯವಸ್ಥೆ, ಎಲ್‌ಪಿಜಿ ಸಂಗ್ರಹಣೆ, ತ್ಯಾಜ್ಯದಿಂದ ಇಂಧನ ಉತ್ಪಾದನೆ ಹಾಗೂ ನಗರ ಹಸಿರೀಕರಣಕ್ಕೆ ಸಂಬಂಧಿಸಿದ ಹಲವು ಯೋಜನೆಗಳು ಮುನ್ನೆಲೆಗೆ ಬರಲಿವೆ.

ಇಬ್ಬರು ಪೊಲೀಸ್ ಅಧಿಕಾರಿಗಳ ಹತ್ಯೆ, ಸರ್ವಿಸ್ ಗನ್‌ಗಳು ನಾಪತ್ತೆ!

● ವಿಕ್ರಮ ವಾಹಿನಿ । ಶ್ರೀನಗರ

ಜಮ್ಮು ಮತ್ತು ಕಾಶ್ಮೀರದ ಕಿಶ್ತ್ವಾರ್ ಜಿಲ್ಲೆಯಲ್ಲಿ ಒಂದು ದಿನದ ಹಿಂದೆ ನಾಪತ್ತೆಯಾಗಿದ್ದ ಇಬ್ಬರು ವಿಶೇಷ ಪೊಲೀಸ್ ಅಧಿಕಾರಿಗಳ (ಎಸ್‌ಪಿಒ) ಮೃತದೇಹಗಳು ಇಂದು ಗುರುವಾರ ಮುಂಜಾನೆ ಪತ್ತೆಯಾಗಿವೆ. ಇಬ್ಬರ ದೇಹಗಳ ಮೇಲೂ ಗುಂಡೇಟಿನ ಗುರುತುಗಳು ಕಂಡುಬಂದಿದ್ದು, ಅವರ ಬಳಿಯಿದ್ದ ಸೇವಾ ಶಸ್ತ್ರಾಸ್ತ್ರಗಳು ನಾಪತ್ತೆಯಾಗಿವೆ. ಹೀಗಾಗಿ ಈ ಘಟನೆಯ ಹಿಂದೆ ಉಗ್ರರ ಕೈವಾಡ ಇರುವ ಸಾಧ್ಯತೆಯನ್ನು ಅಧಿಕಾರಿಗಳು ಶಂಕಿಸಿದ್ದು, ತನಿಖೆ ಆರಂಭಿಸಿದ್ದಾರೆ.

ಮೃತರನ್ನು ದಚ್ಚನ್ ಪ್ರದೇಶದ ಕಿಯಾರ್ ಗ್ರಾಮದ ನಿವಾಸಿಗಳಾದ ಬಾಬಿ ಚಂದ್ (57) ಮತ್ತು ರಾಶ್ಪಾಲ್ ಕುಮಾರ್ (45) ಎಂದು ಗುರುತಿಸಲಾಗಿದೆ. ಇವರಿಬ್ಬರೂ ಕಿಶ್ತ್ವಾರ್ ಪೊಲೀಸ್ ಇಲಾಖೆಯ ವಿಶೇಷ ಕಾರ್ಯಾಚರಣೆ ತಂಡದಲ್ಲಿ (ಎಸ್‌ಒಜಿ) ಕಾರ್ಯನಿರ್ವಹಿಸುತ್ತಿದ್ದರು. ಕಿಯಾರ್ ವಲಯದಲ್ಲಿ ಕರ್ತವ್ಯಕ್ಕೆ ನಿಯೋಜಿಸಲಾಗಿತ್ತು.

ಅಧಿಕಾರಿಗಳ ಮಾಹಿತಿ ಪ್ರಕಾರ, ಚಂದ್ ಮತ್ತು ಕುಮಾರ್ ಅವರನ್ನು ಮಾರ್ವಾಹ್‌ನ ಧರ್ನಾ ಪ್ರದೇಶದಲ್ಲಿರುವ 17ನೇ ರಾಷ್ಟ್ರೀಯ ರೈಫಲ್ಸ್‌ನ ತಾತ್ಕಾಲಿಕ ಕಾರ್ಯಾಚರಣೆ ನೆಲೆಯಲ್ಲಿ ಕರ್ತವ್ಯ ನಿರ್ವಹಿಸಲು ನಿಯೋಜಿಸಲಾಗಿತ್ತು. ಬುಧವಾರ ಕಿಯಾರ್‌ನಲ್ಲಿರುವ ತಮ್ಮ ಶಿಬಿರದಿಂದ ಸೇನಾ ನೆಲೆಗೆ ತೆರಳುತ್ತಿದ್ದ ವೇಳೆ ಇಬ್ಬರೂ ನಾಪತ್ತೆಯಾಗಿದ್ದರು. ನಿಗದಿತ ಸಮಯಕ್ಕೆ ಕರ್ತವ್ಯಕ್ಕೆ ಹಾಜರಾಗದ ಹಿನ್ನೆಲೆಯಲ್ಲಿ ಅವರಿಗಾಗಿ ಶೋಧ ಕಾರ್ಯ ಆರಂಭಿಸಲಾಗಿತ್ತು.

ಇಬ್ಬರು ಪೊಲೀಸ್ ಅಧಿಕಾರಿಗಳು ನಾಪತ್ತೆಯಾಗಿರುವ ಮಾಹಿತಿ ಲಭ್ಯವಾಗುತ್ತಿದ್ದಂತೆ ಸೇನೆ ಮತ್ತು ಭದ್ರತಾ ಪಡೆಗಳು ವಿಶೇಷ ಶೋಧ ಕಾರ್ಯಾಚರಣೆ ಕೈಗೊಂಡಿದ್ದವು. ದಚ್ಚನ್‌ನ ಪರ್ವತ ಪ್ರದೇಶಗಳು ಹಾಗೂ ದಟ್ಟ ಅರಣ್ಯಗಳಲ್ಲಿ ವ್ಯಾಪಕ ಶೋಧ ನಡೆಸಲಾಗಿತ್ತು. ಗುರುವಾರ ಮುಂಜಾನೆ ಇಬ್ಬರ ಮೃತದೇಹಗಳು ಪತ್ತೆಯಾಗಿವೆ. ಆದರೆ ಅವರ ಸೇವಾ ಶಸ್ತ್ರಾಸ್ತ್ರಗಳು ನಾಪತ್ತೆಯಾಗಿರುವುದು ಭದ್ರತಾ ಪಡೆಗಳ ಆತಂಕವನ್ನು ಹೆಚ್ಚಿಸಿದೆ. ಹತ್ಯೆಯ ಬಳಿಕ ಶಸ್ತ್ರಾಸ್ತ್ರಗಳನ್ನು ಕೊಂಡೊಯ್ಯಲಾಗಿದೆಯೇ ಎಂಬ ಬಗ್ಗೆಯೂ ತನಿಖೆ ನಡೆಯುತ್ತಿದೆ.

ಈ ಘಟನೆಯಲ್ಲಿ ಉಗ್ರರ ಕೈವಾಡ ಇರುವ ಸಾಧ್ಯತೆಯನ್ನು ಅಧಿಕಾರಿಗಳು ಪರಿಶೀಲಿಸುತ್ತಿದ್ದಾರೆ. ಕಿಶ್ತ್ವಾರ್ ಜಿಲ್ಲೆಯಲ್ಲಿ ಇತ್ತೀಚಿನ ವರ್ಷಗಳಲ್ಲಿ ಭಯೋತ್ಪಾದನಾ ಚಟುವಟಿಕೆಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಈ ಘಟನೆ ಭದ್ರತಾ ಪಡೆಗಳಿಗೆ ಮತ್ತಷ್ಟು ಸವಾಲಾಗಿ ಪರಿಣಮಿಸಿದೆ.

ಲಭ್ಯವಿರುವ ಅಂಕಿಅಂಶಗಳ ಪ್ರಕಾರ, 2026ರಲ್ಲಿ ಕಿಶ್ತ್ವಾರ್ ಜಿಲ್ಲೆಯಲ್ಲಿ ನಡೆದ ಭಯೋತ್ಪಾದನಾ ಘಟನೆಗಳಲ್ಲಿ ನಾಲ್ವರು ಉಗ್ರರು ಹಾಗೂ ಒಬ್ಬ ಸೇನಾ ಯೋಧ ಸೇರಿದಂತೆ ಒಟ್ಟು ಐವರು ಮೃತಪಟ್ಟಿದ್ದಾರೆ.

2025ರಲ್ಲಿ ಮೂವರು ಉಗ್ರರು ಮತ್ತು ಒಬ್ಬ ಸೇನಾ ಯೋಧ ಸೇರಿದಂತೆ ನಾಲ್ವರು ಸಾವನ್ನಪ್ಪಿದ್ದರು. 2024ರಲ್ಲಿ ನಡೆದ ಘಟನೆಗಳಲ್ಲಿ ಮೂವರು ಭದ್ರತಾ ಸಿಬ್ಬಂದಿ ಹಾಗೂ ಇಬ್ಬರು ನಾಗರಿಕರು ಮೃತಪಟ್ಟಿದ್ದರು.

ವಕೀಲರ ಹತ್ಯೆ: ಆರೋಪಿ ಬಂಧನ


● ವಿಕ್ರಮ ವಾಹಿನಿ । ಬೆಂಗಳೂರು

ನಗರದ ವೈಟ್‌ಫೀಲ್ಡ್ ಪೊಲೀಸ್ ಠಾಣೆ ವ್ಯಾಪ್ತಿಯ ಪಟ್ಟಂದೂರು ಅಗ್ರಹಾರದಲ್ಲಿ ವಕೀಲ ಮಂಜುನಾಥ್ (43) ಅವರನ್ನು ಗುಂಡಿಕ್ಕಿ ಹತ್ಯೆ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಮುಖ ಆರೋಪಿಯನ್ನು ಬಿಹಾರದಲ್ಲಿ ಬಂಧಿಸಲಾಗಿದೆ. ಅಮಿತ್ ಕುಮಾರ್ ದುಬೆ (25) ಬಂಧಿತ ಆರೋಪಿ. ಈತ ಬಿಹಾರದ ಬಕ್ಸಾ ಜಿಲ್ಲೆಯ ವಂಶೀಧರ್ ದುಬೆ ಅವರ ಪುತ್ರ ಎಂದು ಪೊಲೀಸರು ತಿಳಿಸಿದ್ದಾರೆ. ಪಟ್ಟಂದೂರು ಅಗ್ರಹಾರದ ನಿವಾಸಿ ಯಾಗಿದ್ದವಕೀಲ ಮಂಜುನಾಥ್ ಅವರನ್ನು 2026ರ ಅಕ್ಟೋಬರ್ 19ರಂದು ಗುಂಡಿಕ್ಕಿ ಹತ್ಯೆ ಮಾಡಲಾಗಿತ್ತು.

ಗುರು ವಿದುಷಿ ಶಿಲ್ಪಾ ಅರುಣ್ ಕುಮಾರ್ ಕಲಾತ್ಮಕ ದೃಷ್ಟಿಕೋನದಲ್ಲಿ ಅರಳಿದ ಭರತನಾಟ್ಯ

ಶಾಸ್ತ್ರೀಯ ಪರಂಪರೆ, ನವೀನ ನೃತ್ಯ ಸಂಯೋಜನೆ ಮತ್ತು ಭಾವಪೂರ್ಣ ಕಥನದ ಸುಂದರ ಸಮನ್ವಯ

● ವಿಕ್ರಮ ವಾಹಿನಿ । ನವದೆಹಲಿ



2026ರ ನವೆಂಬರ್ 11ರಂದು ನವದೆಹಲಿಯ ಕಮಾಣಿ ಸಭಾಂಗಣದಲ್ಲಿ ಶೌರ್ಯ ಚಾರಿಟಬಲ್ ಟ್ರಸ್ಟ್‌ನ ಆಶ್ರಯದಲ್ಲಿ ಕುಮಾರಿ ಜಯತಿ ಗೋಯಲ್ ಅವರ ಭರತನಾಟ್ಯ ರಂಗ ಪ್ರವೇಶ ಕಾರ್ಯಕ್ರಮ ಅದ್ದೂರಿಯಾಗಿ ನಡೆಯಿತು. ಗುರು ವಿದುಷಿ ಶ್ರೀಮತಿ ಶಿಲ್ಪಾ ಅರುಣ್‌ಕುಮಾರ್ ಅವರ ನೃತ್ಯ ಸಂಯೋಜನೆ ಮತ್ತು ಕಲಾತ್ಮಕ ಮಾರ್ಗ ದರ್ಶನದಲ್ಲಿ ಮೂಡಿಬಂದ ಈ ಕಾರ್ಯಕ್ರಮವು ಅವರ ಸೃಜನಶೀಲತೆ ಹಾಗೂ ಬಹುಮುಖ ಪ್ರತಿಭೆಗೆ ಸಾಕ್ಷಿಯಾಯಿತು.

ಬಾಲಚಿತ್ರ ರತ್ನ ಪ್ರಶಸ್ತಿ ಪುರಸ್ಕೃತರಾದ ಶಿಲ್ಪಾ ಅರುಣ್ ಕುಮಾರ್ ಅವರು ಭರತನಾಟ್ಯ ಕಲಾವಿದೆ, ನಟ್ಟುವಾಂಗ ಕಲಾವಿದೆ ಹಾಗೂ ದೂರದರ್ಶನದ ಶ್ರೇಣೀಕೃತ ಕಲಾವಿದೆಯಾಗಿದ್ದಾರೆ. ಪಾಂಡನಲ್ಲೂರು ಮತ್ತು ಮೈಸೂರು ಶೈಲಿಗಳಲ್ಲಿ ತರಬೇತಿ ಪಡೆದಿರುವ ಅವರು ದೇಶ-ವಿದೇಶಗಳಲ್ಲಿ ಪ್ರದರ್ಶನಗಳನ್ನು ನೀಡಿದ್ದಾರೆ. ಪ್ರಸ್ತುತ ಭಾರತ ಸರ್ಕಾರದ ಸಂಸ್ಕೃತಿ ಸಚಿವಾಲಯದ ಸಂಗೀತ ನಾಟಕ ಅಕಾಡೆಮಿಯಲ್ಲಿ ಸಂಗೀತ ವಿಭಾಗದ ಕಾರ್ಯಕ್ರಮ ಅಧಿಕಾರಿಯಾಗಿ ಸೇವೆ ಸಲ್ಲಿಸುತ್ತಿದ್ದಾರೆ.

ಶ್ರೀಕೃಷ್ಣನ ಜೀವನ ಮತ್ತು ತತ್ವವನ್ನು ಕೇಂದ್ರವಾಗಿಟ್ಟುಕೊಂಡು ರೂಪಿಸಲಾದ ಈ ರಂಗಪ್ರವೇಶದಲ್ಲಿ ಕೃಷ್ಣನ ಜನನ, ಬಾಲಲೀಲೆಗಳು, ವಿವಿಧ ಪೌರಾಣಿಕ ಪ್ರಸಂಗಗಳು ಹಾಗೂ ಭಗವದ್ಗೀತೆಯ ತತ್ತ್ವೋಪದೇಶವನ್ನು ನೃತ್ಯದ ಮೂಲಕ ಸುಂದರವಾಗಿ ನಿರೂಪಿಸಲಾಯಿತು. ಕೃಷ್ಣನನ್ನು ಬಾಲಕ, ರಕ್ಷಕ, ತತ್ವಜ್ಞಾನಿ ಮತ್ತು ಜಗದ್ಗುರುವಿನ ವಿವಿಧ ಆಯಾಮಗಳಲ್ಲಿ ಪರಿಚಯಿಸಿದ್ದು ಕಾರ್ಯಕ್ರಮದ ವಿಶೇಷತೆಯಾಗಿತ್ತು.

'ತ್ರಿನೇತ್ರಂ – ಭೋ ಶಂಭೋ' ನೃತ್ಯದಲ್ಲಿ ರಾವಣನ ಶಿವಭಕ್ತಿ ಮತ್ತು ಗಂಗಾವತರಣದ ಪ್ರಸಂಗಗಳನ್ನು ಭಾವ ಪೂರ್ಣವಾಗಿ ಸಂಯೋಜಿಸಲಾಗಿತ್ತು. ಕಾರ್ಯಕ್ರಮದ ಪ್ರಮುಖ ಆಕರ್ಷಣೆ ಯಾಗಿದ್ದ ಪದವರ್ಣಂನಲ್ಲಿ ಕೃಷ್ಣನ ಜನನ, ಪೂತನ ಸಂಹಾರ, ಸ್ಯಮಂತಕ ಮಣಿಯ ಪ್ರಸಂಗ, ಜಾಂಬವಂತನೊಂದಿಗಿನ ಮುಖಾಮುಖಿ ಹಾಗೂ ಅರ್ಜುನನಿಗೆ ಭಗವದ್ಗೀತೆಯ ಉಪದೇಶ ನೀಡುವ ಮಹತ್ತರ ಘಟನೆಯನ್ನು ಸಮಗ್ರವಾಗಿ ಕಟ್ಟಿಕೊಡಲಾಯಿತು.

'ಗುಮ್ಮನ ಕರೆಯದಿರೆ' ಕೃತಿಯಲ್ಲಿ ಯಶೋದೆ ಮತ್ತು ಬಾಲಕೃಷ್ಣನ ನಡುವಿನ ಮಾತೃವಾತ್ಸಲ್ಯ, ಬಾಲಲೀಲೆಗಳು ಹಾಗೂ ಮಧುರ ಕ್ಷಣಗಳು ಮನೋಜ್ಞವಾಗಿ ಮೂಡಿಬಂದವು. ಸಂತ ಜನಾಬಾಯಿಯ ವಿಠ್ಠಲನ ಭಕ್ತಿಯನ್ನು ಬಿಂಬಿಸಿದ ಅಭಂಗವು ಕಾರ್ಯಕ್ರಮಕ್ಕೆ ಮತ್ತೊಂದು ಭಕ್ತಿಪೂರ್ಣ ಆಯಾಮವನ್ನು ನೀಡಿತು.

ಕಾರ್ಯಕ್ರಮದ ವಿಶೇಷತೆಯೆಂದರೆ ದ್ವಿತೀಯಾರ್ಧದಲ್ಲಿ ಶಿಲ್ಪಾ ಅರುಣ್‌ಕುಮಾರ್ ಅವರೇ ನಟ್ಟುವಾಂಗ ನಿರ್ವಹಿಸಿ, ಹಾಡುಗಳನ್ನು ಹಾಡಿದರು. ನೃತ್ಯ ಸಂಯೋಜಕಿ, ಗಾಯಕಿ ಮತ್ತು ನಟ್ಟುವನಾರ್ ಆಗಿ ಅವರ ನೇರ ಪಾಲ್ಗೊಳ್ಳುವಿಕೆ ಪ್ರಸ್ತುತಿಗೆ ವಿಶೇಷ ಮೆರುಗು ನೀಡಿತು. ಸಂಕೀರ್ಣ ಲಯ ವಿನ್ಯಾಸಗಳು, ಜ್ಯಾಮಿತೀಯ ನೃತ್ಯ ಸಂಯೋಜನೆಗಳು ಮತ್ತು ಸೂಕ್ಷ್ಮ ಅಭಿನಯಗಳು ಕಲಾವಿದೆಯ ತರಬೇತಿ ಹಾಗೂ ಗುರುಗಳ ಮಾರ್ಗದರ್ಶನವನ್ನು ಎತ್ತಿತೋರಿಸಿದವು.

ಮಂಗಳಂನಲ್ಲಿ ಕನ್ನಡದ 'ಮಾನವ ಮೂಳೆ ಮಾಂಸದ ತಡಿಕೆ' ಹಾಗೂ 'ರಾಜಾ ಪಾಂಡರಿಚಾ' ಕೃತಿಗಳ ಮೂಲಕ ಭಕ್ತಿ ಮತ್ತು ತತ್ವಚಿಂತನೆಯ ಸುಂದರ ಸಮನ್ವಯ ಮೂಡಿಬಂದಿತು. ವಿಠ್ಠಲನಾಮದೊಂದಿಗೆ ಕಾರ್ಯಕ್ರಮವು ಆಧ್ಯಾತ್ಮಿಕ ಅನುಭೂತಿಯೊಂದಿಗೆ ಸಂಪನ್ನಗೊಂಡಿತು.



ಶೌರ್ಯ ಚಾರಿಟಬಲ್ ಟ್ರಸ್ಟ್ ಮೂಲಕ ಶಿಲ್ಪಾ ಅರುಣ್‌ಕುಮಾರ್ ಅವರು ಯುವ ನೃತ್ಯ ಕಲಾವಿದರಿಗೆ ಪ್ರತಿಷ್ಠಿತ ವೇದಿಕೆಗಳಲ್ಲಿ ತಮ್ಮ ಪ್ರತಿಭೆ ಪ್ರದರ್ಶಿಸಲು ಅವಕಾಶ ಕಲ್ಪಿಸುತ್ತಿದ್ದಾರೆ. ಅವರ 'ಸಂಭ್ರಮ -ಎ ಸೀರೀಸ್ ಆಫ್ ಅರಂಗೇಟ್ರಂಸ್' ಉಪಕ್ರಮವು ಮುಂದಿನ ಪೀಳಿಗೆಯ ಕಲಾವಿದರನ್ನು ಬೆಳೆಸುವ ಮತ್ತು ಗುರು-ಶಿಷ್ಯ ಪರಂಪರೆಯನ್ನು ಉಳಿಸುವ ಅವರ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ. ಒಟ್ಟಾರೆಯಾಗಿ, ಈ ರಂಗಪ್ರವೇಶವು ಶಿಲ್ಪಾ ಅರುಣ್‌ಕುಮಾರ್ ಅವರ ನೃತ್ಯ ಸಂಯೋಜನಾ ಸಾಮರ್ಥ್ಯ, ಸಂಗೀತ ಜ್ಞಾನ, ಲಯಪ್ರಜ್ಞೆ ಮತ್ತು ಕಲಾತ್ಮಕ ದೂರದೃಷ್ಟಿಯನ್ನು ಪರಿಚಯಿಸಿತು. ಶಾಸ್ತ್ರೀಯ ಪರಂಪರೆಯನ್ನು ಭಕ್ತಿ, ತತ್ವ ಮತ್ತು ಸೃಜನಶೀಲ ಕಥನದೊಂದಿಗೆ ಸಮನ್ವಯಗೊಳಿಸುವ ಮೂಲಕ ಭರತನಾಟ್ಯದ ಕಾಲಾತೀತ ಸೌಂದರ್ಯವನ್ನು ಮನಮುಟ್ಟುವಂತೆ ಅನಾವರಣ ಗೊಳಿಸಿದ ಒಂದು ಸ್ಮರಣೀಯ ಕಲಾಪ್ರಸ್ತುತಿಯಾಗಿ ಈ ಕಾರ್ಯಕ್ರಮ ಮೂಡಿಬಂದಿತು.

ಉಸಿರಾಟದ ಸಮಸ್ಯೆಯಿಂದ ಬಳಲುತ್ತಿದ್ದ ಬಾಲಕಿಗೆ ನೆರವಾದ ಹೆಚ್‌ಡಿಕೆ



● ವಿಕ್ರಮ ವಾಹಿನಿ । ಬೆಂಗಳೂರು

ಉಸಿರಾಟದ ತೊಂದರೆಯಿಂದ ಬಳಲುತ್ತಿದ್ದ ಬಾಲಕಿಗೆ ಉತ್ತಮ ಗುಣಮಟ್ಟದ ಆಕ್ಸಿಜನ್ ಕಾನ್ಸಂಟ್ರೇಟರ್ ಬಳಸುವಂತೆ ವೈದ್ಯರು ಸಲಹೆ ನೀಡಿದ್ದರು. ಆದರೆ ದುಬಾರಿ ಬೆಲೆಯ ಉಪಕರಣವನ್ನು ಖರೀದಿಸುವ ಆರ್ಥಿಕ ಸಾಮರ್ಥ್ಯ ಬಾಲಕಿಯ ಪೋಷಕರಿಗಿರಲಿಲ್ಲ.

ಉಸಿರಾಟದ ಸಮಸ್ಯೆಯಿಂದ ಬಳಲುತ್ತಿದ್ದ 14 ವರ್ಷದ ಬಾಲಕಿಗೆ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಮಾನವೀಯ ನೆರವು ನೀಡಿದ್ದಾರೆ. ವೈದ್ಯರ ಸಲಹೆಯಂತೆ ಬಾಲಕಿಗೆ ಅಗತ್ಯವಿದ್ದ ಸುಮಾರು ರೂ.2.50 ಲಕ್ಷ ಮೌಲ್ಯದ ಆಕ್ಸಿಜನ್ ಕಾನ್ಸಂಟ್ರೇಟರ್ ಅನ್ನು ತಮ್ಮ ಸ್ವಂತ ಖರ್ಚಿನಲ್ಲಿ ಖರೀದಿಸಿ ನೀಡಿದ್ದಾರೆ.

ರಾಮನಗರ ಜಿಲ್ಲೆಯ ಹಾರೋಹಳ್ಳಿ ತಾಲೂಕಿನ ಮರಳವಾಡಿ ಹೋಬಳಿಯ ಸುಂಡಘಟ್ಟ ಗ್ರಾಮದ ರಾಜಲಕ್ಷ್ಮಿ ಚಂದ್ರು ಅವರ ಪುತ್ರಿ ನವ್ಯಶ್ರೀ ಅವರಿಗೆ ಈ ನೆರವು ದೊರೆತಿದೆ. ಗುರುವಾರ ಬೆಳಗ್ಗೆ ಬೆಂಗಳೂರಿನ ಜೆ.ಪಿ. ನಗರದ ತಮ್ಮ ನಿವಾಸಕ್ಕೆ ಬಾಲಕಿ ಮತ್ತು ಆಕೆಯ ಪೋಷಕರನ್ನು ಕರೆಸಿಕೊಂಡ ಸಚಿವರು, ಆಕ್ಸಿಜನ್ ಕಾನ್ಸಂಟ್ರೇಟರ್ ಅನ್ನು ಹಸ್ತಾಂತರಿಸಿದರು.

ಉಸಿರಾಟದ ತೊಂದರೆಯಿಂದ ಬಳಲುತ್ತಿದ್ದ ಬಾಲಕಿಗೆ ಉತ್ತಮ ಗುಣಮಟ್ಟದ ಆಕ್ಸಿಜನ್ ಕಾನ್ಸಂಟ್ರೇಟರ್ ಬಳಸುವಂತೆ ವೈದ್ಯರು ಸಲಹೆ ನೀಡಿದ್ದರು. ಆದರೆ ದುಬಾರಿ ಬೆಲೆಯ ಉಪಕರಣವನ್ನು ಖರೀದಿಸುವ ಆರ್ಥಿಕ ಸಾಮರ್ಥ್ಯ ಬಾಲಕಿಯ ಪೋಷಕರಿಗಿರಲಿಲ್ಲ. ಹೀಗಾಗಿ ಅವರು ಸಚಿವ ಕುಮಾರಸ್ವಾಮಿ ಅವರ ನೆರವು ಕೋರಿದ್ದರು.

ಕಳೆದ ಆಗಸ್ಟ್ 30ರಂದು ಜೆ.ಪಿ. ನಗರದ ನಿವಾಸದಲ್ಲಿ ಸಚಿವರನ್ನು ಭೇಟಿಯಾಗಿದ್ದ ಪೋಷಕರು ತಮ್ಮ ಸಂಕಷ್ಟವನ್ನು ವಿವರಿಸಿದ್ದರು. ತಮ್ಮ ಮಗಳು ಒಂಬತ್ತನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದು, ಓದಿನಲ್ಲಿ ಪ್ರತಿಭಾವಂತೆಯಾಗಿದ್ದಾಳೆ. ಆದರೆ ಅನಾರೋಗ್ಯದಿಂದ ಬಳಲುತ್ತಿದ್ದಾಳೆ. ಬಡವರಾದ ತಮಗೆ ದುಬಾರಿ ಆಕ್ಸಿಜನ್ ಕಾನ್ಸಂಟ್ರೇಟರ್ ಖರೀದಿಸಲು ಸಾಧ್ಯವಾಗುತ್ತಿಲ್ಲ. ಮಗುವಿನ ಆರೋಗ್ಯ ಮತ್ತು ಜೀವ ರಕ್ಷಣೆಗೆ ನೆರವಾಗಬೇಕು ಎಂದು ಮನವಿ ಮಾಡಿದ್ದರು.

ಪೋಷಕರ ಮನವಿಗೆ ಸ್ಪಂದಿಸಿದ ಕೇಂದ್ರ ಸಚಿವರು, ತಕ್ಷಣವೇ ಬಾಲಕಿಯ ಆರೋಗ್ಯದ ಕುರಿತು ವೈದ್ಯರಿಂದ ಮಾಹಿತಿ ಪಡೆದುಕೊಂಡಿದ್ದರು.

ಬಳಿಕ ತಮ್ಮ ಸ್ವಂತ ಖರ್ಚಿನಲ್ಲಿ ಬಾಲಕಿಗೆ ಅಗತ್ಯವಾಗಿದ್ದ 'ಇನೋಜೆನ್ ರೋವ್ 6' ಪೋರ್ಟಬಲ್ ಆಕ್ಸಿಜನ್ ಕಾನ್ಸಂಟ್ರೇಟರ್ ಅನ್ನು ಖರೀದಿಸಿ ಪೋಷಕರಿಗೆ ಹಸ್ತಾಂತರಿಸಿದ್ದಾರೆ.

ಈ ಸಂದರ್ಭದಲ್ಲಿ ಬಾಲಕಿಯೊಂದಿಗೆ ಕೆಲಕಾಲ ಮಾತನಾಡಿದ ಕುಮಾರಸ್ವಾಮಿ ಅವರು, ವೈದ್ಯರು ಸೂಚಿಸಿರುವ ಚಿಕಿತ್ಸೆಯನ್ನು ಯಾವುದೇ ಲೋಪವಿಲ್ಲದೆ ಪಡೆದುಕೊಳ್ಳುವಂತೆ ಸಲಹೆ ನೀಡಿದರು. ಮಗುವಿನ ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ವಹಿಸದೆ ಕಾಲಕಾಲಕ್ಕೆ ಸೂಕ್ತ ಚಿಕಿತ್ಸೆ ಕೊಡಿಸಬೇಕು. ಆರೋಗ್ಯದ ಬೆಳವಣಿಗೆ ಕುರಿತು ತಮಗೆ ಮಾಹಿತಿ ನೀಡಬೇಕು ಎಂದು ಪೋಷಕರಿಗೆ ತಿಳಿಸಿದರು.

ತಮ್ಮ ಮನವಿಗೆ ಸ್ಪಂದಿಸಿ ನೆರವು ನೀಡಿದ ಕೇಂದ್ರ ಸಚಿವರಿಗೆ ಬಾಲಕಿ ಮತ್ತು ಆಕೆಯ ಪೋಷಕರು ಕೃತಜ್ಞತೆ ಸಲ್ಲಿಸಿದರು. ಸಚಿವರ ಆಶೀರ್ವಾದದಿಂದ ತನ್ನ ಆರೋಗ್ಯ ಸುಧಾರಿಸಲಿದೆ ಎಂದು ನವ್ಯಶ್ರೀ ಭಾವುಕಳಾಗಿ ಹೇಳಿದಳು. ಬಾಲಕಿಯ ಮಾತುಗಳಿಂದ ಸಚಿವರೂ ಭಾವುಕರಾದರು. ಇದೇ ಸಂದರ್ಭದಲ್ಲಿ ಆಕ್ಸಿಜನ್ ಕಾನ್ಸಂಟ್ರೇಟರ್ ತಯಾರಿಸಿರುವ ಇನೋಜೆನ್ ಕಂಪನಿಯ ತಾಂತ್ರಿಕ ಪ್ರತಿನಿಧಿಗಳು ಉಪಕರಣದ ಬಳಕೆ ಮತ್ತು ಅದರ ಕಾರ್ಯವಿಧಾನದ ಕುರಿತು ಬಾಲಕಿಯ ಪೋಷಕರಿಗೆ ಮಾಹಿತಿ ನೀಡಿದರು.



ನಗರದ ದೇವರಾಜು ಅರಸು ಭವನದಲ್ಲಿ ಆಯೋಜಿಸಿದ್ದ ತಿಗಳ ಅಭಿವೃದ್ಧಿ ನಿಗಮದ ವೆಬ್‌ಸೈಟ್ ಹಾಗೂ ನಿಗಮದ ಕಾರ್ಯಕ್ರಮಗಳ ಮಾಹಿತಿ ಒಳಗೊಂಡ ಪುಸ್ತಕ ಬಿಡುಗಡೆಯನ್ನು ಸಮಾಜ ಕಲ್ಯಾಣ ಇಲಾಖೆ ಸಚಿವರಾದ ಕೆಹೆಚ್. ಮುನಿಯಪ್ಪ ರವರು ಲೋಕಾರ್ಪಣೆಗೊಳಿಸಿದರು. ಈ ಸಂದರ್ಭದಲ್ಲಿ ನಿಗಮದ ಅಧ್ಯಕ್ಷರಾದ ಎಲ್ ಎ.ಮಂಜುನಾಥ್, ಹಾಗೂ ಮಾಜಿ ಶಾಸಕರು ಉಪಸ್ಥಿತರಿದ್ದರು.

ಮೆಟ್ರೋ ಅಭಿವೃದ್ಧಿಯಲ್ಲಿ ಕನ್ನಡಿಗರ ಕೊಡುಗೆಯನ್ನೂ ಸ್ಮರಿಸಿ: ರಾಮಲಿಂಗಾರೆಡ್ಡಿ

● ವಿಕ್ರಮ ವಾಹಿನಿ । ಬೆಂಗಳೂರು

ಬಹುನಿರೀಕ್ಷಿತ ನಮ್ಮ ಮೆಟ್ರೋದ ಗುಲಾಬಿ ಮಾರ್ಗವನ್ನು ಪ್ರಧಾನಿ ನರೇಂದ್ರ ಮೋದಿ ಅವರು ಶುಕ್ರವಾರ ಉದ್ಘಾಟಿಸಲಿರುವ ಹಿನ್ನೆಲೆಯಲ್ಲಿ, ಅರಣ್ಯ ಸಚಿವ ರಾಮಲಿಂಗಾರೆಡ್ಡಿ ಅವರು ಯೋಜನೆಯ ಇತಿಹಾಸವನ್ನು ಸ್ಮರಿಸುವುದರ ಜತೆಗೆ ಬೆಂಗಳೂರು ಮೆಟ್ರೋ ಅಭಿವೃದ್ಧಿಯಲ್ಲಿ ಕರ್ನಾಟಕ ಸರ್ಕಾರ ಮತ್ತು ಕನ್ನಡಿಗರ ಕೊಡುಗೆಗೂ ಸೂಕ್ತ ಗೌರವ ನೀಡಬೇಕು ಎಂದು ಒತ್ತಾಯಿಸಿದ್ದಾರೆ.



ಕಾಳೇನ ಅಗ್ರಹಾರದಿಂದ ನಾಗವಾರ ದವರೆಗೆ ಸಂಪರ್ಕ ಕಲ್ಪಿಸುವ ಗುಲಾಬಿ ಮಾರ್ಗ ಬೆಂಗಳೂರಿನ ಸಾರ್ವಜನಿಕ ಸಾರಿಗೆ ವ್ಯವಸ್ಥೆಯಲ್ಲಿ ಮಹತ್ವದ ಬದಲಾವಣೆ ತರಲಿದೆ. ವಿಶೇಷವಾಗಿ ಬೆಂಗಳೂರು ದಕ್ಷಿಣ ಭಾಗದ ಸಂಚಾರ ದಟ್ಟಣೆ ಕಡಿಮೆ ಮಾಡಲು ಈ ಮಾರ್ಗ ಪ್ರಮುಖ ಪಾತ್ರ ವಹಿಸಲಿದೆ. ಯೋಜನೆಯನ್ನು ಸ್ವಾಗತಿಸಿರುವ ರಾಮಲಿಂಗಾರೆಡ್ಡಿ, ಇದರ ಹಿಂದೆ ಹಲವು ವರ್ಷಗಳ ರಾಜಕೀಯ ಮತ್ತು ಆಡಳಿತಾತ್ಮಕ ಪ್ರಯತ್ನಗಳಿವೆ ಎಂದು ತಮ್ಮ ಸಾಮಾಜಿಕ ಜಾಲತಾಣದ ಪೋಸ್ಟ್‌ನಲ್ಲಿ ವಿವರಿಸಿದ್ದಾರೆ.

2013–14ರಲ್ಲಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರದಲ್ಲಿ ತಾವು ಸಾರಿಗೆ ಸಚಿವ ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವರಾಗಿ ಕಾರ್ಯನಿರ್ವಹಿಸುತ್ತಿದ್ದುದನ್ನು ಅವರು ಸ್ಮರಿಸಿದ್ದಾರೆ. 2014ರ ಜನವರಿ 30ರಂದು ಯುಪಿಎ ಸರ್ಕಾರದ ಅವಧಿಯಲ್ಲಿ ಕೇಂದ್ರ ಸಚಿವ ಸಂಪುಟವು ನಮ್ಮ ಮೆಟ್ರೋದ ಎರಡನೇ ಹಂತಕ್ಕೆ ಅನುಮೋದನೆ ನೀಡಿತ್ತು. ಮೆಟ್ರೋ ಅಭಿವೃದ್ಧಿಯ ಹಿಂದೆ ಹಲವು ಸರ್ಕಾರಗಳ ನಿರಂತರ ಪ್ರಯತ್ನ ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಹಕಾರವಿದೆ. ಈ ಇತಿಹಾಸವನ್ನು ಯಾರೂ ಮರೆಯಬಾರದು. ಮೆಟ್ರೋ ಯೋಜನೆ ಕನ್ನಡಿಗರ ತೆರಿಗೆ ಹಣ ಮತ್ತು ಕರ್ನಾಟಕದ ಆರ್ಥಿಕ ಬದ್ಧತೆಯ ಪ್ರತೀಕವಾಗಿದೆ ಎಂದು ಸಚಿವರು ಅಭಿಪ್ರಾಯಪಟ್ಟಿದ್ದಾರೆ.

ಆಗ ಗೊಟ್ಟಿಗೆರೆ–ನಾಗವಾರ ಮಾರ್ಗವೂ ಯೋಜನೆಯ ಭಾಗವಾಗಿತ್ತು. ಇದೇ ಮಾರ್ಗ ಇದೀಗ ಗುಲಾಬಿ ಮಾರ್ಗವಾಗಿ ಅಭಿವೃದ್ಧಿಗೊಂಡಿದೆ ಎಂದು ತಿಳಿಸಿದ್ದಾರೆ.

ಗುಲಾಬಿ ಮಾರ್ಗದ ಮೂಲ ಅಂದಾಜು ವೆಚ್ಚ ರೂ.8,730 ಕೋಟಿ ಆಗಿತ್ತು. ಆದರೆ, ಪರಿಷ್ಕೃತ ಅಂದಾಜಿನ ಪ್ರಕಾರ ಯೋಜನಾ ವೆಚ್ಚ ರೂ.17,346 ಕೋಟಿಗೆ ಏರಿಕೆಯಾಗಿದೆ. ಇದರಲ್ಲಿ ರಾಜ್ಯ ಸರ್ಕಾರದ ಪಾಲು ಸುಮಾರು ರೂ.12,000 ಕೋಟಿ ಎಂದು ರಾಮಲಿಂಗಾರೆಡ್ಡಿ ಉಲ್ಲೇಖಿಸಿದ್ದಾರೆ.

ನಮ್ಮ ಮೆಟ್ರೋದ ಮೊದಲ, ಎರಡನೇ, 2ಎ, 2ಬಿ ಹಾಗೂ ಮೂರನೇ ಹಂತಗಳ ಒಟ್ಟು ಯೋಜನಾ ವೆಚ್ಚ ರೂ.77,891 ಕೋಟಿ ಆಗಿದೆ. ಇದರಲ್ಲಿ ಕರ್ನಾಟಕ ಸರ್ಕಾರದ ಕೊಡುಗೆ ರೂ.65,291 ಕೋಟಿ, ಅಂದರೆ ಶೇಕಡಾ 83.8ರಷ್ಟಿದ್ದರೆ, ಕೇಂದ್ರ ಸರ್ಕಾರದ ಪಾಲು ರೂ.12,600 ಕೋಟಿ, ಅಂದರೆ ಶೇಕಡಾ 16.2ರಷ್ಟಿದೆ ಎಂದು ಅವರು ತಿಳಿಸಿದ್ದಾರೆ.

ಮೆಟ್ರೋ ಅಭಿವೃದ್ಧಿಯ ಹಿಂದೆ ಹಲವು ಸರ್ಕಾರಗಳ ನಿರಂತರ ಪ್ರಯತ್ನ ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಹಕಾರವಿದೆ. ಈ ಇತಿಹಾಸವನ್ನು ಯಾರೂ ಮರೆಯಬಾರದು. ಮೆಟ್ರೋ ಯೋಜನೆ ಕನ್ನಡಿಗರ ತೆರಿಗೆ ಹಣ ಮತ್ತು ಕರ್ನಾಟಕದ ಆರ್ಥಿಕ ಬದ್ಧತೆಯ ಪ್ರತೀಕವಾಗಿದೆ ಎಂದು ಸಚಿವರು ಅಭಿಪ್ರಾಯಪಟ್ಟಿದ್ದಾರೆ. ಬೆಂಗಳೂರು ದೇಶದ ಪ್ರಮುಖ ಆರ್ಥಿಕ, ತಂತ್ರಜ್ಞಾನ ಮತ್ತು ಉದ್ಯೋಗ ಕೇಂದ್ರವಾಗಿ ಬೆಳೆಯಲು ರಾಜ್ಯದ ಜನರ ತೆರಿಗೆ ಹಣ ಹಾಗೂ ಸರ್ಕಾರದ ನಿರಂತರ ಹೂಡಿಕೆ ಮಹತ್ವದ ಕೊಡುಗೆ ನೀಡಿದೆ. ಹೀಗಾಗಿ ಮೆಟ್ರೋ ಸೇರಿದಂತೆ ನಗರದ ಮೂಲಸೌಕರ್ಯ ಅಭಿವೃದ್ಧಿಯಲ್ಲಿ ಕರ್ನಾಟಕದ ಕೊಡುಗೆಯನ್ನು ಗುರುತಿಸಿ ಗೌರವಿಸಬೇಕು ಎಂಬುದು ರಾಮಲಿಂಗಾರೆಡ್ಡಿ ಅವರ ಪ್ರಮುಖ ಆಗ್ರಹವಾಗಿದೆ. ಬೆಂಗಳೂರು ಅಭಿವೃದ್ಧಿಗೆ ಹಲವು ಸರ್ಕಾರಗಳ ಕೊಡುಗೆಗಳನ್ನು ಸ್ಮರಿಸಿರುವ ಅವರು, ಬೆಂಗಳೂರು ಬೆಳೆದರೆ ಕರ್ನಾಟಕ ಬೆಳೆಯುತ್ತದೆ, ಕರ್ನಾಟಕ ಬೆಳೆದರೆ ದೇಶ ಬೆಳೆಯುತ್ತದೆ ಎಂಬ ಸಂದೇಶದೊಂದಿಗೆ ತಮ್ಮ ಪೋಸ್ಟ್ ಮುಕ್ತಾಯಗೊಳಿಸಿದ್ದಾರೆ. ಪ್ರಧಾನಿ ಮೋದಿ ಅವರಿಂದ ಗುಲಾಬಿ ಮಾರ್ಗದ ಉದ್ಘಾಟನೆಗೆ ಸಿದ್ಧತೆ ನಡೆಯುತ್ತಿರುವ ಸಂದರ್ಭದಲ್ಲಿ ಮೆಟ್ರೋ ಯೋಜನೆಯ ಇತಿಹಾಸ, ಹಣಕಾಸಿನ ಹೊರೆ ಮತ್ತು ರಾಜ್ಯದ ಕೊಡುಗೆ ಕುರಿತು ಸಚಿವರು ಮಾಡಿರುವ ಈ ಪ್ರಸ್ತಾಪ ರಾಜಕೀಯ ವಲಯದಲ್ಲಿ ಗಮನ ಸೆಳೆದಿದೆ.

'ಮೀಸಲಾತಿ ಹೆಚ್ಚಳವನ್ನು ಸಂವಿಧಾನದ 9ನೇ ಅನುಸೂಚಿಗೆ ಸೇರಿಸಲು ಪ್ರಧಾನಿಗೆ ಪತ್ರ'

● ವಿಕ್ರಮ ವಾಹಿನಿ । ಬೆಂಗಳೂರು

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೀಸಲಾತಿ ಪ್ರಮಾಣ ಹೆಚ್ಚಿಸಿರುವ ರಾಜ್ಯ ಸರ್ಕಾರದ ನಿರ್ಧಾರವನ್ನು ಸಂವಿಧಾನದ 9ನೇ ಅನುಸೂಚಿಯಲ್ಲಿ ಸೇರಿಸುವಂತೆ ಕೋರಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆಯಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು. ಪ್ರಧಾನಮಂತ್ರಿಗಳ ಭೇಟಿಗೆ ಅವಕಾಶ ದೊರೆತರೆ ಈ ವಿಚಾರವನ್ನು ಚರ್ಚಿಸಲಾಗುವುದು ಎಂದರು.



ವಿಕಾಸಸೌಧದಲ್ಲಿ ಗುರುವಾರ ನಡೆದ ರಾಜ್ಯ ಅನುಸೂಚಿತ ಜಾತಿಗಳು ಹಾಗೂ ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್ ಸಭೆಯ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಯೋಜನೆಗಳ ಅನುಷ್ಠಾನ, ಮೀಸಲಾತಿ ಹೆಚ್ಚಳ, ಒಳಮೀಸಲಾತಿ ಹಾಗೂ ಸಮುದಾಯಗಳ ಕಲ್ಯಾಣಕ್ಕೆ ಸಂಬಂಧಿಸಿದಂತೆ ಹಲವು ಮಹತ್ವದ ನಿರ್ಧಾರಗಳನ್ನು ವಿವರಿಸಿದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಶಾಸಕರು, ಸಚಿವರು ಹಾಗೂ ವಿವಿಧ ನಿಗಮಗಳ ಅಧ್ಯಕ್ಷರೊಂದಿಗೆ ಬೆಳಗ್ಗೆ ಸಭೆ ನಡೆಸಲಾಗಿದೆ. ಮೀಸಲಾತಿ ಹೆಚ್ಚಳ ಮತ್ತು ಒಳಮೀಸಲಾತಿ ವಿಚಾರವಾಗಿ ಹೈಕೋರ್ಟ್ ನೀಡಿರುವ ತೀರ್ಪಿನ ವಿರುದ್ಧ ಸುಪ್ರೀಂ ಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಲು ಸಚಿವ ಸಂಪುಟ ತೀರ್ಮಾನಿಸಿದ್ದು, ಸರ್ಕಾರದ ಅರ್ಜಿ ಸ್ವೀಕೃತವಾಗಿದೆ ಎಂದು ತಿಳಿಸಿದರು.

ಈ ಕಾನೂನು ಹೋರಾಟದಲ್ಲಿ ರಾಜ್ಯದ ಪರವಾಗಿ ಯಾರು ವಾದಿಸಬೇಕು ಮತ್ತು ಪ್ರಕರಣದ ಮೇಲ್ವಿಚಾರಣೆ ಹೇಗೆ ನಡೆಯಬೇಕು ಎಂಬ ಜವಾಬ್ದಾರಿಯನ್ನು ಉಪಮುಖ್ಯಮಂತ್ರಿ ಜಿ. ಪರಮೇಶ್ವರ್, ಸಚಿವ ಕೆ.ಎಚ್. ಮುನಿಯಪ್ಪ ಹಾಗೂ ಸತೀಶ್ ಜಾರಕಿಹೊಳಿ ಅವರಿಗೆ ವಹಿಸಲಾಗಿದೆ. ಸುಪ್ರೀಂ ಕೋರ್ಟ್‌ನಲ್ಲಿ ರಾಜ್ಯಕ್ಕೆ ನ್ಯಾಯ ದೊರೆಯುವ ವಿಶ್ವಾಸವಿದೆ ಎಂದರು.

ಈ ವಿಚಾರದಲ್ಲಿ ಹಿಂದಿನವರನ್ನು ದೂಷಿಸುವುದರಿಂದ ಪ್ರಯೋಜನವಿಲ್ಲ. ತಮಿಳುನಾಡಿನಲ್ಲಿ ಶೇ.69ರಷ್ಟು ಮೀಸಲಾತಿ ಜಾರಿಯಲ್ಲಿದೆ. ರಾಜ್ಯದಲ್ಲಿ ಶೇ.50ರ ಮಿತಿಗಿಂತ ಕೇವಲ ಶೇ.6ರಷ್ಟು ಹೆಚ್ಚುವರಿ ಮೀಸಲಾತಿಗೆ ಮನವಿ ಮಾಡಲಾಗುತ್ತಿದೆ. ಈಗಾಗಲೇ ಒಳಮೀಸಲಾತಿ ಸಮಸ್ಯೆಯನ್ನು ಬಗೆಹರಿಸಲಾಗಿದೆ ಎಂದು ಹೇಳಿದರು.

ಮುಂದಿನ ಬಜೆಟ್‌ನಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣಕ್ಕಾಗಿ ಹೊಸ ಕಾರ್ಯಕ್ರಮಗಳನ್ನು ರೂಪಿಸುವ ಕುರಿತು ಸಮುದಾಯಗಳ ನಾಯಕರೊಂದಿಗೆ ಚರ್ಚಿಸಲಾಗಿದೆ. ಈ ವರ್ಗಗಳ ಸಮಗ್ರ ಅಭಿವೃದ್ಧಿಗೆ ಅಗತ್ಯ ಸಲಹೆಗಳನ್ನು ನೀಡಲು ವಿಷನ್ ಗ್ರೂಪ್ ರಚಿಸಲಾಗುವುದು ಎಂದು ತಿಳಿಸಿದರು.

ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಯೋಜನೆಗಳ ಮೂಲಕ ಕಳೆದ ಹಲವು ವರ್ಷಗಳಿಂದ ನೀಡಲಾಗಿರುವ ಅನುದಾನದಿಂದ ಸಮುದಾಯಗಳಿಗೆ ಆಗಿರುವ ಪ್ರಯೋಜನಗಳ ಕುರಿತು ಅಧ್ಯಯನ ನಡೆಸಲು ಪ್ರತಿಷ್ಠಿತ ಸಂಸ್ಥೆಗಳ ಮೂಲಕ ಸಾಮಾಜಿಕ ಪರಿಶೋಧನೆ ಕೈಗೊಳ್ಳಲು ಸರ್ಕಾರ ನಿರ್ಧರಿಸಿದೆ. ಕೆಲವು ಯೋಜನೆಗಳಲ್ಲಿ ಒಂದೇ ರೀತಿಯ ಸೌಲಭ್ಯಗಳು ಪುನರಾವರ್ತನೆಯಾಗುತ್ತಿರುವ ಬಗ್ಗೆ ಸಭೆಯಲ್ಲಿ ಗಮನ ಸೆಳೆಯಲಾಗಿದೆ. ಈ ಹಿನ್ನೆಲೆಯಲ್ಲಿ ಯೋಜನೆಗಳ ಪರಿಣಾಮ ಮತ್ತು ಅನುಷ್ಠಾನವನ್ನು ಸಮಗ್ರವಾಗಿ ಪರಿಶೀಲಿಸಲಾಗುವುದು ಎಂದರು.

ಈ ಯೋಜನೆಗಳಡಿ 2025–26ನೇ ಸಾಲಿನಲ್ಲಿ 42,503 ಕೋಟಿ ರೂ. ಹಾಗೂ 2026–27ನೇ ಸಾಲಿನಲ್ಲಿ 44,631 ಕೋಟಿ ರೂ. ಅನುದಾನವನ್ನು 34 ಇಲಾಖೆಗಳ 451 ಯೋಜನೆಗಳಿಗೆ ಹಂಚಿಕೆ ಮಾಡಲಾಗಿದೆ.

'ಒಲಿಂಪಿಕ್ಸ್‌ನಲ್ಲಿ ಕರ್ನಾಟಕದ ಹೆಚ್ಚು ಕ್ರೀಡಾಪಟುಗಳು ಪ್ರತಿನಿಧಿಸಬೇಕು'

● ವಿಕ್ರಮ ವಾಹಿನಿ । ಬೆಂಗಳೂರು

ಮುಂಬರುವ ದಿನಗಳಲ್ಲಿ ಕರ್ನಾಟಕದಿಂದ ಹೆಚ್ಚಿನ ಸಂಖ್ಯೆಯ ಕ್ರೀಡಾಪಟುಗಳು ಒಲಿಂಪಿಕ್ಸ್‌ನಲ್ಲಿ ದೇಶವನ್ನು ಪ್ರತಿನಿಧಿಸಬೇಕು ಎಂಬುದೇ ನನ್ನ ಕನಸು. ಈ ಗುರಿ ಸಾಧನೆಗೆ ಮಿನಿ ಕರ್ನಾಟಕ ಕ್ರೀಡಾಕೂಟ ಯುವ ಕ್ರೀಡಾಪಟುಗಳಿಗೆ ಉತ್ತಮ ವೇದಿಕೆಯಾಗಲಿದೆ ಎಂದು ಫಿಬಾ ಏಷ್ಯಾ ಅಧ್ಯಕ್ಷರು, ಕರ್ನಾಟಕ ಒಲಿಂಪಿಕ್ ಸಂಸ್ಥೆಯ ಅಧ್ಯಕ್ಷರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಡಾ.ಕೆ. ಗೋವಿಂದರಾಜ್ ತಿಳಿಸಿದರು.

ಕರ್ನಾಟಕ ಒಲಿಂಪಿಕ್ ಭವನದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ಸರ್ಕಾರ, ಕರ್ನಾಟಕ ಒಲಿಂಪಿಕ್ ಸಂಸ್ಥೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಯೋಗದಲ್ಲಿ ಐದನೇ ಮಿನಿ ಕರ್ನಾಟಕ ಕ್ರೀಡಾಕೂಟ–2026 ಅನ್ನು ನವೆಂಬರ್ 14ರಿಂದ 21ರವರೆಗೆ ಆಯೋಜಿಸಲಾಗುತ್ತಿದೆ. ಬೆಂಗಳೂರಿನ ಕಂಠೀರವ ಕ್ರೀಡಾಂಗಣ ಸೇರಿದಂತೆ ವಿವಿಧ ಕ್ರೀಡಾಂಗಣಗಳಲ್ಲಿ ಸ್ಪರ್ಧೆಗಳು ನಡೆಯಲಿವೆ ಎಂದು ಹೇಳಿದರು.

ಈ ಕ್ರೀಡಾಕೂಟದಲ್ಲಿ ಒಟ್ಟು 27 ಕ್ರೀಡೆಗಳ ಸ್ಪರ್ಧೆಗಳು ನಡೆಯಲಿದ್ದು, 14 ವರ್ಷ ವಯೋಮಿತಿಯ ಸುಮಾರು ಐದು ಸಾವಿರ ಕ್ರೀಡಾಪಟುಗಳು ಭಾಗವಹಿಸಲಿದ್ದಾರೆ. 2020ರಲ್ಲಿ ಮೊದಲ ಬಾರಿಗೆ ಈ ಕ್ರೀಡಾಕೂಟವನ್ನು ಆಯೋಜಿಸಲಾಗಿತ್ತು. ಕ್ರೀಡಾಪಟುಗಳಿಗೆ ಊಟ, ವಸತಿ ಮತ್ತು ಸಾರಿಗೆ ವ್ಯವಸ್ಥೆ ಕಲ್ಪಿಸಲಾಗುತ್ತಿದೆ ಎಂದರು.

ಚಿಕ್ಕ ವಯಸ್ಸಿನಲ್ಲೇ ಮಕ್ಕಳಿಗೆ ಇಂತಹ ಕ್ರೀಡಾಕೂಟಗಳ ಮೂಲಕ ತರಬೇತಿ ಮತ್ತು ಪ್ರೋತ್ಸಾಹ ನೀಡಿದರೆ, ಅವರನ್ನು ರಾಷ್ಟ್ರೀಯ ಹಾಗೂ ಅಂತಾರಾಷ್ಟ್ರೀಯ ಮಟ್ಟದ ಸ್ಪರ್ಧೆಗಳಿಗೆ ಸಿದ್ಧಗೊಳಿಸಲು ಸಾಧ್ಯವಾಗುತ್ತದೆ. ಯುವ ಕ್ರೀಡಾಪಟುಗಳಲ್ಲಿ ಸ್ಪರ್ಧಾತ್ಮಕ ಮನೋಭಾವ ಬೆಳೆಸುವುದು, ಪ್ರತಿಭೆ ಗುರುತಿಸುವುದು ಮತ್ತು ಅವರಿಗೆ ಸೂಕ್ತ ಅವಕಾಶ ಕಲ್ಪಿಸುವ ಉದ್ದೇಶದಿಂದ ಮಿನಿ ಕರ್ನಾಟಕ ಕ್ರೀಡಾಕೂಟ ಆರಂಭಿಸಲಾಗಿದೆ ಎಂದು ತಿಳಿಸಿದರು.

ಕರ್ನಾಟಕದ ಕ್ರೀಡಾಪಟುಗಳು ಮುಂದಿನ ದಿನಗಳಲ್ಲಿ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಮಿಂಚಬೇಕು. ಭವಿಷ್ಯದ ಕ್ರೀಡಾ ತಾರೆಗಳನ್ನು ಗುರುತಿಸಿ ಬೆಳೆಸಲು ಈ ಕ್ರೀಡಾಕೂಟ ಉತ್ತಮ ವೇದಿಕೆಯಾಗಲಿದೆ ಎಂದು ಡಾ. ಗೋವಿಂದರಾಜ್ ಆಶಯ ವ್ಯಕ್ತಪಡಿಸಿದರು.



ಒಲಿಂಪಿಕ್ಸ್ ಗುರಿ ಯೋಜನೆ ಆರಂಭಿಸುವ ಮೂಲಕ ರಾಜ್ಯ ಸರ್ಕಾರ ಕ್ರೀಡಾ ಕ್ಷೇತ್ರಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡುತ್ತಿದೆ. ಒಲಿಂಪಿಕ್ಸ್‌ಗೆ ಸಿದ್ಧತೆ ನಡೆಸುವ ಕ್ರೀಡಾಪಟುಗಳಿಗೆ 10 ಲಕ್ಷ ರೂಪಾಯಿ ಪ್ರೋತ್ಸಾಹಧನ ನೀಡಲಾಗುತ್ತಿದೆ. ಮುಂದಿನ ದಿನಗಳಲ್ಲಿ ಈ ಮೊತ್ತವನ್ನು ಹೆಚ್ಚಿಸುವಂತೆ ಸರ್ಕಾರಕ್ಕೆ ಮನವಿ ಮಾಡಲಾಗಿದೆ ಎಂದು ಹೇಳಿದರು.

ಮಿನಿ ಕರ್ನಾಟಕ ಕ್ರೀಡಾಕೂಟದಲ್ಲಿ ಅಥ್ಲೆಟಿಕ್ಸ್, ಬಿಲ್ಲುಗಾರಿಕೆ, ಬಾಸ್ಕೆಟ್‌ಬಾಲ್, ಬ್ಯಾಡ್ಮಿಂಟನ್, ಬಾಕ್ಸಿಂಗ್, ಸೈಕ್ಲಿಂಗ್, ಕತ್ತಿವರಸೆ, ಕಯಾಕಿಂಗ್ ಮತ್ತು ಕೆನೋಯಿಂಗ್, ಗಾಲ್ಫ್, ಫುಟ್ಬಾಲ್, ಜಿಮ್ನಾಸ್ಟಿಕ್ಸ್, ಹ್ಯಾಂಡ್‌ಬಾಲ್, ಹಾಕಿ, ಜೂಡೋ, ಖೋ–ಖೋ, ಕಬಡ್ಡಿ, ಲಾನ್ ಟೆನಿಸ್, ವಾಲಿಬಾಲ್, ನೆಟ್‌ಬಾಲ್, ಈಜು, ಟೇಬಲ್ ಟೆನಿಸ್, ಟೇಕ್ವಾಂಡೋ, ಕುದುರೆ ಸವಾರಿ, ರೈಫಲ್ ಶೂಟಿಂಗ್, ಕುಸ್ತಿ, ವುಶು ಮತ್ತು ಭಾರ ಎತ್ತುವ ಸ್ಪರ್ಧೆಗಳು ನಡೆಯಲಿವೆ.

ಸುದ್ದಿಗೋಷ್ಠಿಯಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಯುಕ್ತ ಎಂ.ಎನ್. ಅನುಚೇತ್ ಸೇರಿದಂತೆ ರಾಜ್ಯದ ವಿವಿಧ ಕ್ರೀಡಾ ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು. ಐದನೇ ಮಿನಿ ಕರ್ನಾಟಕ ಕ್ರೀಡಾಕೂಟದ ಅಧಿಕೃತ ಜಾಲತಾಣವನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ಬಿಡುಗಡೆ ಮಾಡಲಾಯಿತು. ಕ್ರೀಡಾಕೂಟಕ್ಕೆ ಸಂಬಂಧಿಸಿದ ಮಾಹಿತಿಯನ್ನು https://5thministategames.com ಜಾಲತಾಣದಲ್ಲಿ ಪಡೆಯಬಹುದಾಗಿದೆ.

1,575 ಎಕರೆ ಕೆರೆ ಒತ್ತುವರಿ ತೆರವಿಗೆ ಸಚಿವ ಖಂಡ್ರೆ ಸೂಚನೆ

● ವಿಕ್ರಮ ವಾಹಿನಿ । ಚಿಕ್ಕಬಳ್ಳಾಪುರ

ಜಿಲ್ಲೆಯಲ್ಲಿ ಗ್ರಾಮ ಪಂಚಾಯಿತಿಗಳಿಗೆ ಸೇರಿದ 443 ಕೆರೆಗಳ 1,575 ಎಕರೆ ಭೂಮಿ ಒತ್ತುವರಿಯಾಗಿದ್ದು, ಮನೆಗಳ ನಿರ್ಮಾಣ ವಾಗಿರುವ ಪ್ರದೇಶಗಳನ್ನು ಹೊರತುಪಡಿಸಿ ಉಳಿದ ಒತ್ತುವರಿಯನ್ನು ಕೂಡಲೇ ತೆರವುಗೊಳಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ನವೀನ್ ಭಟ್ ಅವರಿಗೆ ಸೂಚನೆ ನೀಡಿದ್ದಾರೆ.

ಗೌರಿಬಿದನೂರಿಗೆ ತೆರಳುವ ಮಾರ್ಗದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಗಡಿಯಿಂದ ಗೌರಿಬಿದನೂರುವರೆಗೆ ಸಚಿವರು ಕಾರಿನಲ್ಲೇ ಸಿಇಒ ಅವರೊಂದಿಗೆ ಸಭೆ ನಡೆಸಿ, ಜಿಲ್ಲೆಯ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿರುವ ಕೆರೆಗಳ ಸ್ಥಿತಿಗತಿ ಹಾಗೂ ಇಲಾಖೆಯ ವಿವಿಧ ಯೋಜನೆಗಳ ಪ್ರಗತಿಯನ್ನು ಪರಿಶೀಲಿಸಿದರು.

ಜಿಲ್ಲೆಯ ವಿವಿಧ ಗ್ರಾಮ ಪಂಚಾಯಿತಿಗಳ ಸ್ವಾಧೀನದಲ್ಲಿರುವ ಅಥವಾ ನಿರ್ವಹಣೆಯಲ್ಲಿರುವ ಒಟ್ಟು 1,332 ಕೆರೆಗಳಿದ್ದು, ಈ ಪೈಕಿ 742 ಕೆರೆಗಳ 2,817 ಎಕರೆ ಭೂಮಿ ಒತ್ತುವರಿಯಾಗಿತ್ತು. ಈವರೆಗೆ 299 ಕೆರೆಗಳ 1,242 ಎಕರೆ ಒತ್ತುವರಿಯನ್ನು ತೆರವುಗೊಳಿಸಲಾಗಿದೆ. ಉಳಿದ ಒತ್ತುವರಿಯಲ್ಲಿ ಮನೆಗಳು ನಿರ್ಮಾಣವಾಗಿರುವ ಪ್ರದೇಶಗಳನ್ನು ಹೊರತುಪಡಿಸಿ, ಉಳಿದ ಕೆರೆ ಭೂಮಿಯನ್ನು ತೆರವುಗೊಳಿಸಿ ಕೆರೆಗಳನ್ನು ಸಂರಕ್ಷಿಸಬೇಕು. ರಾಜಕಾಲುವೆಗಳಲ್ಲಿನ ಅಡೆತಡೆಗಳನ್ನು ನಿವಾರಿಸಿ ಕೆರೆಗಳಿಗೆ ನೀರು ಹರಿಯುವಂತೆ ಮಾಡಬೇಕು. ಇದರಿಂದ ಅಂತರ್ಜಲ ಮಟ್ಟ ಹೆಚ್ಚಿಸುವುದರ ಜೊತೆಗೆ ಸರ್ಕಾರಿ ಭೂಮಿ ಭೂಗಳ್ಳರ ಪಾಲಾಗದಂತೆ ರಕ್ಷಿಸಬೇಕು ಎಂದು ನಿರ್ದೇಶನ ನೀಡಿದರು.

ಕನ್ನಡ ರಾಜ್ಯೋತ್ಸವದ ಕೊಡುಗೆಯಾಗಿ ಗ್ರಾಮಠಾಣಾ ಆಸ್ತಿಗಳಿಗೆ ಇ–ಸ್ವತ್ತು ನೀಡಲು ನಿಯಮಗಳಿಗೆ ತಿದ್ದುಪಡಿ ತರಲಾಗಿದ್ದು, ನವೆಂಬರ್ 2ರಿಂದ ಅರ್ಜಿ ಸ್ವೀಕರಿಸಲು ಅವಕಾಶ ಕಲ್ಪಿಸಲಾಗಿದೆ. ಈವರೆಗೆ ಎಷ್ಟು ಅರ್ಜಿಗಳು ಸ್ವೀಕೃತವಾಗಿವೆ ಎಂಬ ಮಾಹಿತಿ ಪಡೆದ ಸಚಿವರು, ಕಾರ್ಯನಿರ್ವಹಣಾಧಿಕಾರಿಗಳು ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಅರ್ಹ ಎಲ್ಲ ಆಸ್ತಿಗಳಿಗೂ ವಿಳಂಬವಿಲ್ಲದೆ ಇ–ಸ್ವತ್ತು ವಿತರಿಸುವಂತೆ ಸೂಚಿಸಿದರು.

ಇ–ಸ್ವತ್ತು ಕೋರಿ ಅರ್ಜಿ ಬಂದ ಕೂಡಲೇ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಅಥವಾ ಕಾರ್ಯದರ್ಶಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಬೇಕು. ಅರ್ಜಿಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ ಕಲ್ಪಿಸಿ, ಅಗತ್ಯ ಪ್ರಕ್ರಿಯೆಗಳನ್ನು ತ್ವರಿತವಾಗಿ ಪೂರ್ಣಗೊಳಿಸಿ ಯಾವುದೇ ವಿಳಂಬವಿಲ್ಲದೆ ಇ–ಸ್ವತ್ತು ನೀಡಬೇಕು ಎಂದು ತಿಳಿಸಿದರು.



ವಿಬಿಜಿ ರಾಮ್ ಜಿ ಯೋಜನೆಯಡಿ ರಾಜ್ಯದಲ್ಲಿ 1,000 ಬಸ್ ತಂಗುದಾಣಗಳನ್ನು ನಿರ್ಮಿಸಲು ತೀರ್ಮಾನಿಸಲಾಗಿದ್ದು, ರಾಜ್ಯಮಟ್ಟದಲ್ಲಿ ವಿನ್ಯಾಸ ಸಿದ್ಧಪಡಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಪ್ರಯಾಣಿಕರ ಆಗಮನ ಮತ್ತು ನಿರ್ಗಮನ ಹೆಚ್ಚಿರುವ 50 ಗ್ರಾಮಗಳನ್ನು ಗುರುತಿಸಿ, ಅಲ್ಲಿ ಸುಸಜ್ಜಿತ ಬಸ್ ತಂಗುದಾಣಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳುವಂತೆ ಸಚಿವರು ಸೂಚಿಸಿದರು.

ಮಹಿಳೆಯರಿಗೆ ಜೀವನೋಪಾಯ ಕಲ್ಪಿಸುವಲ್ಲಿ ಅಕ್ಕ ಕೆಫೆಗಳು ಮಹತ್ವದ ಪಾತ್ರ ವಹಿಸುತ್ತಿದ್ದು, ಜಿಲ್ಲೆಯಲ್ಲಿ ಹೊಸ ಅಕ್ಕ ಕೆಫೆ ಆರಂಭಿಸಬೇಕು. ಇದೇ ರೀತಿ ವಿಬಿಜಿ ರಾಮ್ ಜಿ ಯೋಜನೆಯಡಿ ಸ್ತ್ರೀ ಮಾರ್ಟ್‌ಗಳನ್ನು ನಿರ್ಮಿಸಲು ಕ್ರಮ ವಹಿಸಬೇಕು ಎಂದು ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ಇಲಾಖೆಗೆ ಲಭ್ಯವಿರುವ ಸಂಪನ್ಮೂಲಗಳನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು. ವಿಬಿಜಿ ರಾಮ್ ಜಿ ಯೋಜನೆಯಡಿ ಸಮುದಾಯ ಮತ್ತು ವೈಯಕ್ತಿಕ ಕಾಮಗಾರಿಗಳನ್ನು ಕೈಗೊಳ್ಳಲು ಗ್ರಾಮಸಭೆಗಳನ್ನು ನಡೆಸಬೇಕು. ಅರ್ಹ ಫಲಾನುಭವಿಗಳಿಗೆ ಕುರಿ ಮತ್ತು ಮೇಕೆ ಕೊಟ್ಟಿಗೆ, ಹಂದಿ ಗೂಡು, ಕೊಳವೆಬಾವಿ ಮರುಪೂರಣ ಗುಂಡಿ ಹಾಗೂ ಕೃಷಿ ಹೊಂಡಗಳನ್ನು ಮಂಜೂರು ಮಾಡಬೇಕು. ಕಾಮಗಾರಿ ನಿರ್ವಹಿಸಿದ ಕಾರ್ಮಿಕರಿಗೆ 15 ದಿನಗಳೊಳಗೆ ಕೂಲಿ ಪಾವತಿಯಾಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಆದೇಶಿಸಿದರು.

ಜಿಲ್ಲಾ ಪಂಚಾಯಿತಿ ಸಿಇಒ, ಉಪ ಕಾರ್ಯದರ್ಶಿ ಹಾಗೂ ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳು ಗ್ರಾಮ ಪಂಚಾಯಿತಿಗಳಿಗೆ ಹಠಾತ್ ಭೇಟಿ ನೀಡಬೇಕು. ರಸ್ತೆ, ಕುಡಿಯುವ ನೀರು, ಬೀದಿ ದೀಪ, ಇ–ಸ್ವತ್ತು, ನಕ್ಷೆ ಮಂಜೂರಾತಿ, ನೈರ್ಮಲ್ಯ, ಕೆರೆ ಅಭಿವೃದ್ಧಿ ಮತ್ತು ವಿಬಿಜಿ ರಾಮ್ ಜಿ ಯೋಜನೆಯ ಪ್ರಗತಿಯನ್ನು ಪರಿಶೀಲಿಸಬೇಕು. ಸ್ಥಳೀಯ ಜನರ ಅಹವಾಲುಗಳನ್ನು ಆಲಿಸಿ ಸಮಸ್ಯೆಗಳ ಪರಿಹಾರಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಚಿಕ್ಕಬಳ್ಳಾಪುರ ಜಿಲ್ಲೆ ಮೊದಲಿನಿಂದಲೂ ಬರಪೀಡಿತ ಪ್ರದೇಶವಾಗಿದೆ. ಈ ಬಾರಿ ಎಲ್ ನಿನೊ ಪ್ರಭಾವದಿಂದ ಮಳೆಯ ಕೊರತೆ ಉಂಟಾಗಿದ್ದು, ಮುಂದಿನ ಬೇಸಿಗೆಯಲ್ಲಿ ತೀವ್ರ ನೀರಿನ ಸಮಸ್ಯೆ ಎದುರಾಗುವ ಸಾಧ್ಯತೆಯಿದೆ. ಹೀಗಾಗಿ ಜಲ ಬಜೆಟಿಂಗ್ ಕೈಗೊಂಡು, ಯಾವ ಗ್ರಾಮಗಳಲ್ಲಿ ನೀರಿನ ಅಭಾವ ಉಂಟಾಗಬಹುದು ಎಂಬುದನ್ನು ಮುಂಚಿತವಾಗಿ ಅಂದಾಜಿಸಬೇಕು. ಅದಕ್ಕೆ ಅನುಗುಣವಾಗಿ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಸಚಿವರು ತಿಳಿಸಿದರು.

ಜಲ ಜೀವನ ಮಿಷನ್ ಕಾಮಗಾರಿಗಳು ಸಮರ್ಪಕವಾಗಿ ನಡೆಯುತ್ತಿವೆಯೇ ಎಂಬುದನ್ನು ಪರಿಶೀಲಿಸುವಂತೆ ಸೂಚಿಸಿದ ಅವರು, ಎಂಜಿನಿಯರ್‌ಗಳು ಕಾಮಗಾರಿ ಸ್ಥಳಗಳಿಗೆ ಭೇಟಿ ನೀಡಬೇಕು. ನಿರೀಕ್ಷಿತ ವೇಗದಲ್ಲಿ ಕೆಲಸ ನಡೆಯದಿದ್ದರೆ ಸಂಬಂಧಪಟ್ಟ ಗುತ್ತಿಗೆದಾರರಿಗೆ ಅಂತಿಮ ನೋಟಿಸ್ ನೀಡಿ, ಅಗತ್ಯವಿದ್ದಲ್ಲಿ ಹೊಸದಾಗಿ ಟೆಂಡರ್ ಕರೆಯಬೇಕು. ಎಲ್ಲ ಕಾಮಗಾರಿಗಳನ್ನು ಮಾರ್ಚ್ ಅಂತ್ಯದೊಳಗೆ ಪೂರ್ಣಗೊಳಿಸಬೇಕು ಎಂದು ನಿರ್ದೇಶನ ನೀಡಿದರು.

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಒಟ್ಟು 1,640 ಜಲ ಜೀವನ ಮಿಷನ್ ಕಾಮಗಾರಿಗಳು ನಡೆಯುತ್ತಿದ್ದು, ಈವರೆಗೆ ಶೇ.68ರಷ್ಟು ಮಾತ್ರ ಪೂರ್ಣಗೊಂಡಿವೆ. ಬಾಕಿ ಕಾಮಗಾರಿಗಳನ್ನು ತ್ವರಿತವಾಗಿ ಮುಗಿಸಿ, ಜಿಲ್ಲೆಯ ಪ್ರತಿಯೊಂದು ಮನೆಗೂ ಕುಡಿಯುವ ನೀರು ಪೂರೈಕೆಯಾಗುತ್ತಿರುವುದನ್ನು ಅಧಿಕಾರಿಗಳು ಖಚಿತಪಡಿಸಿಕೊಳ್ಳಬೇಕು ಎಂದು ಈಶ್ವರ ಖಂಡ್ರೆ ಸೂಚಿಸಿದರು.

ಎಥೆನಾಲ್ ಮಿಶ್ರಣದ 63 ಮಾದರಿಗಳ ಪರೀಕ್ಷಾ ವರದಿ ನೀಡಿಲ್ಲ: ರಿಜ್ವಾನ್

● ವಿಕ್ರಮ ವಾಹಿನಿ । ದಾವಣಗೆರೆ

ಪೆಟ್ರೋಲ್‌ನಲ್ಲಿ ನಿಗದಿತ ಪ್ರಮಾಣಕ್ಕಿಂತ ಹೆಚ್ಚಿನ ಎಥೆನಾಲ್ ಮಿಶ್ರಣ ಮಾಡಲಾಗುತ್ತಿದೆ ಎಂಬ ಅನುಮಾನ ಹಿನ್ನೆಲೆಯಲ್ಲಿ 63 ಮಾದರಿಗಳನ್ನು ಪರೀಕ್ಷೆಗೆ ಕಳುಹಿಸಿದ್ದರೂ, ಅದರ ವರದಿಯನ್ನು ನೀಡಿಲ್ಲ ಎಂದು ಆಹಾರ ಸಚಿವ ರಿಜ್ವಾನ್ ಅರ್ಷದ್ ಆರೋಪಿಸಿದ್ದಾರೆ. ಎಥೆನಾಲ್ ಮಿಶ್ರಣದಿಂದ ವಾಹನಗಳ ಮೈಲೇಜ್ ಕಡಿಮೆಯಾಗುತ್ತಿದ್ದು, ದುರಸ್ತಿಗೆ ಹೆಚ್ಚಿನ ಹಣ ಖರ್ಚು ಮಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಈ ನಷ್ಟವನ್ನು ಭರಿಸುವವರು ಯಾರು ಎಂದು ಕೇಂದ್ರ ಸರ್ಕಾರವನ್ನು ಪ್ರಶ್ನಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಾಹನಗಳಿಗೆ ಬಳಸುವ ಪೆಟ್ರೋಲ್‌ನಲ್ಲಿ ಶೇ.20ರಷ್ಟು ಎಥೆನಾಲ್ ಮಿಶ್ರಣ ಮಾಡುವುದರಿಂದ ಮೈಲೇಜ್ ಕಡಿಮೆಯಾಗುತ್ತಿದೆ. ಶೇ.30 ಅಥವಾ ಶೇ.40ರಷ್ಟು ಮಿಶ್ರಣ ಮಾಡಿದರೆ ಮೈಲೇಜ್ ಮತ್ತಷ್ಟು ಕುಸಿಯಲಿದೆ ಎಂದು ಆತಂಕ ವ್ಯಕ್ತಪಡಿಸಿದರು. ಈ ವಿಚಾರವನ್ನು ಪ್ರಸ್ತಾಪಿಸಿದರೆ ನಮ್ಮ ಮೇಲೆಯೇ ಮುಗಿಬೀಳುತ್ತಿದ್ದಾರೆ. ನಾವು ಮೂರನೇ ವ್ಯಕ್ತಿಯ ಪ್ರಯೋಗಾಲಯದಲ್ಲಿ ಇಂಧನದ ಮಾದರಿಗಳನ್ನು ಪರೀಕ್ಷೆ ಮಾಡಿಸಿದ್ದೇವೆ. ಶೇ.20ಕ್ಕಿಂತ ಹೆಚ್ಚು ಎಥೆನಾಲ್ ಮಿಶ್ರಣ ಮಾಡಬಾರದು ಎಂದು ಹೇಳಿದ್ದೇ ತಪ್ಪೇ? ವಾಹನಗಳ ಮೈಲೇಜ್ ಕಡಿಮೆಯಾಗುತ್ತಿದೆ, ದುರಸ್ತಿಗೆ ಹೋಗುತ್ತಿವೆ. ಹೀಗಾಗಿ ಗ್ರಾಹಕರಿಗೆ ರಿಯಾಯಿತಿ ನೀಡುವಂತೆ ಒತ್ತಾಯಿಸಿದ್ದೇವೆ ಎಂದು ಸ್ಪಷ್ಟಪಡಿಸಿದರು.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

‘ಮೆಟ್ರೊ ವಿಚಾರದಲ್ಲಿ ರಾಜ್ಯ ಸರ್ಕಾರದ ಕುಚೇಷ್ಟೆ’

● ವಿಕ್ರಮ ವಾಹಿನಿ । ಬೆಂಗಳೂರು

ಬೆಂಗಳೂರು ಮೆಟ್ರೊ ಯೋಜನೆಯ ಹಣಕಾಸು ಲೆಕ್ಕಾಚಾರದಲ್ಲಿ ರಾಜ್ಯ ಸರ್ಕಾರ ಉದ್ದೇಶ ಪೂರ್ವಕವಾಗಿ ತಪ್ಪು ಮಾಹಿತಿ ನೀಡುವ ಮೂಲಕ ಕುಚೇಷ್ಟೆ ಮಾಡಿದೆ ಎಂದು ಸಂಸದ ತೇಜಸ್ವಿ ಸೂರ್ಯ ಆರೋಪಿಸಿದ್ದಾರೆ.

ರಾಜ್ಯ ಬಿಜೆಪಿ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಪವರ್‌ಪಾಯಿಂಟ್ ಪ್ರಸ್ತುತಿ ಮೂಲಕ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರದ ಗ್ಯಾರಂಟಿ ಆಧಾರದ ಮೇಲೆ ಬೆಂಗಳೂರು ಮೆಟ್ರೊ ರೈಲು ನಿಗಮಕ್ಕೆ (ಬಿಎಂಆರ್‌ಸಿಎಲ್) ದೊರೆತಿರುವ ಸುಮಾರು 29 ಸಾವಿರ ಕೋಟಿ ರೂ. ಸಾಲವನ್ನು ಕೇಂದ್ರ ಸರ್ಕಾರದ ಪಾಲಿನ ಬದಲಿಗೆ ರಾಜ್ಯ ಸರ್ಕಾರದ ಪಾಲಿನ ಖಾತೆಗೆ ಸೇರಿಸಲಾಗಿದೆ ಎಂದು ದೂರಿದರು.

ಕೇಂದ್ರ ಸರ್ಕಾರವು ಬಿಎಂಆರ್‌ಸಿಎಲ್‌ಗೆ ಸಾಲ ಕೊಡಿಸಲು ಗ್ಯಾರಂಟಿ ನೀಡಿದೆ. ಆದರೆ ಈ ಸಾಲವನ್ನು ರಾಜ್ಯ ಸರ್ಕಾರ ಮರುಪಾವತಿ ಮಾಡುವುದಿಲ್ಲ. ಬಿಎಂಆರ್‌ಸಿಎಲ್ ಸಂಸ್ಥೆಯೇ ಮರುಪಾವತಿ ಮಾಡಲಿದೆ. ಲೆಕ್ಕಪತ್ರಗಳಲ್ಲಿ ಕೇಂದ್ರ ಸರ್ಕಾರದ ಕಾಲಂನಲ್ಲಿ ನಮೂದಾಗಿದ್ದ ಸಾಲದ ಮೊತ್ತವನ್ನು ರಾಜ್ಯ ಸರ್ಕಾರದ ಕಾಲಂಗೆ ವರ್ಗಾಯಿಸಿರುವುದರಿಂದ ಒಟ್ಟಾರೆ ಲೆಕ್ಕಾಚಾರವೇ ಬದಲಾಗಿದೆ ಎಂದು ವಿವರಿಸಿದರು.

ಬಿಎಂಆರ್‌ಸಿಎಲ್ ಸಾಲ ಮರುಪಾವತಿ ಮಾಡುವಾಗ ರಾಜ್ಯ ಸರ್ಕಾರದ ಪಾಲು ಎಲ್ಲಿದೆ? ಕೇಂದ್ರದ ಗ್ಯಾರಂಟಿಯಿಂದ ದೊರೆತ ಸಾಲವನ್ನು ರಾಜ್ಯದ ಪಾಲಿಗೆ ಸೇರಿಸಿ, ಬೆಂಗಳೂರಿನ ಸಚಿವರು ಮತ್ತು ಮುಖ್ಯಮಂತ್ರಿಯವರು ರಾಜ್ಯದ ಜನರಿಗೆ ತಪ್ಪು ಮಾಹಿತಿ ನೀಡುತ್ತಿದ್ದಾರೆ ಎಂದು ಟೀಕಿಸಿದರು.

ಬಿಎಂಆರ್‌ಸಿಎಲ್ ದಾಖಲೆಗಳ ಪ್ರಕಾರ ಕೇಂದ್ರ ಸರ್ಕಾರದ ಹೂಡಿಕೆ ಪ್ರಮಾಣ ಶೇ.54ರಷ್ಟಿದ್ದರೆ, ರಾಜ್ಯ ಸರ್ಕಾರದ ಹೂಡಿಕೆ ಶೇ.46ರಷ್ಟಿದೆ ಎಂದು ತೇಜಸ್ವಿ ಸೂರ್ಯ ತಿಳಿಸಿದರು. ಬಿಎಂಆರ್‌ಸಿಎಲ್‌ನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ತಲಾ ಶೇ.50ರಷ್ಟು ಹೂಡಿಕೆ ಮಾಡಿ ಮಾಲೀಕತ್ವ ಹೊಂದಿವೆ ಎಂದರು.

ಬೆಂಗಳೂರು ಮಾತ್ರವಲ್ಲದೆ ಕೊಚ್ಚಿ, ದೆಹಲಿ, ಮುಂಬೈ ಸೇರಿದಂತೆ ದೇಶದ ವಿವಿಧ ನಗರಗಳ ಮೆಟ್ರೊ ಯೋಜನೆಗಳಲ್ಲೂ ಇದೇ ರೀತಿಯ ವ್ಯವಸ್ಥೆ ಇದೆ. ಒಟ್ಟು 77,891 ಕೋಟಿ ರೂ. ಹೂಡಿಕೆಯ ಲೆಕ್ಕದಲ್ಲಿ ಕೇಂದ್ರ ಸರ್ಕಾರದ ಕಾಲಂನಲ್ಲಿದ್ದ ಸುಮಾರು 29 ಸಾವಿರ ಕೋಟಿ ರೂ. ಸಾಲವನ್ನು ರಾಜ್ಯ ಸರ್ಕಾರದ ಖಾತೆಗೆ ವರ್ಗಾಯಿಸಲಾಗಿದೆ ಎಂದು ಆಕ್ಷೇಪಿಸಿದರು.

ರಾಜ್ಯದ ಪಾಲು ಶೇ.79ರಿಂದ ಶೇ.87ಕ್ಕೆ ಏರಿಕೆಯಾಗಿದೆ ಎಂದು ಸರ್ಕಾರ ನಿನ್ನೆ ಹೇಳಿದೆ. ಆದರೆ ಮೊದಲ ಹಂತದಿಂದ ಮೂರನೇ ಹಂತದವರೆಗಿನ ಯೋಜನೆಗಳನ್ನು ಗಮನಿಸಿದರೆ ಕೇಂದ್ರ ಸರ್ಕಾರದ ಪಾಲು ಕ್ರಮವಾಗಿ ಶೇ.51, ಶೇ.53, ಶೇ.52 ಮತ್ತು ಶೇ.57ರಷ್ಟಿದೆ. ಕೇಂದ್ರದ ಸಾಲದ ಮೊತ್ತವನ್ನು ರಾಜ್ಯದ ಖಾತೆಗೆ ವರ್ಗಾಯಿಸಿರುವುದರಿಂದ ಈ ರೀತಿಯ ವ್ಯತ್ಯಾಸ ಕಂಡುಬಂದಿದೆ. ಲೆಕ್ಕಪತ್ರದಲ್ಲಿ ಒಂದು ಕಾಲಂನಲ್ಲಿರುವ ಮೊತ್ತವನ್ನು ಮತ್ತೊಂದು ಕಾಲಂಗೆ ಸ್ಥಳಾಂತರಿಸಿದರೆ ಕೆಳಗಿನ ಎಲ್ಲ ಲೆಕ್ಕಾಚಾರಗಳೂ ಬದಲಾಗುತ್ತವೆ ಎಂದು ಅವರು ವಿವರಿಸಿದರು.

ಪ್ರತಿ ಕಿಲೋಮೀಟರ್ ಮೆಟ್ರೊ ಮಾರ್ಗ ನಿರ್ಮಾಣಕ್ಕೆ ಕೇಂದ್ರ ಸರ್ಕಾರ 57 ಕೋಟಿ ರೂ. ಮತ್ತು ರಾಜ್ಯ ಸರ್ಕಾರ 297 ಕೋಟಿ ರೂ. ಖರ್ಚು ಮಾಡುತ್ತಿದೆ ಎಂದು ಹೇಳಿರುವುದಕ್ಕೂ ಯಾವುದೇ ಆಧಾರವಿಲ್ಲ ಎಂದು ಆರೋಪಿಸಿದರು. ಸಾಲದ ಮೊತ್ತವನ್ನು ರಾಜ್ಯದ ಖಾತೆಗೆ ಸೇರಿಸಿಕೊಂಡು ಈ ರೀತಿಯ ಆಧಾರರಹಿತ ಮಾಹಿತಿ ನೀಡಲಾಗುತ್ತಿದೆ ಎಂದು ಟೀಕಿಸಿದ ಅವರು, ಕೇಂದ್ರ ಸರ್ಕಾರ ಕೇವಲ ಶೇ.16ರಷ್ಟು ಹಣ ನೀಡುತ್ತಿದೆ ಎನ್ನುವವರು ಆ ನೆರವೂ ಬೇಡವೆಂದು ಘೋಷಿಸಲಿ ಎಂದು ಸವಾಲು ಹಾಕಿದರು.



ರಾಜ್ಯ ಸರ್ಕಾರದ ಆರ್ಥಿಕ ಸ್ಥಿತಿಯನ್ನು ಪ್ರಶ್ನಿಸಿದ ತೇಜಸ್ವಿ ಸೂರ್ಯ, ಬಿಎಂಟಿಸಿ ಸಿಬ್ಬಂದಿಗೆ ವೇತನ ನೀಡಲು ಹಣವಿಲ್ಲ. ಕೆಎಸ್‌ಆರ್‌ಟಿಸಿಗೆ 5 ಸಾವಿರ ಕೋಟಿ ರೂ. ಬಾಕಿ ಉಳಿದಿದೆ. ಪಿಂಚಣಿಗಳನ್ನೂ ನಿಲ್ಲಿಸಲಾಗಿದೆ ಎಂದು ಆರೋಪಿಸಿದರು. ಇಂತಹ ಆರ್ಥಿಕ ಸಂಕಷ್ಟದಲ್ಲಿರುವ ಸರ್ಕಾರಕ್ಕೆ ಅಂತರರಾಷ್ಟ್ರೀಯ ಸಂಸ್ಥೆಗಳು ಸಾಲ ನೀಡಲು ಸಾಧ್ಯವೇ ಎಂದು ಪ್ರಶ್ನಿಸಿದ ಅವರು, ಕೇಂದ್ರ ಸರ್ಕಾರದ ಗ್ಯಾರಂಟಿಯಿಂದಲೇ ಬಿಎಂಆರ್‌ಸಿಎಲ್‌ಗೆ 29 ಸಾವಿರ ಕೋಟಿ ರೂ. ಸಾಲ ದೊರೆತಿದೆ ಎಂದು ಹೇಳಿದರು.

ರೈಲ್ವೆ, ರಾಷ್ಟ್ರೀಯ ಹೆದ್ದಾರಿ ಮತ್ತು ಮೆಟ್ರೊ ಯೋಜನೆಗಳಲ್ಲಿ ಭೂಸ್ವಾಧೀನದ ವೆಚ್ಚವನ್ನು ರಾಜ್ಯ ಸರ್ಕಾರವೇ ಭರಿಸಬೇಕಾಗುತ್ತದೆ. ಯೋಜನೆಯ ಇತರ ವೆಚ್ಚವನ್ನು ಕೇಂದ್ರ ಸರ್ಕಾರ ಭರಿಸುತ್ತದೆ. ಇದು ದೇಶದಾದ್ಯಂತ ಅನುಸರಿಸಲಾಗುತ್ತಿರುವ ಸಾಮಾನ್ಯ ವ್ಯವಸ್ಥೆಯಾಗಿದೆ ಎಂದು ಮತ್ತೊಂದು ಪ್ರಶ್ನೆಗೆ ಉತ್ತರಿಸಿದರು.

ಒಂದು ವೇಳೆ ಈ ಸಾಲವನ್ನು ರಾಜ್ಯ ಸರ್ಕಾರವೇ ಮರುಪಾವತಿ ಮಾಡುತ್ತಿದ್ದರೆ ಅದನ್ನು ರಾಜ್ಯದ ಖಾತೆಗೆ ಸೇರಿಸುವುದು ಸಮರ್ಥನೀಯವಾಗಿರುತ್ತಿತ್ತು. ಆದರೆ ಸಾಲವನ್ನು ಮರುಪಾವತಿ ಮಾಡಬೇಕಿರುವುದು ಬಿಎಂಆರ್‌ಸಿಎಲ್. ಹೀಗಿರುವಾಗ ಅದನ್ನು ರಾಜ್ಯ ಸರ್ಕಾರದ ಹೂಡಿಕೆ ಎಂದು ತೋರಿಸುವುದು ಸರಿಯಲ್ಲ ಎಂದು ಸ್ಪಷ್ಟಪಡಿಸಿದರು.

ಇದೇ ವೇಳೆ ರಾಜ್ಯದ ಗೃಹ ಸಚಿವರು ಆರ್‌ಎಸ್‌ಎಸ್ ಕುರಿತು ಸುಳ್ಳು ಸುದ್ದಿ ಹರಡಿಸುತ್ತಿದ್ದಾರೆ. ಗ್ರಾಹಕ ವ್ಯವಹಾರಗಳ ಸಚಿವರು ಎಥೆನಾಲ್ ವಿಚಾರದಲ್ಲಿ ತಪ್ಪು ಮಾಹಿತಿ ನೀಡುತ್ತಿದ್ದಾರೆ. ಬೆಂಗಳೂರಿನ ಸಚಿವರು ಮತ್ತು ಮುಖ್ಯಮಂತ್ರಿಯವರು ಮೆಟ್ರೊ ವಿಷಯದಲ್ಲೂ ಜನರನ್ನು ದಾರಿ ತಪ್ಪಿಸುತ್ತಿದ್ದಾರೆ ಎಂದು ಆರೋಪಿಸಿದರು. ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಬೆಂಗಳೂರು ದಕ್ಷಿಣ ಜಿಲ್ಲಾಧ್ಯಕ್ಷರೂ ಆಗಿರುವ ಶಾಸಕ ಸಿ.ಕೆ. ರಾಮಮೂರ್ತಿ ಉಪಸ್ಥಿತರಿದ್ದರು.

ಅಕ್ಕಿ ಬಳಿಕ ಜೋಳದ ಸರದಿ: ಕೆ.ಜಿಗೆ ರೂ.110 ದಾಟಿದ ಬೆಲೆ!

● ವಿಕ್ರಮ ವಾಹಿನಿ । ಬೆಂಗಳೂರು

ಉತ್ತರ ಕರ್ನಾಟಕದ ಜನರ ನಿತ್ಯದ ಪ್ರಧಾನ ಆಹಾರವಾಗಿರುವ ಜೋಳದ ಬೆಲೆ ಇದೀಗ ಗಗನಕ್ಕೇರಿದೆ. ಇತಿಹಾಸದಲ್ಲೇ ಮೊದಲ ಬಾರಿಗೆ ಚಿಲ್ಲರೆ ಮಾರುಕಟ್ಟೆಯಲ್ಲಿ ಪ್ರತಿ ಕೆ.ಜಿ. ಜೋಳದ ದರ ರೂ.100ರ ಗಡಿ ದಾಟಿ ರೂ.110ರ ಆಸುಪಾಸಿಗೆ ತಲುಪಿದೆ. ಅಕ್ಕಿಯ ಬೆಲೆ ಏರಿಕೆಯ ಬೆನ್ನಲ್ಲೇ ಜೋಳದ ದರವೂ ಭಾರಿ ಪ್ರಮಾಣದಲ್ಲಿ ಹೆಚ್ಚಳವಾಗಿರುವುದು ಜನಸಾಮಾನ್ಯರಿಗೆ ಮತ್ತೊಂದು ಹೊರೆ ತಂದಿದೆ. ಜೋಳದ ಬೆಲೆ ಏರಿಕೆ ರೈತರಿಗೆ ಸಂತಸ ತಂದಿದ್ದರೆ, ಗ್ರಾಹಕರಿಗೆ ಕಣ್ಣೀರು ತರಿಸುತ್ತಿದೆ.

ಸತತ ಬರಗಾಲದ ಪರಿಣಾಮವಾಗಿ ಜೋಳದ ಇಳುವರಿ ತೀವ್ರವಾಗಿ ಕುಸಿದಿದ್ದು, ಮಾರುಕಟ್ಟೆಯಲ್ಲಿ ಪೂರೈಕೆ ಕಡಿಮೆಯಾಗಿದೆ. ಇದರ ಪರಿಣಾಮವಾಗಿ ಕಳೆದ ಕೇವಲ 15 ದಿನಗಳ ಅವಧಿಯಲ್ಲಿ ಉತ್ತರ ಕರ್ನಾಟಕದ ಪ್ರಮುಖ ಮಾರುಕಟ್ಟೆಗಳ ಪೈಕಿ ಬಾಗಲಕೋಟೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕೆ.ಜಿ. ಜೋಳದ ಬೆಲೆ ರೂ.60ರಿಂದ ಏಕಾಏಕಿ ರೂ.110ಕ್ಕೆ ಏರಿಕೆಯಾಗಿದೆ. ಈ ದಿಢೀರ್ ಬೆಲೆ ಏರಿಕೆಯು ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳ ದೈನಂದಿನ ಕಿರಾಣಿ ವೆಚ್ಚವನ್ನು ಹೆಚ್ಚಿಸಿದೆ. ದಿನಗೂಲಿ ನೌಕರರು ಕೂಡ ಒಂದು ಕೆ.ಜಿ. ಜೋಳ ಖರೀದಿಸಲು ನೂರು ರೂಪಾಯಿಗೂ ಹೆಚ್ಚು ಹಣ ವ್ಯಯಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

ಈ ಬೆಲೆ ಏರಿಕೆಯ ಮುನ್ಸೂಚನೆ ಅಕ್ಟೋಬರ್ ತಿಂಗಳ ಮೂರನೇ ವಾರದಲ್ಲೇ ಮಾರುಕಟ್ಟೆಯಲ್ಲಿ ಕಂಡುಬಂದಿತ್ತು. ಕಲಬುರಗಿ ಮಾರುಕಟ್ಟೆಯಲ್ಲಿ ಗ್ರಾಹಕರಿಂದ ಹೆಚ್ಚಿನ ಬೇಡಿಕೆ ಹೊಂದಿರುವ ಉತ್ತಮ ಗುಣಮಟ್ಟದ ‘ಮಾಲ್ದಂಡಿ’ ತಳಿಯ ಜೋಳದ ಸಗಟು ಬೆಲೆ ಕ್ವಿಂಟಾಲ್‌ಗೆ ರೂ.9,200 ತಲುಪಿತ್ತು. ಅಂದರೆ ಸಗಟು ಮಾರುಕಟ್ಟೆಯಲ್ಲೇ ಕೆ.ಜಿಗೆ ರೂ.92ರಷ್ಟಿತ್ತು. ಮಾರುಕಟ್ಟೆಯ ಇತಿಹಾಸದಲ್ಲೇ ಇದು ಸಾರ್ವಕಾಲಿಕ ದಾಖಲೆಯ ದರವಾಗಿದೆ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

ಜೋಳದ ಬೆಲೆ ಏರಿಕೆಗೆ ಮಳೆ ಕೊರತೆ ಮತ್ತು ರಾಜ್ಯವನ್ನು ಸತತವಾಗಿ ಕಾಡುತ್ತಿರುವ ಬರಗಾಲವೇ ಪ್ರಮುಖ ಕಾರಣಗಳಾಗಿವೆ. ಮುಂಗಾರು ಹಾಗೂ ಹಿಂಗಾರು ಹಂಗಾಮುಗಳಲ್ಲಿ ಸಮರ್ಪಕ ಮಳೆಯಾಗದ ಕಾರಣ ಕೃಷಿಭೂಮಿಯಲ್ಲಿ ಬೆಳೆ ಒಣಗಿ, ಫಸಲು ಬಹುಪಾಲು ನಾಶವಾಗಿದೆ. ಇದರಿಂದಾಗಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ಮಾರುಕಟ್ಟೆಗಳಿಗೆ ರೈತರಿಂದ ಬರುತ್ತಿದ್ದ ಜೋಳದ ಪ್ರಮಾಣ ಗಣನೀಯವಾಗಿ ಕುಸಿದಿದೆ. ಮತ್ತೊಂದೆಡೆ ಮಾರುಕಟ್ಟೆಯಲ್ಲಿ ಬೇಡಿಕೆ ಮುಂದುವರಿದಿರುವುದರಿಂದ ಪೂರೈಕೆ ಮತ್ತು ಬೇಡಿಕೆಯ ನಡುವಿನ ಅಂತರ ಹೆಚ್ಚಾಗಿ ಬೆಲೆ ಏರಿಕೆಯಾಗಿದೆ.

ಜೋಳದ ಬೆಲೆ ಏರಿಕೆಯ ಪರಿಣಾಮ ಕೇವಲ ಈ ಧಾನ್ಯಕ್ಕೆ ಸೀಮಿತವಾಗಿಲ್ಲ. ಜೋಳದ ಅಭಾವದಿಂದಾಗಿ ಗ್ರಾಹಕರು ಪರ್ಯಾಯ ಧಾನ್ಯಗಳತ್ತ ಮುಖ ಮಾಡುತ್ತಿರುವುದರಿಂದ ಸಜ್ಜೆ ಮತ್ತು ಗೋವಿನ ಜೋಳದ ಬೇಡಿಕೆಯೂ ಹೆಚ್ಚಾಗಿದೆ. ಪರಿಣಾಮವಾಗಿ ಈ ಧಾನ್ಯಗಳ ಬೆಲೆಯಲ್ಲಿಯೂ ಗಣನೀಯ ಏರಿಕೆ ಕಂಡುಬಂದಿದೆ. ಹೀಗಾಗಿ ಜೋಳದ ಬದಲಿಗೆ ಇತರ ಧಾನ್ಯಗಳನ್ನು ಖರೀದಿಸೋಣ ಎನ್ನುವ ಗ್ರಾಹಕರಿಗೂ ಬೆಲೆ ಏರಿಕೆಯ ಬಿಸಿ ತಟ್ಟುತ್ತಿದೆ.

ರಾಜ್ಯದ ವಿವಿಧ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಲ್ಲಿ ಜೋಳದ ಸಗಟು ಬೆಲೆಯನ್ನು ಅದರ ಗುಣಮಟ್ಟ ಮತ್ತು ತಳಿಗೆ ಅನುಗುಣವಾಗಿ ನಿರ್ಧರಿಸಲಾಗುತ್ತದೆ. ಆದರೆ ಸಗಟು ಮತ್ತು ಚಿಲ್ಲರೆ ಬೆಲೆಗಳ ನಡುವೆ ಸಾಕಷ್ಟು ವ್ಯತ್ಯಾಸವಿದೆ. ಸಗಟು ಮಾರುಕಟ್ಟೆಯಿಂದ ಚಿಲ್ಲರೆ ಮಾರಾಟದ ಹಂತಕ್ಕೆ ಬರುವಷ್ಟರಲ್ಲಿ ಸಾಗಿಗೆ ವೆಚ್ಚ, ಕಾರ್ಮಿಕರ ಕೂಲಿ, ಪ್ಯಾಕಿಂಗ್, ಗೋದಾಮು ನಿರ್ವಹಣೆ ಮತ್ತು ಮಧ್ಯವರ್ತಿಗಳ ಲಾಭಾಂಶ ಸೇರ್ಪಡೆಯಾಗುತ್ತದೆ. ಇದರಿಂದಾಗಿ ಗ್ರಾಹಕರು ಕೆ.ಜಿಗೆ ರೂ.100ರಿಂದ ರೂ.110ರ ವರೆಗೆ ಹಣ ನೀಡಬೇಕಾಗಿದೆ.

ಜೋಳದ ಬೆಲೆ ಏರಿಕೆಯ ಬಿಸಿ ಉತ್ತರ ಕರ್ನಾಟಕದ ಖಾನಾವಳಿ ಉದ್ಯಮಕ್ಕೂ ತಟ್ಟಿದೆ. ಈ ಭಾಗದ ಜನರ ನೆಚ್ಚಿನ ಆಹಾರವಾದ ಜೋಳದ ರೊಟ್ಟಿ ಊಟದ ದರವನ್ನು ಹೆಚ್ಚಿಸುವ ಅನಿವಾರ್ಯತೆ ಹೋಟೆಲ್ ಮಾಲೀಕರ ಎದುರಾಗಿದೆ. ಕಚ್ಚಾ ಸಾಮಗ್ರಿಗಳ ಬೆಲೆ ಏರಿಕೆಯಿಂದಾಗಿ ಖಾನಾವಳಿಗಳಲ್ಲಿ ಊಟದ ದರ ಹೆಚ್ಚಳವಾಗುವ ಸಾಧ್ಯತೆ ಇದೆ. ಇದರಿಂದ ನಿತ್ಯ ಖಾನಾವಳಿಗಳನ್ನೇ ಅವಲಂಬಿಸಿರುವ ಕಾರ್ಮಿಕರು, ವಿದ್ಯಾರ್ಥಿಗಳು ಹಾಗೂ ಇತರ ಗ್ರಾಹಕರ ಮಾಸಿಕ ವೆಚ್ಚವೂ ಹೆಚ್ಚಾಗಲಿದೆ.

ಒಟ್ಟಿನಲ್ಲಿ, ಜೋಳದ ಬೆಲೆ ಏರಿಕೆಯು ರೈತರಿಗೆ ಉತ್ತಮ ಆದಾಯದ ನಿರೀಕ್ಷೆ ಮೂಡಿಸಿದ್ದರೂ, ಜೋಳವನ್ನೇ ಪ್ರಧಾನ ಆಹಾರವಾಗಿ ಬಳಸುವ ಉತ್ತರ ಕರ್ನಾಟಕದ ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳಿಗೆ ಸಂಕಷ್ಟ ತಂದಿದೆ. ಆಹಾರ ಧಾನ್ಯಗಳ ಬೆಲೆ ಏರಿಕೆಯಿಂದ ಸಾಮಾನ್ಯ ಜನರ ಜೀವನ ನಿರ್ವಹಣೆಯ ವೆಚ್ಚ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಮಾರುಕಟ್ಟೆಯ ಬೆಲೆ ಪರಿಸ್ಥಿತಿ ಹಾಗೂ ಧಾನ್ಯಗಳ ಪೂರೈಕೆಯ ಮೇಲೆ ಸಂಬಂಧಪಟ್ಟ ಇಲಾಖೆ ಗಮನಹರಿಸುವ ಅಗತ್ಯವಿದೆ.

ಗೃಹ ಇಲಾಖೆಗೆ ‘ಕೊಳಕು ತಂತ್ರಗಳ ಇಲಾಖೆ’ ಎಂದು ಮರುನಾಮಕರಣ ಮಾಡಿ

● ವಿಕ್ರಮ ವಾಹಿನಿ । ಬೆಂಗಳೂರು



ಗೃಹ ಇಲಾಖೆಯ ಹೆಸರನ್ನು ‘ಕೊಳಕು ತಂತ್ರಗಳ ಇಲಾಖೆ’ ಎಂದು ಮರುನಾಮಕರಣ ಮಾಡುವಂತೆ ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಒತ್ತಾಯಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಕೃತಕ ಬುದ್ಧಿಮತ್ತೆ ಮೂಲಕ ಸೃಷ್ಟಿಸಿದ ಹಾಗೂ ತಿರುಚಿದ ಚಿತ್ರಗಳನ್ನು ಬಳಸಿಕೊಂಡು ರಾಷ್ಟ್ರೀಯ ಸ್ವಯಂಸೇವಕ ಸಂಘಕ್ಕೆ (ಆರ್‌ಎಸ್‌ಎಸ್) ಕೆಟ್ಟ ಹೆಸರು ತರಲು ಕೀಳುಮಟ್ಟದ ಕಿಡಿಗೇಡಿತನದ ಕೃತ್ಯಗಳಲ್ಲಿ ತೊಡಗಿದ್ದಾರೆ ಎಂದು ಆರೋಪಿಸಿದ್ದಾರೆ.

ಇತ್ತೀಚೆಗೆ ಪ್ರಿಯಾಂಕ್ ಖರ್ಗೆ ಅವರು ಬಿಹಾರ ಮತ್ತು ಹರಿಯಾಣದಲ್ಲಿ ಆರ್‌ಎಸ್‌ಎಸ್ ಸ್ವಯಂಸೇವಕರು 44,000 ಕೆ.ಜಿ. ಮದ್ದುಗುಂಡುಗಳನ್ನು ಸಾಗಿಸುತ್ತಿದ್ದಾರೆ ಎಂಬಂತೆ ಬಿಂಬಿಸುವ ನಕಲಿ ಕೃತಕ ಬುದ್ಧಿಮತ್ತೆ ಚಿತ್ರಗಳನ್ನು ಪ್ರಸಾರ ಮಾಡಿದ್ದಾರೆ. ಈ ಮೂಲಕ ತಮ್ಮ ಕೀಳು ಮನಸ್ಥಿತಿಯನ್ನು ಸಾಬೀತುಪಡಿಸಿದ್ದಾರೆ ಎಂದು ರವಿಕುಮಾರ್ ಟೀಕಿಸಿದ್ದಾರೆ.

ರಾಜ್ಯದ ಕಾನೂನು ಮತ್ತು ಸುವ್ಯವಸ್ಥೆ ಸೇರಿದಂತೆ ಗೃಹ ಇಲಾಖೆಯ ಅತ್ಯಂತ ಪ್ರಮುಖ ಜವಾಬ್ದಾರಿಗಳನ್ನು ಸಮರ್ಪಕವಾಗಿ ನಿರ್ವಹಿಸುವ ಬದಲು ಪ್ರಿಯಾಂಕ್ ಖರ್ಗೆ ಅವರು ಆರ್‌ಎಸ್‌ಎಸ್ ವಿರುದ್ಧ ಆರೋಪ ಮಾಡುವುದರಲ್ಲೇ ತಮ್ಮ ಸಮಯ ಮತ್ತು ಶಕ್ತಿಯನ್ನು ವ್ಯರ್ಥ ಮಾಡುತ್ತಿದ್ದಾರೆ ಎಂದು ಅವರು ದೂರಿದ್ದಾರೆ. ಪ್ರಿಯಾಂಕ್ ಖರ್ಗೆ ಅವರ ಇಂತಹ ಕೀಳುಮಟ್ಟದ ಕಿಡಿಗೇಡಿ ಚಟುವಟಿಕೆಗಳನ್ನು ಪರಿಗಣಿಸಿ ಗೃಹ ಇಲಾಖೆಯ ಹೆಸರನ್ನು ‘ಕೊಳಕು ತಂತ್ರಗಳ ಇಲಾಖೆ’ ಎಂದು ಮರುನಾಮಕರಣ ಮಾಡುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಒತ್ತಾಯಿಸುತ್ತೇನೆ ಎಂದು ಎನ್. ರವಿಕುಮಾರ್ ತಿಳಿಸಿದ್ದಾರೆ.

‘45 ಸಾವಿರಕ್ಕೂ ಹೆಚ್ಚು ರಸ್ತೆ ಗುಂಡಿ ಪತ್ತೆ’



● ವಿಕ್ರಮ ವಾಹಿನಿ । ಬೆಂಗಳೂರು

ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ರಸ್ತೆ ಗುಂಡಿಗಳ ಸಮಸ್ಯೆ ದಿನದಿಂದ ದಿನಕ್ಕೆ ಗಂಭೀರವಾಗುತ್ತಿದ್ದು, ವಾಹನ ಸವಾರರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಒಂದು ಕಡೆ ಗುಂಡಿ ಮುಚ್ಚುವ ಕಾಮಗಾರಿ ನಡೆಯುತ್ತಿದ್ದರೆ, ಮತ್ತೊಂದೆಡೆ ಹೊಸ ಗುಂಡಿಗಳು ಸೃಷ್ಟಿಯಾಗುತ್ತಿವೆ. ಈ ಸಮಸ್ಯೆಗೆ ಕಡಿವಾಣ ಹಾಕಲು ಮುಂದಾಗಿರುವ ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅವರು ಐದು ನಗರ ಪಾಲಿಕೆಗಳ ಆಯುಕ್ತರಿಗೆ ಗಡುವು ವಿಧಿಸಿದ್ದಾರೆ.

ನಗರದ ಐದು ಪಾಲಿಕೆಗಳ ವ್ಯಾಪ್ತಿಯಲ್ಲಿ ಕೃತಕ ಬುದ್ಧಿಮತ್ತೆ ತಂತ್ರಜ್ಞಾನದ ನೆರವಿನಿಂದ 45 ಸಾವಿರಕ್ಕೂ ಹೆಚ್ಚು ರಸ್ತೆ ಗುಂಡಿಗಳನ್ನು ಗುರುತಿಸಲಾಗಿದೆ. ಈ ಗುಂಡಿಗಳನ್ನು ತ್ವರಿತವಾಗಿ ಮುಚ್ಚುವಂತೆ ಪಾಲಿಕೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಮೊದಲ ಹಂತದಲ್ಲಿ ನವೆಂಬರ್ ಅಂತ್ಯದೊಳಗೆ ಪ್ರಮುಖ ರಸ್ತೆಗಳು ಹಾಗೂ ಉಪಪ್ರಮುಖ ರಸ್ತೆಗಳಲ್ಲಿನ ಗುಂಡಿಗಳನ್ನು ಮುಚ್ಚಿ, ಸಂಚಾರಕ್ಕೆ ಅನುಕೂಲ ಕಲ್ಪಿಸುವ ಗುರಿ ನಿಗದಿಪಡಿಸಲಾಗಿದೆ.

ರಸ್ತೆ ಕಾಮಗಾರಿಗಳಲ್ಲಿ ಕಳಪೆ ನಿರ್ವಹಣೆ, ಸಮರ್ಪಕ ದುರಸ್ತಿ ಕಾರ್ಯಗಳ ಕೊರತೆ ಹಾಗೂ ಮಳೆಯ ಪರಿಣಾಮವಾಗಿ ನಗರದ ರಸ್ತೆಗಳಲ್ಲಿ ಗುಂಡಿಗಳ ಸಂಖ್ಯೆ ಹೆಚ್ಚಾಗುತ್ತಿದೆ. ಇದರಿಂದ ವಾಹನ ಸವಾರರು ನಿತ್ಯ ಪರದಾಡುವಂತಾಗಿದೆ. ರಸ್ತೆ ಗುಂಡಿಗಳಿಂದ ವಾಹನಗಳ ಸಂಚಾರಕ್ಕೆ ಅಡ್ಡಿಯಾಗುವುದರ ಜತೆಗೆ ಅಪಘಾತಗಳ ಆತಂಕವೂ ಎದುರಾಗಿದೆ. ಈ ಹಿನ್ನೆಲೆಯಲ್ಲಿ ಜಿಬಿಎ ಮುಖ್ಯ ಆಯುಕ್ತರು ಅಧಿಕಾರಿಗಳಿಗೆ ಗಡುವು ನೀಡಿ, ಕಾಮಗಾರಿಗಳ ಪ್ರಗತಿಯನ್ನು ತ್ವರಿತಗೊಳಿಸುವಂತೆ ಸೂಚಿಸಿದ್ದಾರೆ.

ಇದೇ ವೇಳೆ ರಸ್ತೆಗಳನ್ನು ಅಗೆದು ಹಾಗೆಯೇ ಬಿಡುವ ಪ್ರವೃತ್ತಿಗೆ ಕಡಿವಾಣ ಹಾಕಲು ಜಿಬಿಎ ಕಟ್ಟುನಿಟ್ಟಿನ ಕ್ರಮಕ್ಕೆ ಮುಂದಾಗಿದೆ. ವಿವಿಧ ಇಲಾಖೆಗಳು ಹಾಗೂ ಗುತ್ತಿಗೆದಾರರು ಕಾಮಗಾರಿಗಳ ಹೆಸರಿನಲ್ಲಿ ರಸ್ತೆಗಳನ್ನು ಅಗೆದು, ನಂತರ ಸಮರ್ಪಕವಾಗಿ ದುರಸ್ತಿ ಮಾಡದೆ ಬಿಡುತ್ತಿರುವ ದೂರುಗಳು ಕೇಳಿಬರುತ್ತಿವೆ. ಇದರಿಂದ ಹೊಸದಾಗಿ ರಸ್ತೆ ಗುಂಡಿಗಳು ಸೃಷ್ಟಿಯಾಗುತ್ತಿವೆ.

ಇನ್ನು ಮುಂದೆ ಯಾವುದೇ ಉದ್ದೇಶಕ್ಕಾಗಿ ರಸ್ತೆ ಅಗೆತ ನಡೆಸಬೇಕಾದರೂ ಸಂಬಂಧಪಟ್ಟ ಇಲಾಖೆಗಳು ಹಾಗೂ ಗುತ್ತಿಗೆದಾರರು ಕಡ್ಡಾಯವಾಗಿ ಜಿಬಿಎಯಿಂದ ಅನುಮತಿ ಪಡೆಯಬೇಕು. ಅನುಮತಿಯಿಲ್ಲದೆ ರಸ್ತೆ ಅಗೆದರೆ, ಆ ರಸ್ತೆಯನ್ನು ದುರಸ್ತಿಪಡಿಸಲು ತಗಲುವ ಸಂಪೂರ್ಣ ವೆಚ್ಚವನ್ನು ಸಂಬಂಧಪಟ್ಟವರಿಂದಲೇ ವಸೂಲಿ ಮಾಡಲಾಗುತ್ತದೆ. ಅಲ್ಲದೆ, ನಿಯಮ ಉಲ್ಲಂಘಿಸಿದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯ ಆಯುಕ್ತರು ಎಚ್ಚರಿಕೆ ನೀಡಿದ್ದಾರೆ.

ಒಟ್ಟಾರೆ ಬೆಂಗಳೂರಿನ ರಸ್ತೆ ಗುಂಡಿಗಳ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಜಿಬಿಎ ಹಲವು ಕ್ರಮಗಳನ್ನು ಕೈಗೊಳ್ಳಲು ಮುಂದಾಗಿದೆ. ಕೃತಕ ಬುದ್ಧಿಮತ್ತೆ ತಂತ್ರಜ್ಞಾನದ ಮೂಲಕ ಗುರುತಿಸಿರುವ 45 ಸಾವಿರಕ್ಕೂ ಹೆಚ್ಚು ಗುಂಡಿಗಳನ್ನು ನಿಗದಿತ ಅವಧಿಯಲ್ಲಿ ಮುಚ್ಚುವ ಕಾರ್ಯ ಎಷ್ಟರಮಟ್ಟಿಗೆ ಯಶಸ್ವಿಯಾಗಲಿದೆ ಎಂಬುದನ್ನು ಕಾದುನೋಡಬೇಕಿದೆ.

ಗಡುವಿನೊಳಗೆ ಕಾಮಗಾರಿ ಪೂರ್ಣಗೊಳಿಸುವುದರ ಜತೆಗೆ ಮತ್ತೆ ಗುಂಡಿಗಳು ಸೃಷ್ಟಿಯಾಗದಂತೆ ಗುಣಮಟ್ಟದ ರಸ್ತೆ ನಿರ್ವಹಣೆಗೂ ಅಧಿಕಾರಿಗಳು ಆದ್ಯತೆ ನೀಡಬೇಕಿದೆ.

ಪಶ್ಚಿಮ ಘಟ್ಟದ ವಿದ್ಯುದ್ದೀಕೃತ ರೈಲು ಮಾರ್ಗಕ್ಕೆ ಕೆಪಿಟಿಸಿಎಲ್‌ನಿಂದ ಶಕ್ತಿ


● ವಿಕ್ರಮ ವಾಹಿನಿ । ಬೆಂಗಳೂರು

ಪಶ್ಚಿಮ ಘಟ್ಟದ ಅತ್ಯಂತ ಸವಾಲಿನ ಸಕಲೇಶಪುರ–ಸುಬ್ರಹ್ಮಣ್ಯ ರೋಡ್ ರೈಲು ಮಾರ್ಗ ಹೊಸದಾಗಿ ವಿದ್ಯುದ್ದೀಕರಣಗೊಂಡಿರುವ ಹಿನ್ನೆಲೆಯಲ್ಲಿ, ವಿದ್ಯುತ್ ರೈಲುಗಳ ಸುಗಮ ಸಂಚಾರಕ್ಕೆ ಅಗತ್ಯವಾದ ವಿಶ್ವಾಸಾರ್ಹ ವಿದ್ಯುತ್ ಎಳೆತ ಪೂರೈಕೆ ವ್ಯವಸ್ಥೆಯನ್ನು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ (ಕೆಪಿಟಿಸಿಎಲ್) ಬಲಪಡಿಸಿದೆ ಎಂದು ಇಂಧನ ಹಾಗೂ ಪ್ರವಾಸೋದ್ಯಮ ಸಚಿವ ಕೆ.ಜೆ.ಜಾರ್ಜ್ ತಿಳಿಸಿದ್ದಾರೆ.

ನವೆಂಬರ್ 13ರಂದು ಆರಂಭವಾಗಲಿರುವ ಯಶವಂತಪುರ–ಮಂಗಳೂರು–ಮಡಗಾಂವ್ ವಂದೇ ಭಾರತ್ ಎಕ್ಸ್‌ಪ್ರೆಸ್ ಸೇವೆಯೊಂದಿಗೆ ಪಶ್ಚಿಮ ಘಟ್ಟದ ಹೊಸದಾಗಿ ವಿದ್ಯುದ್ದೀಕೃತಗೊಂಡ ಮಾರ್ಗದಲ್ಲಿ ಮೊದಲ ಬಾರಿಗೆ ವಂದೇ ಭಾರತ್ ವಿದ್ಯುತ್ ರೈಲು ಸಂಚರಿಸಲಿದೆ. ಈ ರೈಲು ಸಂಚಾರಕ್ಕೆ ಅಗತ್ಯವಾದ ವಿದ್ಯುತ್ ಪೂರೈಕೆ ವ್ಯವಸ್ಥೆಯನ್ನು ಸಜ್ಜುಗೊಳಿಸಲು ಕೆಪಿಟಿಸಿಎಲ್ ಬಲಿಷ್ಠ ಪ್ರಸರಣ ಮೂಲಸೌಕರ್ಯವನ್ನು ಅಭಿವೃದ್ಧಿಪಡಿಸಿದೆ.

ಮೂಲಸೌಕರ್ಯ ಕಾಮಗಾರಿಗಳು ನಿಗದಿತ ಸಮಯದಲ್ಲಿ ಪೂರ್ಣಗೊಳ್ಳುವಂತೆ ಖಚಿತಪಡಿಸಲು ಇಂಧನ ಸಚಿವ ಕೆ.ಜೆ. ಜಾರ್ಜ್ ಅವರು ಸರಣಿ ಪರಿಶೀಲನಾ ಸಭೆಗಳನ್ನು ನಡೆಸಿದ್ದರು. ರೈಲ್ವೆ ಇಲಾಖೆ ಮತ್ತು ಸಂಬಂಧಪಟ್ಟ ಅಧಿಕಾರಿಗಳ ನಡುವೆ ತ್ವರಿತ ಸಮನ್ವಯ ಸಾಧಿಸಲು ಅಗತ್ಯ ಕ್ರಮಗಳನ್ನು ಕೈಗೊಂಡಿದ್ದರು. ಅವರ ಮಾರ್ಗದರ್ಶನದಲ್ಲಿ ಪ್ರಸರಣ ಜಾಲದ ಬಲವರ್ಧನೆ, ಉಪಕೇಂದ್ರಗಳ ಸಾಮರ್ಥ್ಯ ಹೆಚ್ಚಳ ಹಾಗೂ ರೈಲ್ವೆ ವಿದ್ಯುತ್ ಎಳೆತ ಕೇಂದ್ರಗಳಿಗೆ ಸಂಪರ್ಕ ಕಲ್ಪಿಸುವ ಕಾಮಗಾರಿಗಳಿಗೆ ಆದ್ಯತೆ ನೀಡಿ ಹಂತ ಹಂತವಾಗಿ ಪೂರ್ಣಗೊಳಿಸಲಾಗಿದೆ.

ಪಶ್ಚಿಮ ಘಟ್ಟದ ಕಡಿದಾದ ಬೆಟ್ಟಗಳು, ತೀವ್ರ ಏರಿಳಿತ, ಭಾರಿ ಮಳೆ ಹಾಗೂ ಸಂಕೀರ್ಣ ಭೌಗೋಳಿಕ ಪರಿಸ್ಥಿತಿಯಲ್ಲಿ ವಿದ್ಯುತ್ ಮೂಲಸೌಕರ್ಯ ನಿರ್ಮಿಸುವುದು ದೊಡ್ಡ ತಾಂತ್ರಿಕ ಸವಾಲಾಗಿತ್ತು. ಇಂತಹ ಪ್ರತಿಕೂಲ ಪರಿಸ್ಥಿತಿಯ ನಡುವೆಯೂ ಕೆಪಿಟಿಸಿಎಲ್‌ನ



ಎಂಜಿನಿಯರ್‌ಗಳು ಮತ್ತು ತಾಂತ್ರಿಕ ಸಿಬ್ಬಂದಿ ನಿರಂತರವಾಗಿ ಕಾರ್ಯನಿರ್ವಹಿಸಿ, ಅಗತ್ಯ ಪ್ರಸರಣ ಸಂಪರ್ಕ, ವಿದ್ಯುತ್ ಜಾಲದ ಬಲವರ್ಧನೆ ಹಾಗೂ ನಿರಂತರ ವಿದ್ಯುತ್ ಪೂರೈಕೆ ವ್ಯವಸ್ಥೆಗಳನ್ನು ಸಜ್ಜುಗೊಳಿಸಿದ್ದಾರೆ.

ಪಶ್ಚಿಮ ಘಟ್ಟದಂತಹ ದುರ್ಗಮ ಪ್ರದೇಶದಲ್ಲಿ ಹೊಸದಾಗಿ ವಿದ್ಯುದ್ದೀಕೃತಗೊಂಡ ರೈಲು ಮಾರ್ಗಕ್ಕೆ ನಿರಂತರ ಹಾಗೂ ವಿಶ್ವಾಸಾರ್ಹ ವಿದ್ಯುತ್ ಸೇವೆ ಒದಗಿಸುವುದು ದೊಡ್ಡ ತಾಂತ್ರಿಕ ಜವಾಬ್ದಾರಿಯಾಗಿದೆ. ಸಿಬ್ಬಂದಿ ಅತ್ಯಂತ ಸವಾಲಿನ ಪರಿಸ್ಥಿತಿಯಲ್ಲೂ ಶ್ರಮಿಸಿ ಅಗತ್ಯ ಪ್ರಸರಣ ಮೂಲಸೌಕರ್ಯವನ್ನು ಸಿದ್ಧಪಡಿಸಿದ್ದಾರೆ. ಅವರ ತಾಂತ್ರಿಕ ಕೌಶಲ್ಯ, ಬದ್ಧತೆ ಹಾಗೂ ಆಡಳಿತ ಮಂಡಳಿಯ ಸಮನ್ವಯದ ಪ್ರಯತ್ನ ಶ್ಲಾಘನೀಯ ಎಂದು ಸಚಿವ ಕೆ.ಜೆ. ಜಾರ್ಜ್ ಹೇಳಿದ್ದಾರೆ.

ಹೊಸ ರೈಲು ಸಂಪರ್ಕವು ಬೆಂಗಳೂರು ಮತ್ತು ಕರಾವಳಿ ಕರ್ನಾಟಕದ ನಡುವಿನ ಪ್ರಯಾಣವನ್ನು ಮತ್ತಷ್ಟು ಸುಗಮಗೊಳಿಸಲಿದೆ. ಅಲ್ಲದೆ, ಮಂಗಳೂರು, ಉಡುಪಿ, ಮುರುಡೇಶ್ವರ ಹಾಗೂ ಗೋಕರ್ಣ ಸೇರಿದಂತೆ ಕರಾವಳಿ ಭಾಗದ ಪ್ರವಾಸೋದ್ಯಮ, ಆತಿಥ್ಯ ಉದ್ಯಮ ಮತ್ತು ಸ್ಥಳೀಯ ಆರ್ಥಿಕ ಚಟುವಟಿಕೆಗಳಿಗೆ ಹೊಸ ಅವಕಾಶಗಳನ್ನು ಸೃಷ್ಟಿಸಲಿದೆ ಎಂದು ಅವರು ತಿಳಿಸಿದ್ದಾರೆ.

ಇಂಧನ ಸಚಿವರ ನಿರ್ದೇಶನದಂತೆ ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕ ಡಾ. ವಿ. ರಾಮ್ ಪ್ರಸಾತ್ ಮನೋಹರ್ ಅವರು ಅಧಿಕಾರಿಗಳೊಂದಿಗೆ ವಿಶೇಷ ಸಿದ್ಧತಾ ಪರಿಶೀಲನೆ ನಡೆಸಿದ್ದಾರೆ. ವಂದೇ ಭಾರತ್ ರೈಲು ಸಂಚಾರ ಆರಂಭಕ್ಕೂ ಮುನ್ನ ಸಂಬಂಧಪಟ್ಟ ಉಪಕೇಂದ್ರಗಳು ಮತ್ತು ಪ್ರಸರಣ ವ್ಯವಸ್ಥೆಗಳ ಕಾರ್ಯಾಚರಣಾ ಸಿದ್ಧತೆಯನ್ನು ಖಚಿತಪಡಿಸಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಪಶ್ಚಿಮ ಘಟ್ಟದ ಸವಾಲಿನ ಭೌಗೋಳಿಕ ಪರಿಸ್ಥಿತಿಯಲ್ಲಿ ವಿಶ್ವಾಸಾರ್ಹ ವಿದ್ಯುತ್ ಎಳೆತ ಪೂರೈಕೆಗಾಗಿ ವಿವಿಧ ಹಂತಗಳಲ್ಲಿ ಪ್ರಸರಣ ಮೂಲಸೌಕರ್ಯ ಅಭಿವೃದ್ಧಿಪಡಿಸಲಾಗಿದೆ. ವಂದೇ ಭಾರತ್ ರೈಲು ಸಂಚಾರದ ಸಂದರ್ಭದಲ್ಲಿ ಪ್ರಮುಖ ಉಪಕೇಂದ್ರಗಳು ಮತ್ತು ಸಂಪರ್ಕ ಕೇಂದ್ರಗಳಲ್ಲಿ ತಾಂತ್ರಿಕ ಸಿಬ್ಬಂದಿಯನ್ನು ನಿಯೋಜಿಸಿ ದಿನದ 24 ಗಂಟೆಯೂ ಮೇಲ್ವಿಚಾರಣೆ ನಡೆಸಲಾಗುವುದು ಎಂದು ಡಾ. ರಾಮ್ ಪ್ರಸಾತ್ ಮನೋಹರ್ ತಿಳಿಸಿದ್ದಾರೆ. ಪಶ್ಚಿಮಘಟ್ಟದ ಹೊಸ ವಿದ್ಯುದ್ದೀಕೃತ ರೈಲು ಮಾರ್ಗದಲ್ಲಿ ವಂದೇ ಭಾರತ್ ಸೇವೆ ಆರಂಭವಾಗುತ್ತಿರುವುದು ಕರ್ನಾಟಕದ ರೈಲು ಸಂಪರ್ಕ ವ್ಯವಸ್ಥೆಯಲ್ಲಿ ಮಹತ್ವದ ಮೈಲಿಗಲ್ಲಾಗಿದೆ. ಈ ಸೇವೆಗೆ ಅಗತ್ಯವಾದ ವಿದ್ಯುತ್ ಪೂರೈಕೆಯನ್ನು ಖಚಿತಪಡಿಸುವಲ್ಲಿ ಕೆಪಿಟಿಸಿಎಲ್ ನಿರ್ಮಿಸಿರುವ ಪ್ರಸರಣ ಮೂಲಸೌಕರ್ಯ ಪ್ರಮುಖ ಪಾತ್ರ ವಹಿಸಲಿದೆ.

‘ವಾರ್ಡ್ ಒನ್’ ಅಭಿಯಾನ ಮುಂದುವರಿಕೆ

● ವಿಕ್ರಮ ವಾಹಿನಿ । ಬೆಂಗಳೂರು

ನಗರದ ಸ್ವಚ್ಛತೆ, ರಸ್ತೆ ನಿರ್ವಹಣೆ, ಪಾದಚಾರಿ ಮಾರ್ಗಗಳ ಸುಧಾರಣೆ ಹಾಗೂ ಸಾರ್ವಜನಿಕ ಸೌಲಭ್ಯಗಳ ನಿರ್ವಹಣೆಗೆ ಆದ್ಯತೆ ನೀಡುವ ಉದ್ದೇಶದಿಂದ ಬೆಂಗಳೂರು ಉತ್ತರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ‘ವಾರ್ಡ್ ಒನ್’ ಅಭಿಯಾನದಡಿ ವಿವಿಧ ಕಾರ್ಯಾಚರಣೆಗಳನ್ನು ಮುಂದುವರಿಸಲಾಗಿದೆ.

ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರ ನಿರ್ದೇಶನದಂತೆ ಹಾಗೂ ಬೆಂಗಳೂರು ಉತ್ತರ ನಗರ ಪಾಲಿಕೆ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ಅವರ ಮಾರ್ಗದರ್ಶನದಲ್ಲಿ ಬ್ಯಾಟರಾಯನಪುರ, ಸರ್ವಜ್ಞನಗರ ಮತ್ತು ಪುಲಿಕೇಶಿನಗರ ವಿಭಾಗಗಳ ಜಕ್ಕೂರು, ಸುಬ್ಬಯ್ಯನಪಾಳ್ಯ ಹಾಗೂ ಶಕ್ತಿನಗರ ವಾರ್ಡ್‌ಗಳಲ್ಲಿ ಸ್ವಚ್ಛತಾ ಮತ್ತು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗಿದೆ.

ರಸ್ತೆಗಳ ನಿರ್ವಹಣೆ, ಕಸ ಮತ್ತು ನಿರ್ಮಾಣ ತ್ಯಾಜ್ಯ ತೆರವು, ಪಾದಚಾರಿ ಮಾರ್ಗಗಳ ಸುಧಾರಣೆ, ಚರಂಡಿಗಳ ಹೂಳೆತ್ತುವಿಕೆ, ಬೀದಿ ದೀಪಗಳ ದುರಸ್ತಿ ಹಾಗೂ ಸಾರ್ವಜನಿಕ ಸ್ಥಳಗಳ ಸ್ವಚ್ಛತೆಗೆ ವಿಶೇಷ ಆದ್ಯತೆ ನೀಡಲಾಗಿದೆ.

ಅಭಿಯಾನದಡಿ ಒಟ್ಟು 3.8 ಕಿ.ಮೀ. ಉದ್ದದ ರಸ್ತೆ ವ್ಯಾಪ್ತಿಯಲ್ಲಿ ಕಾರ್ಯಾಚರಣೆ ನಡೆಸಲಾಗಿದೆ. ಮೂರು ರಸ್ತೆ ಗುಂಡಿಗಳನ್ನು ಮುಚ್ಚಲಾಗಿದ್ದು, 22 ಕಸದ ಬ್ಲಾಕ್‌ಸ್ಪಾಟ್‌ಗಳನ್ನು ತೆರವುಗೊಳಿಸಲಾಗಿದೆ. ಒಟ್ಟು 29 ಟನ್ ಕಸವನ್ನು ಸಂಗ್ರಹಿಸಿ ವಿಲೇವಾರಿ ಮಾಡಲಾಗಿದೆ. ಅಲ್ಲದೆ, 11 ನಿರ್ಮಾಣ ತ್ಯಾಜ್ಯ ಸಂಗ್ರಹಣಾ ಸ್ಥಳಗಳನ್ನು ತೆರವುಗೊಳಿಸಿ, 29 ಟನ್ ನಿರ್ಮಾಣ ತ್ಯಾಜ್ಯವನ್ನು ವಿಲೇವಾರಿ ಮಾಡಲಾಗಿದೆ.

2.1 ಕಿ.ಮೀ. ಉದ್ದದ ಪಾದಚಾರಿ ಮಾರ್ಗಗಳನ್ನು ದುರಸ್ತಿಗೊಳಿಸಲಾಗಿದ್ದು, ಎಂಟು ಪಾದಚಾರಿ ಮಾರ್ಗಗಳಲ್ಲಿನ ಅಡೆತಡೆಗಳನ್ನು ತೆರವುಗೊಳಿಸಲಾಗಿದೆ. ಒಂದು ಜಂಕ್ಷನ್ ಸುಧಾರಣೆ ಮಾಡಲಾಗಿದೆ. 1.6 ಕಿ.ಮೀ. ರಸ್ತೆ ಬದಿಯ ಚರಂಡಿಗಳ ಹೂಳೆತ್ತುವಿಕೆ ಕಾರ್ಯ ಕೈಗೊಳ್ಳಲಾಗಿದೆ. ಒಂಬತ್ತು ಬೀದಿ ದೀಪಗಳನ್ನು ದುರಸ್ತಿಗೊಳಿಸಿ, ನಾಲ್ಕು ಉದ್ಯಾನವನಗಳನ್ನು ಸ್ವಚ್ಛಗೊಳಿಸಲಾಗಿದೆ. ಇದಲ್ಲದೆ, ಸಾರ್ವಜನಿಕ ಸ್ಥಳಗಳಲ್ಲಿ ಅಳವಡಿಸಲಾಗಿದ್ದ 58 ಅನಧಿಕೃತ ಫ್ಲೆಕ್ಸ್, ಬ್ಯಾನರ್ ಮತ್ತು ಪೋಸ್ಟರ್‌ಗಳನ್ನು ತೆರವುಗೊಳಿಸಲಾಗಿದೆ.

ಅನಧಿಕೃತ ವಾಗಿ ನಿಲುಗಡೆ ಮಾಡಿದ್ದ ಒಂದು ವಾಹನವನ್ನು ತೆರವುಗೊಳಿಸಲಾಗಿದೆ. ಏಳು ಮರದ ಕೊಂಬೆಗಳನ್ನು ಕತ್ತರಿಸಿ, ಮೂರು ಟನ್ ಮರದ ತ್ಯಾಜ್ಯವನ್ನು ವಿಲೇವಾರಿ ಮಾಡಲಾಗಿದೆ. ಅಭಿಯಾನದ ಸಂದರ್ಭದಲ್ಲಿ ಸಾರ್ವಜನಿಕರಿಂದ ಬಂದ ಏಳು ದೂರುಗಳನ್ನು ಸ್ಥಳದಲ್ಲಿಯೇ ಪರಿಹರಿಸಲಾಗಿದೆ. ಎರಡು ನಾಗರಿಕ ಸಂಘಟನೆಗಳು ಹಾಗೂ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘಗಳು ಕಾರ್ಯಾಚರಣೆಯಲ್ಲಿ ಭಾಗವಹಿಸಿ ಸಹಕಾರ ನೀಡಿವೆ.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com 93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 212,